23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 346 | ನವದೆಹಲಿ | ಬೆಲೆ ₹10 | ಜೂನ್ 21 2026, ಭಾನುವಾರ



23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಜೂನ್ 21 2026, ಭಾನುವಾರ

## ಒಳಪುಟಗಳಲ್ಲಿ

ಏಳು ಹೊಸ ಬುಲೆಟ್ ರೈಲು ಯೋಜನೆಗಳಿಗೆ ಕೇಂದ್ರ ಅನುಮೋದನೆ -ಪು.4

## ಬೆಂಗಳೂರಿನಲ್ಲಿ ಇಂದು ಯೋಗ ದಿನಾಚರಣೆ

**ಬೆಂಗಳೂರು, ಜೂ.20:** ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ಭಾನುವಾರ ಸಿಎಂ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಯೋಗ ಪ್ರದರ್ಶನ ಏರ್ಪಟ್ಟಿದೆ. ವಿಧಾನಸೌಧದ ಎದುರು ಯೋಗ ದಿನಾಚರಣೆ ಆಯೋಜಿಸಲಾಗಿದೆ. ಕೇಂದ್ರ ಆಯುಷ್ ಇಲಾಖೆಯ ಮಾರ್ಗಸೂಚಿಯಂತೆ ಬೆಳಗ್ಗೆ 6 ರಿಂದ 8 ರವರೆಗೆ ನಡೆಯಲಿರುವ ಯೋಗ ದಿನಾಚರಣೆಯಲ್ಲಿ ರಾಜ್ಯಪಾಲ ಥಾವರಚಂದ್ ಗೆಹ್ಲೋತ್, ಸಿಎಂ ಡಿಕೆಶಿ, ವಿವಿಧ ಸಚಿವರು, ಹಿರಿಯ ಅಧಿಕಾರಿಗಳು, ಯೋಗ ವಿದ್ಯಾರ್ಥಿಗಳು ಸೇರಿದಂತೆ ಐದು ಸಾವಿರಕ್ಕೂ ಹೆಚ್ಚು ಜನರು ಪಾಲ್ಗೊಳ್ಳುವ ನಿರೀಕ್ಷೆಯಿದೆ. ಬಿಜೆಪಿ ಕಚೇರಿಯಲ್ಲೂ ಯೋಗದಿನ ಬೆಂಗಳೂರಿನ ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ 'ಜಗನ್ನಾಥ ಭವನ'ದಲ್ಲಿ ಭಾನುವಾರ ಬೆಳಿಗ್ಗೆ 6.30 ಗಂಟೆಗೆ ವಿಶ್ವ ಯೋಗ ದಿನಾಚರಣೆಯ ಪ್ರಯುಕ್ತ ಯೋಗಾಸನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಶಾಸಕ ಡಾ. ಸಿ.ಎನ್.ಅಶ್ವತ್ಥನಾರಾಯಣ್, ಚಿತ್ರ ನಟಿಕಾರುಣ್ಯ ಗೌಡ, ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್. ಹರೀಶ್, ಬೆಂಗಳೂರು ಕೇಂದ್ರ ಜಿಲ್ಲಾಧ್ಯಕ್ಷ ಸಪ್ತಗಿರಿ ಗೌಡ ಮತ್ತು ಪಕ್ಷದ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ.

# ಒಡಿಶಾದಲ್ಲಿ 47600 ಕೋಟಿ ರೂ. ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ಚಾಲನೆ

**ನವದೆಹಲಿ, ಜೂ.20:** ಒಡಿಶಾದ ಮಯೂರ್‌ಭಂಜ್ ಜಿಲ್ಲೆಯ ರಾಯರಂಗಪುರದಲ್ಲಿ 47,600 ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನ ಮಂತ್ರಿ ನರೇಂದ್ರ ಮೋದಿ ಶನಿವಾರ ಚಾಲನೆ ನೀಡಿದರು.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಹುಟ್ಟೂರು ಪಹಾಡ್‌ಪುರವನ್ನು ಮಾದರಿ ಸೌರಗ್ರಾಮವನ್ನಾಗಿ ಪರಿವರ್ತಿಸಲಾಗುವುದು ಎಂದು ಘೋಷಿಸಿದರು.

ಇಬ್ಬರು ನಾಯಕರು ಪಹಾಡ್‌ಪುರ ಗ್ರಾಮಕ್ಕೆ ಭೇಟಿ ನೀಡಿದಾಗ, ಪವಿತ್ರ ಸಂತಾಲಿ ಜಹೇರಾ ಮತ್ತು ಹೋ ಜಹೇರಾ ತೋಪುಗಳಲ್ಲಿ ಪ್ರಾರ್ಥನೆ ಸಲ್ಲಿಸಿದಾಗ ಮತ್ತು ಸ್ಥಳೀಯ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದಾಗ, ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ ನೇತೃತ್ವದಲ್ಲಿ ಒಡಿಶಾದಲ್ಲಿ ಬಿಜೆಪಿ ಸರ್ಕಾರ ಎರಡು ವರ್ಷಗಳನ್ನು ಪೂರೈಸಿದ ನಂತರ ರಾಯರಂಗಪುರದಲ್ಲಿ ನಡೆದ ರಾಜ್ಯಮಟ್ಟದ ಕಾರ್ಯಕ್ರಮದಲ್ಲಿ ಭಾಗವಹಿಸುವ ಮೊದಲು ಪ್ರಧಾನಿಯವರು ಅಧ್ಯಕ್ಷೆ ದ್ರೌಪದಿ ಮುರ್ಮು ಅವರ ತವರು ಜಿಲ್ಲೆಯಲ್ಲಿ ಅವರೊಂದಿಗೆ ಸೇರಿಕೊಂಡರು.

ಸಭೆಯನ್ನುದ್ದೇಶಿಸಿ ಮಾತನಾಡಿದ ಮೋದಿ, ಅಧ್ಯಕ್ಷೆ ಮುರ್ಮು ಅವರಿಗೆ ಹುಟ್ಟುಹಬ್ಬದ ಶುಭಾಶಯಗಳನ್ನು ತಿಳಿಸಿದರು ಮತ್ತು ಮಯೂರ್ಭಂಜ್‌ನ ಸಣ್ಣ ಬುಡಕಟ್ಟು ಗ್ರಾಮದಿಂದ ದೇಶದ ಅತ್ಯುನ್ನತ ಸಾಂವಿಧಾನಿಕ ಕಚೇರಿಗೆ ಅವರ ಪ್ರಯಾಣವನ್ನು ಶ್ಲಾಘಿಸಿದರು. ಪಹಾಡ್‌ಪುರಕ್ಕೆ ಅವರ ಭೇಟಿಯನ್ನು ಉಲ್ಲೇಖಿಸಿದ ಮೋದಿ, ಪಹಾಡ್‌ಪುರವನ್ನು ಸೌರ ಗ್ರಾಮವಾಗಿ ಅಭಿವೃದ್ಧಿಪಡಿಸಲಾಗುವುದು ಎಂದು ಘೋಷಿಸಿದರು.

ಬಿಜೆಪಿಯ "ಡಬಲ್–ಎಂಜಿನ್ ಸರ್ಕಾರ"ದ ಅಡಿಯಲ್ಲಿ ಒಡಿಶಾ ತ್ವರಿತ ಪ್ರಗತಿಯನ್ನು ಕಾಣುತ್ತಿದೆ. ರೈಲ್ವೆ, ರಸ್ತೆಗಳು, ಇಂಧನ, ನಗರ ಮೂಲಸೌಕರ್ಯ ಮತ್ತು ಕೈಗಾರಿಕೆ ಮತ್ತಿತರ ಕ್ಷೇತ್ರಗಳಲ್ಲಿ ಹೊಸದಾಗಿ ಪ್ರಾರಂಭಿಸಲಾದ

### ಸೌರಗ್ರಾಮವಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ಹುಟ್ಟೂರು ಪಹಾಡ್‌ಪುರ



ಯೋಜನೆಗಳ ಮಹತ್ವವನ್ನು ಎತ್ತಿ ತೋರಿಸಿದರು. "ಪೂರ್ವ ಭಾರತದ ಅಭಿವೃದ್ಧಿಯ ಮೂಲಕ ಭಾರತದ ಅಭಿವೃದ್ಧಿ ಕೇಂದ್ರ ಸರ್ಕಾರದ ದೃಷ್ಟಿಕೋನವಾಗಿದೆ" ಎಂದು ಶನಿವಾರ ಪ್ರಾರಂಭಿಸಲಾದ 47,600 ಕೋಟಿ ರೂ. ಮೌಲ್ಯದ ಯೋಜನೆಗಳು ಸಂಪರ್ಕವನ್ನು ಬಲಪಡಿಸುತ್ತದೆ, ಸಾರ್ವಜನಿಕ ಸೇವೆಗಳನ್ನು ಸುಧಾರಿಸುತ್ತದೆ, ಉದ್ಯೋಗಾವಕಾಶ ಸೃಷ್ಟಿಸುತ್ತದೆ ಮತ್ತು ಒಡಿಶಾದಾದ್ಯಂತ ಆರ್ಥಿಕ ಬೆಳವಣಿಗೆ ಹೆಚ್ಚಿಸುತ್ತದೆ. ರಾಜ್ಯವು ಪ್ರಮುಖ ಹೂಡಿಕೆ ತಾಣವಾಗಿ ಹೊರಹೊಮ್ಮಿದೆ ಎಂದು ಮೋದಿ ಬಣ್ಣಿಸಿದರು. ಮತ್ತು ಉತ್ಕರ್ಷ್ ಒಡಿಶಾದಂತಹ ಉಪಕ್ರಮಗಳು ಸುಮಾರು 20 ಲಕ್ಷ ಕೋಟಿ ರೂ. ಮೌಲ್ಯದ ಹೂಡಿಕೆ ಪ್ರಸ್ತಾಪಗಳನ್ನು ಆಕರ್ಷಿಸಿವೆ. ರಾಜ್ಯದಲ್ಲಿ ಈಗಾಗಲೇ 3.5 ಲಕ್ಷ ಕೋಟಿ ರೂ.ಗಳಿಗೂ ಹೆಚ್ಚು ಮೌಲ್ಯದ ಮೆಗಾ ಯೋಜನೆಗಳು ಅನುಷ್ಠಾನದಲ್ಲಿವೆ ಎಂದು ಹೇಳಿದರು.

ಮೂಲಸೌಕರ್ಯ ವಿಸ್ತರಣೆಯನ್ನು ಎತ್ತಿ ತೋರಿಸಿದ ಪ್ರಧಾನಿ, ಒಡಿಶಾದ ವಿದ್ಯುತ್ ಕ್ಷೇತ್ರದಲ್ಲಿ 6,000 ಕೋಟಿ ರೂ.ಗಳಿಗೂ ಹೆಚ್ಚು ಹೂಡಿಕೆ ಮಾಡಲಾಗುತ್ತಿದೆ ಮತ್ತು ಸಮೃದ್ಧ ನಗರ ಯೋಜನೆಯ ಮೂಲಕ ನಗರಾಭಿವೃದ್ಧಿಯನ್ನು ವೇಗಗೊಳಿಸಲಾಗುತ್ತಿದೆ ಎಂದು ಹೇಳಿದರು. "ರೈಲ್ವೆ, ಹೆದ್ದಾರಿಗಳು, ಆರ್ಥಿಕ ಕಾರಿಡಾರ್‌ಗಳು, ಬಂದರುಗಳು, ಸೆಮಿಕಂಡಕ್ಟರ್, ಹಸಿರು ಇಂಧನ ಮತ್ತು ಆಧುನಿಕ ಕೈಗಾರಿಕೆಗಳಲ್ಲಿ ದಾಖಲೆಯ ಹೂಡಿಕೆಗಳ ಮೂಲಕ ಒಡಿಶಾದ ಶಕ್ತಿಯನ್ನು ಸಂಪೂರ್ಣವಾಗಿ ಬಳಸಿಕೊಳ್ಳಲು ಕೇಂದ್ರ ಮತ್ತು ರಾಜ್ಯ ಸರ್ಕಾರ ಒಟ್ಟಾಗಿ ಕೆಲಸ ಮಾಡುತ್ತಿವೆ" ಎಂದು ಅವರು ಹೇಳಿದರು. ಒಡಿಶಾ ಸರ್ಕಾರವು ಕೈಗೊಂಡ ಹಲವಾರು ಕಲ್ಯಾಣ ಕ್ರಮಗಳನ್ನು ಪ್ರಧಾನಿ ವಿವರಿಸಿದರು, ಇದರಲ್ಲಿ ಕ್ವಿಂಟಾಲ್‌ಗೆ 3,100 ರೂ.ಗಳಿಗೆ ಭತ್ತ ಸಂಗ್ರಹಣೆ, ಸುಭದ್ರಾ ಯೋಜನೆಯಡಿ ಮಹಿಳೆಯರಿಗೆ ಆರ್ಥಿಕ ನೆರವು, ಆಯುಷ್ಮಾನ್ ಭಾರತ್ ಅನುಷ್ಠಾನ, ಮಾಧೋಸಿಂಗ್ ಹಾತ್‌ಖರ್ಚಾ ಯೋಜನೆಯ ಮೂಲಕ ಬುಡಕಟ್ಟು ವಿದ್ಯಾರ್ಥಿಗಳಿಗೆ ಬೆಂಬಲ ಮತ್ತು ಪುರಿಯ ಜಗನ್ನಾಥ ದೇವಾಲಯದ ನಾಲ್ಕು ದ್ವಾರಗಳನ್ನು ಮತ್ತೆ ತೆರೆಯಲು ತೆಗೆದುಕೊಂಡ ಕ್ರಮಗಳು ಸೇರಿವೆ.

ಮೋದಿ ತಮ್ಮ ಭಾಷಣದ ಗಣನೀಯ ಭಾಗವನ್ನು ಬುಡಕಟ್ಟು ಕಲ್ಯಾಣಕ್ಕೆ ಮೀಸಲಿಟ್ಟರು, ಬುಡಕಟ್ಟು ಸಮುದಾಯಗಳ ಉನ್ನತಿ ತಮ್ಮ ಸರ್ಕಾರದ ಪ್ರಮುಖ ಆದ್ಯತೆಯಾಗಿ ಉಳಿದಿದೆ ಎಂದು ಒತ್ತಿ ಹೇಳಿದರು.

ಬುಡಕಟ್ಟು ಸಮುದಾಯಗಳೊಂದಿಗೆ ಅಧ್ಯಕ್ಷ ಮುರ್ಮು ಅವರ ದೀರ್ಘ ಸಂಬಂಧವನ್ನು ಉಲ್ಲೇಖಿಸಿ, ಬುಡಕಟ್ಟು ಪ್ರದೇಶಗಳು ಐತಿಹಾಸಿಕವಾಗಿ ಅಗತ್ಯ ಸೇವೆಗಳು ಮತ್ತು ಮೂಲಸೌಕರ್ಯಗಳಿಂದ ವಂಚಿತವಾಗಿವೆ ಮತ್ತು ಕೇಂದ್ರೀಕೃತ ಹಸ್ತಕ್ಷೇಪದ ಅಗತ್ಯವಿದೆ ಎಂದು ಪ್ರಧಾನಿ ಮೋದಿ ಹೇಳಿದರು.

# ಸಾರ್ವಜನಿಕರ ಕುಂದುಕೊರತೆ ಆಲಿಸಲು ಪ್ರಜಾಸೇವೆ ಇಲಾಖೆ

### ಸಚಿವರಿಗೆ ಪ್ರತ್ಯೇಕ ಜವಾಬ್ದಾರಿ: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

**ಬೆಂಗಳೂರು, ಜೂ.20:** ಸಾರ್ವಜನಿಕರ ಕುಂದುಕೊರತೆಗಳು, ಸಾರ್ವಜನಿಕ ಹೋರಾಟಗಳ ಅಹವಾಲುಗಳನ್ನು ಆಲಿಸಲು ಪ್ರಜಾಸೇವೆ ಇಲಾಖೆಯನ್ನು ಹೊಸದಾಗಿ ಪ್ರಾರಂಭ ಮಾಡಲಾಗುತ್ತಿದೆ. ಸಚಿವರಿಗೆ ಇದರ ಪ್ರತ್ಯೇಕ ಜವಾಬ್ದಾರಿ ವಹಿಸಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ಸಚಿವ ಸಂಪುಟ ಸಭೆ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜನರ ಕಷ್ಟ ಭಾವನೆಗಳನ್ನು ಅರಿತು, ಕಾನೂನು ಚೌಕಟ್ಟಿನಲ್ಲಿ ಸ್ಪಂದಿಸುವುದು ನಮ್ಮ ಸರ್ಕಾರದ ಗುರಿ. ಹೀಗಾಗಿ ಈ ಇಲಾಖೆಗೆ ಹಿರಿಯ ಐಎಎಸ್ ಅಧಿಕಾರಿಯನ್ನು ನೇಮಿಸಲಾಗುವುದು. ಅವರು ಎಲ್ಲಾ ಸಮಸ್ಯೆಗಳನ್ನು ಪರಿಶೀಲನೆ ಮಾಡಿ ಮಾಹಿತಿ ನೀಡುವ ಕೆಲಸ ಮಾಡಲಾಗುವುದು. ಈ ಮೂಲಕ ಜನರಿಗೆ ನ್ಯಾಯ ಒದಗಿಸಲು ಸರ್ಕಾರ ಮುಂದಾಗಿದೆ. ನನಗೆ ಹಾಗೂ ಇತರೇ ಸಚಿವರಿಗೆ ನೀಡಿದ ಮನವಿಗಳನ್ನು ಈ ಇಲಾಖೆ ಅಡಿಯಲ್ಲಿ ತರಲು ಆಲೋಚಿಸಲಾಗಿದೆ ಎಂದರು.

ಜಿಲ್ಲಾ ಉಸ್ತುವಾರಿ ಸಚಿವರು ಜವಾಬ್ದಾರಿಯ ಜಿಲ್ಲೆಯ ಕ್ಷೇತ್ರಗಳಲ್ಲಿ ವಾರಕ್ಕೆ ಒಮ್ಮೆ ಸ್ಥಳೀಯ ಶಾಸಕರೊಂದಿಗೆ ಈ ಇಲಾಖೆ ಮೂಲಕ ಜನಸ್ಪಂದನ ಸಭೆಗಳನ್ನು ನಡೆಸಬೇಕು. ಆನಂತರ ಅದನ್ನು ಪರಿಶೀಲಿಸುವ ಕೆಲಸ ಮಾಡಲಾಗುವುದು ಎಂದರು.

**ಯಾದಗಿರಿಗೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ:** ಯಾದಗಿರಿಯ ವೈದ್ಯಕೀಯ ವಿಜ್ಞಾನ ಶಿಕ್ಷಣ ಸಂಸ್ಥೆಗಳ ಆವರಣದಲ್ಲಿ 100 ಕೋಟಿ ರೂ. ವೆಚ್ಚದಲ್ಲಿ ನೂತನ 200 ಹಾಸಿಗೆ ಸಾಮರ್ಥ್ಯದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣಕ್ಕೆ



ಅನುಮೋದನೆ ನೀಡಲಾಗಿದೆ. 18 ಕೋಟಿ ರೂ. ವೆಚ್ಚದಲ್ಲಿ ಕಾರವಾರ ವೈದ್ಯಕೀಯ ವಿಜ್ಞಾನ ಶಿಕ್ಷಣ ಸಂಸ್ಥೆಗಳ ಆರು ಸಿವಿಲ್ ಕಾಮಗಾರಿಗಳಿಗೆ ಮತ್ತು ಬೆಂಗಳೂರು ವೈದ್ಯಕೀಯ ಸಂಶೋಧನಾ ಆಸ್ಪತ್ರೆಗೆ ಸುಮಾರು 60 ಕೋಟಿ ವೆಚ್ಚದಲ್ಲಿ ವೈದ್ಯಕೀಯ ಉಪಕರಣಗಳ ಖರೀದಿಗೆ ಆಡಳಿತಾತ್ಮಕ ಅನುಮೋದನೆ" ಎಂದು ಡಿ.ಕೆ. ಶಿವಕುಮಾರ್ ಮಾಹಿತಿ ನೀಡಿದರು.

ಕೇಂದ್ರದ ಯೋಜನೆಗಳನ್ನು ರಾಜ್ಯಕ್ಕೆ ತರುವುದು ಹೇಗೆ ಯಾವ ಯೋಜನೆಗಳಿಗೆ ಅರ್ಜಿ ಸಲ್ಲಿಸಬೇಕು. ಯಾವ ಯೋಜನೆಗಳು ಇತರೇ ರಾಜ್ಯಗಳಲ್ಲಿದೆ. ತಮಿಳುನಾಡು, ಆಂಧ್ರ ಪ್ರದೇಶ, ಗುಜರಾತ್ ಸೇರಿದಂತೆ ಇತರೇ ರಾಜ್ಯಗಳು ಯಾವ ಯೋಜನೆಗಳನ್ನು ತೆಗೆದುಕೊಂಡು ಹೋಗುತ್ತಿದ್ದಾರೆ ಎಂದು ತಿಳಿಯಲು ಹೊಸ ಅಧಿಕಾರಿಗಳ ತಂಡ ರಚಿಸಿ ನೇಮಕ ಮಾಡಲಾಗುತ್ತಿದೆ ಎಂದರು.

ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ಕಳಸಾಪೂರ ಗ್ರಾಮದಲ್ಲಿನ ಒಟ್ಟು 18 ಎಕರೆ ಜಮೀನಿನಲ್ಲಿ 50:50ರ ಅನುಪಾತದಲ್ಲಿ ರೈತರು ಹಾಗೂ ಪ್ರಾಧಿಕಾರದ ಸಹಭಾಗಿತ್ವದೊಂದಿಗೆ ರೂ.19.69 ಕೋಟಿಗಳ ಅಂದಾಜು ಮೊತ್ತದಲ್ಲಿ ವಸತಿ ಯೋಜನೆಯನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಎಂದು ತಿಳಿಸಿದರು.

ಬೆಂಗಳೂರು ಗ್ರಾಮಾಂತರದ ದೇವನಹಳ್ಳಿಯ ಚನ್ನರಾಯಪಟ್ಟಣ ಹೋಬಳಿಯ 13 ಗ್ರಾಮಗಳ 1,777 ಎಕರೆ ಜಮೀನಿನ ಪೈಕಿ ಸ್ವಯಂಪ್ರೇರಿತವಾಗಿ ಜಮೀನು ನೀಡಲು ರೈತರು ಮುಂದೆ ಬಂದಿದ್ದಾರೆ. ಇದರ ಕಾಲಾವಕಾಶವನ್ನು 31.10.2026 ರವರೆಗೆ ವಿಸ್ತರಿಸಲು ಅನುಮತಿ ನೀಡಲಾಗಿದೆ ಎಂದು ಹೇಳಿದರು.

ಒಂದಷ್ಟು ಕ್ಯಾಬಿನೆಟ್ ಉಪ ಸಮಿತಿಗಳ ಜವಾಬ್ದಾರಿ ಮುಖ್ಯಮಂತ್ರಿಗೆ ನೀಡಲಾಗಿದೆ. ಕುಡಿಯುವ ನೀರಿನ ವಿಚಾರವಾಗಿ ಸಚಿವಸಂಪುಟ ವಿಸ್ತರಣೆಯಾದ ತಕ್ಷಣ ಜವಾಬ್ದಾರಿ ನೀಡಲಾಗುವುದು. ಪ್ರಸ್ತುತ ಈಗ ಇರುವವರೇ ನೀರಿನ ಸಮಸ್ಯೆ ಬರದಂತೆ ನಿಗಾವಹಿಸಬೇಕು ಎಂದು ತಿಳಿಸಲಾಗಿದೆ ಎಂದು ಹೇಳಿದರು.

ನೂತನ ಸಚಿವಾಲಯದ ಮೂಲಕ ಎಲ್ಲಾ ಇಲಾಖೆಗಳ ಸಮನ್ವಯತೆಗೆ ಯಾವ ಕ್ರಮ ಕೈಗೊಳ್ಳುವಿರಿ ಎಂದು ಕೇಳಿದಾಗ, ನಮಗೆ ಜನರ ಹಿತ ಮುಖ್ಯ. ಇಲ್ಲಿ ಯಾರೂ ಸಹ ಸರ್ವಜ್ಞರಲ್ಲ. ಸಕಾಲ, ಇ– ಆಡಳಿತ ಸೇರಿದಂತೆ ಎಲ್ಲವನ್ನು ಬಳಸಿ ಜನರ ಸಮಸ್ಯೆ ನಿವಾರಿಸಲಾಗುವುದು. ಮಾಧ್ಯಮದಲ್ಲಿ ಬಂದಂತಹ ವಿಚಾರಗಳನ್ನು ತಿಳಿದು ನಾವೂ ಕ್ರಮ ತೆಗೆದುಕೊಳ್ಳುತ್ತಿದ್ದೇವೆ. ಮಾಧ್ಯಮಗಳ ಗಮನಕ್ಕೆ ಬಂದಿದ್ದನ್ನು ಸರ್ಕಾರದ ಗಮನಕ್ಕೆ ತರಬೇಕು.

### ದೆಹಲಿಯಲ್ಲಿ ಕರ್ನಾಟಕ ಭವನ-4

ಯುಪಿಎಸ್ ಸೇರಿದಂತೆ ಇತರೇ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಾಗುವ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಹಾಗೂ ಒಂದೇ ಸೂರಿನಡಿ ಎಲ್ಲಾ ಅನುಕೂಲ ದೊರೆಯಬೇಕು ಎನ್ನುವ ಕಾರಣಕ್ಕೆ ಕೆಐಡಬ್ಲ್ಯೂಬಿ ವತಿಯಿಂದ ನವ ದೆಹಲಿಯಲ್ಲಿ ಕರ್ನಾಟಕ ಭವನ 4 ಅನ್ನು ನಿರ್ಮಾಣ ಮಾಡಲು 80 ಕೋಟಿಗೆ ಅನುಮೋದನೆ ನೀಡಲಾಗಿದೆ. ಪರಿಶಿಷ್ಟ ಜಾತಿ ಹಾಗೂ ಪಂಗಡ ಹಾಗೂ ಶೇ 50, ಇತರೇ ಸಮುದಾಯದ ವಿದ್ಯಾರ್ಥಿಗಳಿಗೆ ಶೇ 50 ರಷ್ಟು ಮೀಸಲು ಇಡಲಾಗಿದೆ ಎಂದರು. ಸುಪ್ರೀಂ ಕೋರ್ಟ್‌ನಲ್ಲಿರುವ ವ್ಯಾಜ್ಯಗಳ ಇತ್ಯರ್ಥಕ್ಕೆ ದೆಹಲಿಯ ಕಾನೂನು ವಿಭಾಗವನ್ನು ಮತ್ತಷ್ಟು ಸದೃಢಗೊಳಿಸಲು ಪ್ರತ್ಯೇಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ರೆಸಿಡೆನ್ಸಿಯಲ್ ಕಮಿಷನರ್ ಕಚೇರಿ ಕಾರ್ಯವೈಖರಿ ನನಗೆ ಸಮಾಧಾನ ತಂದಿಲ್ಲ. ಆದ ಕಾರಣಕ್ಕೆ ಅದನ್ನು ಹೊಸದಾಗಿ ಸಮೀಕರಿಸಲಾಗುತ್ತಿದೆ ಎಂದು ಡಿ.ಕೆ. ಶಿವಕುಮಾರ್ ಮಾಹಿತಿ ನೀಡಿದರು.

### ವಿದ್ಯುತ್ ಸಂಪರ್ಕಕ್ಕೆ 15 ದಿನ ಅವಕಾಶ

**31.05.2026ರ ಒಳಗೆ ಪೂರ್ಣಗೊಂಡಿರುವ ಎಲ್ಲಾ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ವಿನಾಯಿತಿ ನೀಡಲಾಗಿದ್ದು, ಈ ವಿಚಾರವಾಗಿ ಸರ್ಕಾರಿ ಆದೇಶ ಬಂದ ದಿನದಿಂದ 15 ದಿನಗಳ ಕಾಲಾವಕಾಶ ನೀಡಲಾಗುವುದು. ಕಟ್ಟಡ ಮಾಲೀಕರು ಕಟ್ಟಡದ ಜೊತೆಗಿನ ಫೋಟೋ ಹಾಗೂ ಜಿಪಿಎಸ್ ದಾಖಲೆ ಕಡ್ಡಾಯವಾಗಿ ಸಲ್ಲಿಕೆ ಮಾಡಬೇಕು ಎಂದರು. "ಗ್ರಾಮೀಣ ಭಾಗದ, ರೇಷ್ಮೆ ಸಾಕಣೆ ಮನೆ, ಕೊಟ್ಟಿಗೆಗಳಿಗೆ ವಿನಾಯಿತಿ ನೀಡಲಾಗಿದೆ. ಹೊಸದಾಗಿ ನಿರ್ಮಾಣ ಮಾಡಿದರೆ ಅವಕಾಶವಿಲ್ಲ. ಇಂಧನ ಸಚಿವರು, ಗ್ರಾಮೀಣಾಭಿವೃದ್ಧಿ, ನಗರಾಭಿವೃದ್ಧಿ ಸಚಿವರ ಬಳಿ ಇದರ ಬಗ್ಗೆ ವಿವರವಾಗಿ ಚರ್ಚಿಸಲಾಗಿದೆ ಎಂದು ಡಿ.ಕೆ. ಶಿವಕುಮಾರ್ ಮಾಹಿತಿ ನೀಡಿದರು.**

### ಬಸ್ ಪ್ರಯಾಣದರ ಏರಿಕೆ; ಜನರಿಗೆ ಹೊರೆಯಾಗದಂತೆ ತೀರ್ಮಾನ

ಬಸ್ ಟಿಕೆಟ್ ದರ ಏರಿಕೆ ವಿಚಾರವಾಗಿ ಕೇಳಿದಾಗ, ಖಾಸಗಿ ಹಾಗೂ ನಿಗಮದ ಡಿಪೋಗಳಲ್ಲಿನ ಡೀಸೆಲ್ ಬೆಲೆ ವ್ಯತ್ಯಾಸ ದರ ಸುಮಾರು 40 ರೂಪಾಯಿಯಷ್ಟಿದೆ. ಇದು ಗಾಬರಿಯಾಗುವ ಸಂಖ್ಯೆ. ಡೀಸೆಲ್ ಬೆಲೆ ಹೆಚ್ಚಾದರೆ ಟಿಕೆಟ್ ಬೆಲೆ ಹೆಚ್ಚಳ ಆಗಬೇಕು ಎಂದು ಈ ಹಿಂದೆ ತೀರ್ಮಾನ ಮಾಡಲಾಗಿತ್ತು. ಇದರ ಬಗ್ಗೆ ಮತ್ತೊಮ್ಮೆ ಪರಿಶೀಲನೆ ಮಾಡಬೇಕು. ಕೆಎಸ್ ಆರ್ ಟಿಸಿಯೂ ಉಳಿಬೇಕು. ಜನರಿಗೂ ಅನುಕೂವಾಗಬೇಕು. ಏಕೆಂದರೆ ಪ್ರಧಾನ ಮಂತ್ರಿಗಳೇ ಸಾರ್ವಜನಿಕ ಸಾರಿಗೆಗಳನ್ನು ಬಳಸಿ ಇಂಧನ ಉಳಿಸಿ ಎಂದು ಮಾರ್ಗದರ್ಶನ ನೀಡಿದ್ದಾರೆ. ಇದರ ಬಗ್ಗೆ ಜನರ ಹಿತ ದೃಷ್ಟಿಯಲ್ಲಿಟ್ಟು ಕೊಂಡು ತೀರ್ಮಾನ ಮಾಡಲಾಗುವುದು. ಖಾಸಗಿಯವರು ಡಿಪೋಗಳ ಬದಲಾಗಿ ಸಾರ್ವಜನಿಕರಿಗೆ ಇರುವ ಬಂಕ್ ಗಳಲ್ಲಿ ಡೀಸೆಲ್ ಖರೀದಿ ಮಾಡುತ್ತಿದ್ದಾರೆ. ಇದರ ಬಗ್ಗೆ ವರದಿ ಕೇಳಿದ್ದೇನೆ ಎಂದು ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಮಾಹಿತಿ ನೀಡಿದರು.

### 620 ಹೊಸಬಸ್ ಖರೀದಿ

**620 ನೂತನ ಬಸ್‌ಗಳ ಖರೀದಿಗೆ 235 ಕೋಟಿ ರೂ. ವೆಚ್ಚ ಸೇರಿದಂತೆ ಎಲ್ಲಾ ಸಾರಿಗೆ ನಿಗಮಗಳ ಅಡಿಯಲ್ಲಿ 11 ಕಡೆ ಎಲೆಕ್ಟ್ರಿಕ್ ಬಸ್‌ಗಳ ಡಿಪೋಗಳನ್ನು ತೆರೆಯಲು 112 ಕೋಟಿ ವೆಚ್ಚ ಮಾಡಲಾಗುವುದು. 30 ಕೋಟಿ ರೂ. ವೆಚ್ಚದಲ್ಲಿ ಸಂಡೂರು ತಾಲ್ಲೂಕು ಕೇಂದ್ರದಲ್ಲಿ ಸುಸಜ್ಜಿತ ಬಸ್ ನಿಲ್ದಾಣ ನಿರ್ಮಾಣ. 620 ಬಸ್‌ಗಳ ಪೈಕಿ ಗ್ರಾಮೀಣ ಪ್ರದೇಶಗಳಿಗೆ 400 ಬಸ್ ಗಳು ಹಾಗೂ ವಾಯುವ್ಯ ಸಾರಿಗೆ ನಿಗಮಕ್ಕೆ 220 ಬಸ್‌ಗಳ ಖರೀದಿಗೆ ಅನುಮತಿ ನೀಡಲಾಗಿದೆ ಎಂದರು.**

# ಇಂದು ದೇಶದ್ಯಾಂತ ನೀಟ್–ಯುಜಿ ಮರುಪರೀಕ್ಷೆ

**ನವದೆಹಲಿ, ಜೂ.20: ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ದೇಶಾದ್ಯಂತ ಭಾರಿ ಸಂಚಲನ ಸೃಷ್ಟಿಸಿದೆ. ಭಾರಿ ಭದ್ರತೆಯಲ್ಲಿ ಭಾನುವಾರ ನೀಟ್–ಯುಜಿ ಮರುಪರೀಕ್ಷೆ ನಡೆಸಲಾಗುತ್ತಿದೆ. ದೇಶದ 551 ನಗರಗಳಲ್ಲಿ ಪರೀಕ್ಷೆ ನಡೆಯುತ್ತಿದ್ದು ಈ ಹಿನ್ನೆಲೆ ಶನಿವಾರ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ರಾಷ್ಟ್ರವ್ಯಾಪಿ ಅಣಕು ತಾಲೀಮು ನಡೆಸಿತು.**

ನೀಟ್ ಪರೀಕ್ಷೆಗೆ ಇದುವರೆಗೂ ನೋಡಿರದ ರೀತಿಯ ಭದ್ರತಾ ವ್ಯವಸ್ಥೆಯನ್ನು ಎನ್‌ಟಿಎ ನಿಯೋಜಿಸಿದ್ದು, ಈ ಸಂಬಂಧ ಶನಿವಾರ ಅಣುಕು ಕಾರ್ಯಾಚರಣೆ ನಡೆಸಲಾಯಿತು. ಬೆಳಗ್ಗೆ 9 ಗಂಟೆಯಿಂದ ರಾತ್ರಿ 8 ಗಂಟೆವರೆಗೂ ಪೂರ್ಣ ಪ್ರಮಾಣದ ಅಭ್ಯಾಸ ನಡೆಯಲಿದೆ. ಪ್ರಶ್ನೆಪತ್ರಿಕೆ ವಿತರಣೆ, ಉತ್ತರ ಪತ್ರಿಕೆ ಸಂಗ್ರಹ ಮತ್ತು ಸಾಗಣೆ ಸೇರಿದಂತೆ ಪರೀಕ್ಷಾ ಪ್ರಕ್ರಿಯೆಯ ಪ್ರತಿಯೊಂದು ಹಂತವನ್ನು ಅಣುಕು ಕಾರ್ಯಾಚರಣೆ ಮೂಲಕ ಅಭ್ಯಾಸ ಮಾಡಲಾಯಿತು. ಭಾನುವಾರ ದೇಶಾದ್ಯಂತ 5,500ಕ್ಕೂ ಹೆಚ್ಚು ಪರೀಕ್ಷಾ ಕೇಂದ್ರಗಳಿಗೆ ಹಿಂದೆಂದಿಗಿಂತಲೂ ಹೆಚ್ಚಿನ ಭದ್ರತಾ ವ್ಯವಸ್ಥೆ ನಿಯೋಜಿಸಲಾಗಿದೆ ಆಯಾ ಜಿಲ್ಲಾಡಳಿತ, ರಾಜ್ಯ ಪೊಲೀಸ್ ಪಡೆಗಳು ಮತ್ತು ಕೇಂದ್ರ ಸರ್ಕಾರದ ವಿಶೇಷ ಭದ್ರತಾ ತಂಡಗಳನ್ನ ಒಳಗೊಂಡಂತೆ ಮೂರು ಹಂತದ ಭದ್ರತೆ ನಿಯೋಜಿಸಲಾಗಿದೆ ಸುಮಾರು 2.5 ಲಕ್ಷ ಪೊಲೀಸ್ ಸಿಬ್ಬಂದಿಯನ್ನು ಭದ್ರತೆಗೆ ನಿಯೋಜಿಸಲಾಗುತ್ತಿದೆ. ಇದಲ್ಲದೇ 15,000 ಅರೆಸೇನಾ ಸಿಬ್ಬಂದಿಯನ್ನು ಪ್ರಶ್ನೆಪತ್ರಿಕೆಗಳ ಸಾಗಣೆ ಮತ್ತು ಪರೀಕ್ಷೆ ನಂತರ ಉತ್ತರ ಪತ್ರಿಕೆಗಳನ್ನು ಸುರಕ್ಷಿತವಾಗಿ ಹಿಂದಿರುಗಿಸುವ ಕಾರ್ಯ ಮಾಡಲಿದ್ದಾರೆ ಪರೀಕ್ಷಾ ಕಣ್ಗಾವಲಿಗಾಗಿ 1.5 ಲಕ್ಷ ಸಿಸಿಟಿವಿ ಕ್ಯಾಮೆರಾಗಳು ಮತ್ತು 15,000 ಸಿಗ್ನಲ್ ಜಾಮರ್‌ಗಳನ್ನು ಅಳವಡಿಸಿದ್ದಾರೆ

**22 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ ಭಾಗಿ:** 22.8 ಲಕ್ಷ ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಾಯಿಸಿ ಕೊಂಡಿದ್ದಾರೆ, ದೇಶದ 551 ನಗರಗಳು ಮತ್ತು 14 ಅಂತಾರಾಷ್ಟ್ರೀಯ ಸ್ಥಳಗಳಲ್ಲಿ 5,500 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ.

### ವಾಯುಪಡೆ ಹೆಲಿಕಾಪ್ಟರ್ ಮೂಲಕ ಪ್ರಶ್ನೆಪತ್ರಿಕೆ ರವಾನೆ

**ಭದ್ರತಾ ಕಾರ್ಯದ ಭಾಗವಾಗಿ ವಿವಿಧ ರಾಜ್ಯಗಳ ರಾಜಧಾನಿಗಳಲ್ಲಿರುವ 18 ನೋಡಲ್ ಕೇಂದ್ರಗಳಿಗೆ ಭಾರತೀಯ ವಾಯುಪಡೆಯು ಪ್ರಶ್ನೆಪತ್ರಿಕೆಗಳನ್ನು ವಿಮಾನದ ಮೂಲಕ ಸಾಗಿಸಲಿದೆ. ಬಿಗಿ ಭದ್ರತಾ ವ್ಯವಸ್ಥೆಯಲ್ಲಿ ಈ ಕೇಂದ್ರಗಳಿಗೆ ಪತ್ರಿಕೆಗಳನ್ನು ಸಾಗಿಸಲು MI–17 ಹೆಲಿಕಾಪ್ಟರ್‌ಗಳನ್ನು ಬಳಸಲಾಗುತ್ತದೆ. ಪ್ರಶ್ನೆ ಪತ್ರಿಕೆಗಳು ನಿಗದಿತ ಕೇಂದ್ರಗಳನ್ನು ತಲುಪಿದ ನಂತರ, ಅವುಗಳ ಭದ್ರತೆಯನ್ನು ಕೇಂದ್ರ ಅರೆಸೈನಿಕ ಪಡೆಗಳಿಗೆ ಹಸ್ತಾಂತರಿಸಲಾಗುತ್ತದೆ. ಕೇಂದ್ರ ಮೀಸಲು ಪೊಲೀಸ್ ಪಡೆ ಮತ್ತು ಕೇಂದ್ರ ಕೈಗಾರಿಕಾ ಭದ್ರತಾ ಪಡೆ ಪತ್ರಿಕೆಗಳನ್ನು ಕಾಪಾಡುತ್ತವೆ ಮತ್ತು ಪರೀಕ್ಷಾ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ನಿಯೋಜಿಸಲ್ಪಡುತ್ತವೆ. ಅಲ್ಲದೆ ಪ್ರಶ್ನೆಪತ್ರಿಕೆ ಸೋರಿಕೆ ತಡೆಯಲು ಸೋಮವಾರದ ತನಕ ಟೆಲಿಗ್ರಾಂ ಆಪ್ ನಿಷೇಧಿಸಿದೆ.**

### ಎನ್‌ಟಿಎ ಯಡವಟ್ಟು: ತಪ್ಪು ಸರಿಪಡಿಸುವ ಭರವಸೆ

ಮಹಾರಾಷ್ಟ್ರದೊಳಗಿನ ಕೇಂದ್ರಗಳನ್ನು ಆಯ್ಕೆ ಮಾಡಿಕೊಂಡಿದ್ದರೂ, ನಾಗ್ಪುರದ ವಿದ್ಯಾರ್ಥಿಯೊಬ್ಬನಿಗೆ ಯುನೈಟೆಡ್ ಅರಬ್ ಎಮಿರೇಟ್ಸ್‌ನ ಅಬುಧಾಬಿಯಲ್ಲಿ ಪರೀಕ್ಷಾ ಕೇಂದ್ರವನ್ನು ನೀಡಲಾಗಿದೆ. ಅಬ್ದುಲ್ಲಾ ಮೊಹಮ್ಮದ್ ತಾಲಿಬ್ ಎಂದು ಗುರುತಿಸಲ್ಪಟ್ಟ ಅಭ್ಯರ್ಥಿಯು ಅಬುಧಾಬಿಯಲ್ಲಿ ಪರೀಕ್ಷಾ ಕೇಂದ್ರವನ್ನು ನಿಗದಿಪಡಿಸಿದ ಪ್ರವೇಶಪತ್ರವನ್ನು ನೋಡಿ ಅಚ್ಚರಿಗೊಂಡಿದ್ದಾನೆ. ಮರು ಪರೀಕ್ಷಾ ಕೇಂದ್ರಕ್ಕೆ ನಾಗಪುರ, ವಾರ್ಧಾ ಮತ್ತು ಭಂಡಾರವನ್ನು ಮೊದಲ ಆದ್ಯತೆಗಳಾಗಿ ಆಯ್ಕೆ ಮಾಡಿಕೊಂಡಿದ್ದರು ಈ ಆಯ್ಕೆಗಳನ್ನು ನಿರ್ಲಕ್ಷಿಸಿ ವಿದೇಶದಲ್ಲಿ ಪರೀಕ್ಷಾ ಕೇಂದ್ರವನ್ನು ನೀಡಲಾಗಿದೆ. ಎನ್‌ಟಿಎ ತಪ್ಪು ಒಪ್ಪಿಕೊಂಡಿದ್ದು ಸರಿಪಡಿಸುವ ಭರವಸೆ ನೀಡಿದೆ.

# ಶಾಂತಿ ಒಪ್ಪಂದ ಉಲ್ಲಂಘನೆ: ಹಾರ್ಮುಜ್ ಬಂದ್

**ಟೆಹರಾನ್, ಜೂ.20:** ಅಮೆರಿಕ ಮತ್ತು ಇರಾನ್ ನಡುವೆ ಶಾಂತಿ ಒಪ್ಪಂದ ಏರ್ಪಟ್ಟಿದ್ದರೂ ಮಧ್ಯಪ್ರಾಚ್ಯದಲ್ಲಿ ಮತ್ತೊಮ್ಮೆ ಉದ್ವಿಗ್ನತೆ ಭುಗಿಲೆದ್ದಿದ್ದು, ಕದನ ವಿರಾಮದ ಹೊರತಾಗಿಯೂ ದಕ್ಷಿಣ ಲೆಬನಾನ್ ಮೇಲೆ ಇಸ್ರೇಲ್ ಪಡೆಗಳು ರಾತ್ರೋರಾತ್ರಿ ನಡೆಸಿದ ಭೀಕರ ವೈಮಾನಿಕ ದಾಳಿಯಲ್ಲಿ ಕನಿಷ್ಠ 16 ಜನ ಮೃತಪಟ್ಟಿದ್ದಾರೆ.

ಇಸ್ರೇಲ್ ನಡೆಸಿದ ದಾಳಿಯಿಂದ ರೊಚ್ಚಿಗೆದ್ದ ಇರಾನ್‌ನ ಕೇಂದ್ರ ಮಿಲಿಟರಿ ಕಮಾಂಡ್, ಶನಿವಾರ ಮತ್ತೊಮ್ಮೆ ಪ್ರಮುಖ ತೈಲಮಾರ್ಗ ಹಾರ್ಮುಜ್ ಜಲಸಂಧಿಯನ್ನು ಬಂದ್ ಮಾಡಿರುವುದಾಗಿ ಘೋಷಿಸಿದೆ. ಇಸ್ರೇಲ್ ದಾಳಿ, ಅಮೆರಿಕದೊಂದಿಗಿನ ಟೆಹರಾನ್ ಒಪ್ಪಂದದ ಸ್ಪಷ್ಟ ಉಲ್ಲಂಘನೆಯಾಗಿದೆ ಎಂದು ಇರಾನ್ ವಿವರಿಸಿದೆ.

ಹಾರ್ಮುಜ್ ಜಲಸಂಧಿಯನ್ನು ಹಡಗು ಸಂಚಾರಕ್ಕೆ ಮುಚ್ಚಲಾಗುವುದು ಎಂದು ಈ ಮೂಲಕ ಘೋಷಿಸಲಾಗಿದೆ; ಶತ್ರುಗಳು ಒಪ್ಪಂದವನ್ನು ಉಲ್ಲಂಘಿಸಿದ್ದಕ್ಕೆ ಪ್ರತಿಕ್ರಿಯೆಯಾಗಿ ಇದು ಮೊದಲ ಹೆಜ್ಜೆ ಎಂದಿರುವ ಇರಾನ್, ಆಕ್ರಮಣ ಮುಂದುವರಿದರೆ, ಶತ್ರು ತನ್ನ ಬಾಧ್ಯತೆಗಳನ್ನು ಪಾಲಿಸುವಂತೆ ಒತ್ತಾಯಿಸಲು ಮುಂದಿನ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತದೆ" ಎಂದು ಖತಮ್–ಅಲ್ ಅನ್ಬಿಯಾ ಕೇಂದ್ರ ಪ್ರಧಾನ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

### ದಕ್ಷಿಣ ಲೆಬನಾನ್ ಮೇಲೆ ಇಸ್ರೇಲ್ ವೈಮಾನಿಕ ದಾಳಿ

### ರೊಚ್ಚಿಗೆದ್ದ ಇರಾನ್‌ನಿಂದ ಜಲಸಂಧಿ ಬಂದ್ ಘೋಷಣೆ



ಲೆಬನಾನ್ ಸರ್ಕಾರಿ ಮಾಧ್ಯಮವು, ಸುಮಾರು 20 ಸ್ಥಳಗಳ ಮೇಲೆ ಇಸ್ರೇಲಿ ವಾಯುದಾಳಿಗಳನ್ನು ವರದಿ ಮಾಡಿದೆ. ದೇಶದ ನಾಗರಿಕ ರಕ್ಷಣಾ ಸಂಸ್ಥೆ ನಬತಿಹ್ ಪ್ರದೇಶದಲ್ಲಿ 16 ಜನರು ಸಾವನ್ನಪ್ಪಿದ್ದಾರೆ ಎಂದು ವರದಿ ತಿಳಿಸಿದೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯನ್ ಅವರು ಈ ವಾರ ಶಾಂತಿ ಒಪ್ಪಂದಕ್ಕೆ ಸಹಿ ಹಾಕಿದ್ದರು. ಈ ಒಪ್ಪಂದದ ಪ್ರಕಾರ ಲೆಬನಾನ್ ಸೇರಿದಂತೆ ಸಂಘರ್ಷ ಪೀಡಿತ ಎಲ್ಲಾ ಪ್ರದೇಶಗಳಲ್ಲಿ ತಕ್ಷಣವೇ ಕದನ ವಿರಾಮ ಜಾರಿಯಾಗಬೇಕು ಹಾಗೂ ಲೆಬನಾನ್‌ನ ಪ್ರಾದೇಶಿಕ ಸಮಗ್ರತೆ ಮತ್ತು ಸಾರ್ವಭೌಮತ್ವವನ್ನು ಕಾಪಾಡಬೇಕು ಎಂದು ಉಲ್ಲೇಖಿಸಲಾಗಿದೆ.

ಆದರೆ ಅಮೆರಿಕ ಮತ್ತು ಇರಾನ್ ನಡುವೆ ಸಹಿ ಹಾಕಲಾದ ಮಹತ್ವದ ಶಾಂತಿ ಒಪ್ಪಂದದ ನಂತರ ಆರಂಭವಾಗಬೇಕಿದ್ದ ರಾಜತಾಂತ್ರಿಕ ಮಾತುಕತೆಗಳು ದಿಢೀರ್ ರದ್ದಾಗಿದ್ದು, ಇದರಿಂದ ಆತಂಕಗೊಂಡ ಪ್ಯಾಲೆಸ್ತೀನ್, ಪ್ರಧಾನಿ ನರೇಂದ್ರ ಮೋದಿ ಅವರು ಮಧ್ಯ ಪ್ರವೇಶಿಸಬೇಕು ಎಂದು ಒತ್ತಾಯಿಸಿದೆ.

# ಹಣದುಬ್ಬರಕ್ಕೆ ಜನ ತತ್ತರ, ಬಿಜೆಪಿ ಪ್ರತಿಪಕ್ಷ ನಾಯಕರನ್ನು ಶಾಪಿಂಗ್ ಮಾಡುತ್ತಿದೆ: ಖರ್ಗೆ ವಾಗ್ದಾಳಿ

**ನವದೆಹಲಿ, ಜೂ.20:** ದೇಶದಲ್ಲಿ ಏರುತ್ತಿರುವ ಹಣದುಬ್ಬರದಿಂದ ನಿರುದ್ಯೋಗ ಮತ್ತು ಆರ್ಥಿಕತೆ ಕುಸಿಯುತ್ತಿದ್ದು, ಜನರು ಕಷ್ಟಪಡುತ್ತಿದ್ದರೆ, ಆಡಳಿತಾರೂಢ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ, ವಿಪಕ್ಷಗಳಿಂದ ನಾಯಕರ ಖರೀದಿಯಲ್ಲಿ ತೊಡಗಿದೆ ಎಂದು ಎಐಸಿಸಿ ಅಧ್ಯಕ್ಷ ಹಾಗೂ ರಾಜ್ಯಸಭೆ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ವಾಗ್ದಾಳಿ ನಡೆಸಿದ್ದಾರೆ.



ಈ ಕುರಿತು ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಖರ್ಗೆ, ಜನರು ತಮ್ಮ ಮೂಲಭೂತ ಅವಶ್ಯಕತೆಗಳನ್ನು ಪೂರೈಸಿಕೊಳ್ಳಲು ಕಷ್ಟಪಡುತ್ತಿದ್ದಾರೆ. ಆದರೆ ಬಿಜೆಪಿ ಇತರ ಪಕ್ಷಗಳ ನಾಯಕರನ್ನು ಖರೀದಿ ಮಾಡಿ ಕರೆತರುವ ಮೂಲಕ ತನ್ನ ರಾಜಕೀಯ ಸ್ಥಾನವನ್ನು ಬಲಪಡಿಸುವತ್ತ ಗಮನಹರಿಸಿದೆ ಎಂದು ಕಿಡಿಕಾರಿದ್ದಾರೆ.

ಹಣದುಬ್ಬರ ಹೆಚ್ಚಿರುವುದರಿಂದ ಉಳಿತಾಯ ವೇಗವಾಗಿ ಕ್ಷೀಣಿಸುತ್ತಿದೆ. ಕೈಗೆಟುಕುವಿಕೆಯಲ್ಲಿನ ಕೊರತೆ, ಆಕಾಂಕ್ಷೆಗಳಿಗೆ ದ್ರೋಹ, ಅಸಮಾನತೆ, ಜಾಗತಿಕ ವಿಶ್ವಾಸಾರ್ಹತೆಯ ಕುಸಿತ, ಯುವಜನರ ಆಕ್ರೋಶದ ಮಹಾಪೂರ, ಮೋದಿ ಸರ್ಕಾರದ ಆರ್ಥಿಕತೆಯ ದುರುಪಯೋಗದ ಭಾರದಿಂದ ಮನೆಗಳು ನಾಶವಾಗುತ್ತಿವೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಳೆದ 16 ತಿಂಗಳಲ್ಲೇ ಗರಿಷ್ಠ ಚಿಲ್ಲರೆ ಹಣದುಬ್ಬರ ದಾಖಲಾಗಿದೆ. ಆಹಾರ ಹಣದುಬ್ಬರ – 4.78%, ಟೊಮೆಟೊಗಳು ತಟ್ಟೆಗಳಿಂದ ಕಣ್ಮರೆಯಾಗಿವೆ. ವೈದ್ಯಕೀಯ ಹಣದುಬ್ಬರ 15% ಕ್ಕಿಂತ ಹೆಚ್ಚಾಗಿದೆ. ರೂಪಾಯಿ ಗುಂಡಿಗೆ ಇಳಿಯುತ್ತಿದೆ. ವಿದೇಶಿ ಹೂಡಿಕೆದಾರರು ನಮ್ಮನ್ನು ದೂರವಿಡುತ್ತಿದ್ದಾರೆ. ಯುವಕರಿಗೆ ಉದ್ಯೋಗವಿಲ್ಲ, ನಿರುದ್ಯೋಗ ಹೆಚ್ಚಾಗಿದೆ ಎಂದಿದ್ದಾರೆ.

ಇಷ್ಟೆಲ್ಲಾ ದೇಶದಲ್ಲಿ ಆಗುತ್ತಿದ್ದೂ, ಬಿಜೆಪಿ ಇತರ ಪಕ್ಷಗಳಿಂದ ಶಾಪಿಂಗ್ ಮಾಡುವಲ್ಲಿ ನಿರತವಾಗಿದೆ, ಆದರೆ ಜನಸಾಮಾನ್ಯರ ಮೂಲಭೂತ ಅವಶ್ಯಕತೆಗಳನ್ನು ಪೂರೈಸಲು ಸಾಧ್ಯವಾಗುತ್ತಿಲ್ಲ ಎಂದು ಬಿಜೆಪಿ ವಿರುದ್ಧ ಕಿಡಿಕಾರಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363


ಕರ್ನಾಟಕ ಪ್ರದೇಶ ಜನತಾದಳ (ಜಾತ್ಯತೀತ)
ನಮ್ಮ ಭೂಮಿ ನಮ್ಮ ಹಕ್ಕು
ಬಿಡದಿ ಬೃಹತ್ ಪಾದಯಾತ್ರೆ
ನಿಮ್ಮ ಬೆವರಿನ ಈ ಮಣ್ಣನ್ನು ಯಾರೂ ಕಸಿಯಲಾರರು... ನಾವಿದ್ದೇವೆ ನಿಮ್ಮೊಂದಿಗೆ...
₹33,562 ಕೋಟಿ ಮೊತ್ತದ ರಿಯಲ್ ಎಸ್ಟೇಟ್ ವ್ಯವಹಾರವನ್ನು ತಡೆದು, ಬಿಡದಿಯ ಹಿತಾಸಕ್ತಿಯನ್ನು ಉಳಿಸಲು!
518 ಎಕರೆ ಕೃಷಿ ಭೂಮಿಯ ಅಂತಿಮ ಅಧಿಸೂಚನೆಯನ್ನು ರದ್ದುಪಡಿಸಿ, 755 ರೈತ ಕುಟುಂಬಗಳ ಭವಿಷ್ಯವನ್ನು ಉಳಿಸಲು!
ಹೆಚ್ಚುವರಿ 7,481 ಎಕರೆ ಭೂಸ್ವಾಧೀನ ಪ್ರಕ್ರಿಯೆ ವಿಸ್ತರಿಸುವ ಯೋಜನೆಯನ್ನು ತಡೆದು, ನಮ್ಮ ನೆಲವನ್ನು ಉಳಿಸಲು!
ಮಾಸಿಕ 6 ಲಕ್ಷ ಲೀಟರ್ ಹಾಲು ಉತ್ಪಾದಿಸುವ ಹೈನುಗಾರಿಕೆ, ರೇಷ್ಮೆ ಹಾಗೂ ತೋಟಗಾರಿಕಾ ರಂಗದ ಜೀವನಾಧಾರವನ್ನು ಉಳಿಸಲು!
10 ಲಕ್ಷ ಅತ್ಯಮೂಲ್ಯ ಹಸಿರು ವೃಕ್ಷಗಳನ್ನು ಉಳಿಸಲು!
ಭೂಮಾಲೀಕರ ಒಪ್ಪಿಗೆಯಿಲ್ಲದ ಈ ಜನವಿರೋಧಿ ಯೋಜನೆಯನ್ನು ಸಂಪೂರ್ಣವಾಗಿ ಕೈಬಿಡಿಸಿ, ಬಿಡದಿಯ ಅಸ್ತಿತ್ವವನ್ನು ಉಳಿಸಲು!
ಬನ್ನಿ, ಜೊತೆಯಾಗಿ ಹೆಜ್ಜೆ ಇಡೋಣ... ಬಿಡದಿಯ ಮಣ್ಣನ್ನು ಉಳಿಸೋಣ!
ಪಾದಯಾತ್ರೆ ಆರಂಭದ ಸ್ಥಳಕ್ಕಾಗಿ ಸ್ಕ್ಯಾನ್ ಮಾಡಿ
1 ಅಂಚಿಪುರ
2 ಅಂಚಿಪುರ ಕಾಲೋನಿ
3 ಬನ್ನಿಗಿರಿ
4 ಮೆರೇವೇಗೌಡನದೊಡ್ಡಿ
5 ಗುಂಡುತೋಪು
6 ಗೊಲ್ಲಹಳ್ಳಿ
7 ಕೋಡಿಪಾಳ್ಯ
8 ಹೊಸೂರು (ಬಹಿರಂಗ ಸಭೆ)
21 ಜೂನ್, 2026 | ಭಾನುವಾರ | ಬೆಳಗ್ಗೆ 09:00 | ಅಂಚಿಪುರ ಗ್ರಾಮದಿಂದ ಹೊಸೂರು ವರೆಗೆ


ಕೆಪಿಸಿಸಿ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿರುವ
ಸನ್ಮಾನ್ಯ ಶ್ರೀ ಬಿ.ಕೆ.ಹರಿಪ್ರಸಾದ್ ಅವರ
ಪದಗ್ರಹಣ ಕಾರ್ಯಕ್ರಮ
ದಿನಾಂಕ: 21-06-2026, ಭಾನುವಾರ
ಸಮಯ: ಬೆಳಗ್ಗೆ 10.00 ಗಂಟೆಗೆ
ಸ್ಥಳ: ಅರಮನೆ ಮೈದಾನ, ಬೆಂಗಳೂರು.
ಕಾಂಗ್ರೆಸ್ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕಾಗಿ ವಿನಂತಿ.
ಶುಭಕೋರುವವರು:
ವಿಜಯಾನಂದ ಕಾಶಪ್ಪನವರ
ಅಧ್ಯಕ್ಷರು, ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ ನಿಯಮಿತ
ಶಾಸಕರು, ಹುನಗುಂದ ಮತಕ್ಷೇತ್ರ

**ನಿತ್ಯ ಪಂಚಾಂಗ 21.06.2026 ಭಾನುವಾರ**



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ - ಜ್ಯೇಷ್ಠ ಮಾಸ

ನಿಜ ಜ್ಯೇಷ್ಠ ಶುದ್ಧ, ಸಪ್ತಮಿ, ಪುಬ್ಬ ನಕ್ಷತ್ರ, ಬೆಂಗಳೂರು ಕೋಟೆ ರಥ, ಬೇಟ ನಾರಾಯಣ ಮಹಾರಾಜ ಜಯಂತಿ, ವಿಶ್ವ ಸಂಗೀತ ದಿನ, ಫಾದರ್ ಡೇ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ.5.04-6.33 | 12.00-1.30 | 3.00-4.00 |
| ಸೋಮ | ಬೆ.7.20-9.04 | 10.30-12.00 | 1.30-12.00 |
| ಮಂಗಳ | ಮ.3.25-4.59 | 9.00-10.30 | 12.00-1.30 |
| ಬುಧ | ಮ.12.16-1.50 | 7.30-9.00 | 10.30-12.00 |
| ಗುರು | ಮ.1.50-3.29 | 6.00-7.30 | 9.00-10.30 |
| ಶುಕ್ರ | ಬೆ.10.42-12.16 | 3.00-4.30 | 7.30-9.00 |
| ಶನಿ | ಬೆ.9.07-10.41 | 1.30-3.00 | 6.00-7.30 |

# ಅಡ್ಡಮತದಾನ: ಬಿಜೆಪಿ-ಜೆಡಿಎಸ್ ಮೈತ್ರಿಗೆ ಧಕ್ಕೆಯಿಲ್ಲ

**ಎರಡು ಪಕ್ಷಗಳ ನಡುವೆ ಬಿಕ್ಕಟ್ಟು ಸೃಷ್ಟಿಸಲು ಕಾಂಗ್ರೆಸ್ ವಿಫಲ ಯತ್ನ: ಎಚ್.ಡಿ.ಕುಮಾರಸ್ವಾಮಿ**

**ಬೆಂಗಳೂರು, ಜೂ.20:** ವಿಧಾನ ಪರಿಷತ್ ಚುನಾವಣೆಯಲ್ಲಿ ನಡೆದ ಅಡ್ಡ ಮತದಾನದಿಂದ ಜೆಡಿಎಸ್ ಮತ್ತು ಬಿಜೆಪಿ ಮೈತ್ರಿಯಲ್ಲಿ ಬಿರುಕು ಉಂಟಾಗುವುದಿಲ್ಲ. ಈ ಚುನಾವಣೆ ಮುಂದಿನ ವಿಧಾನಸಭೆ ಚುನಾವಣೆಗೆ ದಿಕ್ಸೂಚಿಯೂ ಅಲ್ಲ ಹಾಗೂ ನಮ್ಮ ನಡುವೆ ಬಿಕ್ಕಟ್ಟು ಸೃಷ್ಟಿಸಲು ಕಾಂಗ್ರೆಸ್ ವಿಫಲ ಪ್ರಯತ್ನ ನಡೆಸುತ್ತಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆರೋಪಿಸಿದರು.

ಸುದ್ದಿಗಾರರ ಜೊತೆ ಮಾತನಾಡಿದ ಕೇಂದ್ರ ಸಚಿವರು, ನಾನು ನಮ್ಮ ಅಭ್ಯರ್ಥಿಯನ್ನು ನಿಲ್ಲಿಸುವುದಕ್ಕೆ ಮೊದಲು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್, ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ಬಿಜೆಪಿ ಶಾಸಕಾಂಗ ಪಕ್ಷದ ನಾಯಕ ಆರ್. ಅಶೋಕ್ ಅವರೊಂದಿಗೆ ಚರ್ಚೆ ನಡೆಸಿ ಅವರೆಲ್ಲರ ಸಹಮತದಿಂದ ಅಭ್ಯರ್ಥಿಯನ್ನು ಹಾಕಲಾಯಿತು. ಹೀಗಾಗಿ ನಮ್ಮ ಮೈತ್ರಿಯಲ್ಲಿ ಬಿರುಕು ಬರುವ ಪ್ರಶ್ನೆ ಇಲ್ಲ ಎಂದರು.

ಕಳೆದ ಮೂರು ವರ್ಷಗಳಿಂದ ನಮ್ಮ ಶಾಸಕರಿಗೆ ಕ್ಷೇತ್ರಗಳಲ್ಲಿ ಸರಿಯಾಗಿ ಕೆಲಸಗಳು ಆಗಿಲ್ಲ. ಕಾರ್ಯಕರ್ತರು ಹಾಗೂ ಸಾರ್ವಜನಿಕರ ಒತ್ತಡದ ಕಾರಣಕ್ಕೆ ಜನರಿಗೆ ಮುಖ ತೋರಿಸುವುದು ಕಷ್ಟವಾಗುತ್ತಿದೆ ಎಂದು ಶಾಸಕರು ಹೇಳುತ್ತಿದ್ದಾರೆ. ಇದು ನಮ್ಮ ಪಕ್ಷದ ಶಾಸಕರ ಪರಿಸ್ಥಿತಿ ಅಷ್ಟೇ ಅಲ್ಲ, ಬಿಜೆಪಿ



ಮತ್ತು ಕಾಂಗ್ರೆಸ್ ಶಾಸಕರ ಪರಿಸ್ಥಿತಿಯೂ ಇದೇ ಆಗಿದೆ. ಆ ಹಿನ್ನೆಲೆಯಲ್ಲಿ ಪರಿಷತ್ ಚುನಾವಣೆಯ ಮೇಲೆ ಸ್ವಲ್ಪ ಪರಿಣಾಮ ಬೀರಿದೆ ಎಂದು ಹೇಳಬಹುದು. ಕಾಂಗ್ರೆಸ್ ಅಭ್ಯರ್ಥಿಗೆ ಮತ ಕೊಟ್ಟರೆ ನಿಮಗೆ (ಕಿಸೆಗೆ) 50 ಕೋಟಿ ರೂ. ಕೊಡುತ್ತೇವೆ, ಅದರ ಜೊತೆಗೆ 100 ಕೋಟಿ ರೂ. ಅನುದಾನ ಕೊಡುತ್ತೇವೆ ಎಂದು ಆಮಿಷ ಒಡ್ಡಿದ್ದಾರೆ. ಆ ಆಮಿಷಗಳು ಚುನಾವಣೆಯಲ್ಲಿ ಕೆಲಸ ಮಾಡಿವೆ ಎಂದು ಕೇಂದ್ರ ಸಚಿವರು ನೇರ ಆರೋಪ ಮಾಡಿದರು.

ಕೇವಲ ಈ ನೆಪ ಇಟ್ಟುಕೊಂಡು ನಮ್ಮ ನಡುವೆ ಬಿಕ್ಕಟ್ಟು ಸೃಷ್ಟಿಸಬಹುದು ಎಂದು ಕಾಂಗ್ರೆಸ್ ಪಕ್ಷ ನಂಬಿದ್ದರೆ ಅವರಿಗೆ ನಿರಾಶೆ ಆಗುವುದು ಖಚಿತ. ಅವರ ಆಸೆ ಖಂಡಿತಾ ಕೈಗೂಡುವುದಿಲ್ಲ ಎಂದು ಕುಮಾರಸ್ವಾಮಿ ಅವರು ನೇರ ಮಾತುಗಳಲ್ಲಿ ಹೇಳಿದರು.

ಪರಿಷತ್ ಚುನಾವಣೆ ಮುಂದಿನ ವಿಧಾನಸಭೆಗೆ ದಿಕ್ಸೂಚಿ ಅಲ್ಲ ಎಂಬ ಮಾತನ್ನು ನಾನು ಒತ್ತಿ ಒತ್ತಿ ಹೇಳಬಯಸುತ್ತೇನೆ. ಮುಂದಿನ ಚುನಾವಣೆಯಲ್ಲಿ ಮಿತ್ರಪಕ್ಷಗಳು ಒಟ್ಟಾಗಿ ಜನರ ಮುಂದೆ ಹೋಗುತ್ತೇವೆ. ನಮ್ಮ ನಡುವೆ ಯಾವುದೇ ರೀತಿಯ ಹೊಂದಾಣಿಕೆಯ ಕೊರತೆಯಾಗಲಿ, ವಿಶ್ವಾಸದ ಕೊರತೆಯಾಗಲಿ ಇಲ್ಲ. ನಮಗೆ ಜನರಿಂದ ಸಿಗುತ್ತದೆ. ಈ ಜನವಿರೋಧಿ ಸರ್ಕಾರವನ್ನು ತೊಲಗಿಸುತ್ತೇವೆ. ಅಡ್ಡಮತದಾನ ಮಾಡಿದ್ದಾರೆ ಎಂದು ಪಕ್ಷ ಮುಳುಗಿ ಹೋಗುವುದಿಲ್ಲ. 2017ರಲ್ಲಿ ರಾಜ್ಯಸಭೆ ಚುನಾವಣೆ ನಡೆದಾಗ ನಮ್ಮ ಪಕ್ಷದ ಆರೇಳು ಶಾಸಕರು ಕಾಂಗ್ರೆಸ್ ಅಭ್ಯರ್ಥಿಗೆ ಮತ ಹಾಕಿ ಆನಂತರ ಆ ಪಕ್ಷವನ್ನೇ ಸೇರಿದರು. ನಂತರ ನಡೆದ ಚುನಾವಣೆಯಲ್ಲಿ ಬಹುತೇಕ ಎಲ್ಲರೂ ಸೋತರು. ಆ ಪಕ್ಷವೂ ಸೋತು ಸುಣ್ಣವಾಯಿತು ಎಂದು ಸಚಿವರು ಹೇಳಿದರು.

### ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಿಗೆ ಮಾಹಿತಿ ಕೊಡುತ್ತೇನೆ

ಅಡ್ಡ ಮತದಾನ ಮಾಡಿದವರನ್ನು ಪತ್ತೆಹಚ್ಚಲು ಮಾಜಿ ಸಚಿವ ಸಿ.ಟಿ. ರವಿ ಅವರ ನೇತೃತ್ವದಲ್ಲಿ ಬಿಜೆಪಿ ಮೂವರ ತಂಡ ರಚನೆ ಮಾಡಿದೆ. ನಾನು ದೆಹಲಿಗೆ ಹೋದಾಗ ಬಿಜೆಪಿಯ ರಾಷ್ಟ್ರೀಯ ಅಧ್ಯಕ್ಷರನ್ನು ಭೇಟಿ ಮಾಡಿ ಈ ಬಗ್ಗೆ ನನಗೆ ಇರುವ ಮಾಹಿತಿ ಎಲ್ಲವನ್ನೂ ತಿಳಿಸುತ್ತೇನೆ. ನಮ್ಮ ಗುರಿ ಏನಿದ್ದರೂ 2028. ಆ ಚುನಾವಣೆಯಲ್ಲಿ ಮೈತ್ರಿ ಸರ್ಕಾರ ರಾಜ್ಯದ ಚುಕ್ಕಾಣಿ ಹಿಡಿಯಬೇಕು. ರಾಜ್ಯದಲ್ಲಿ ನಿಜವಾದ ಜನಪರ, ಜನತೆಯ ನಿರೀಕ್ಷೆಗಳಿಗೆ ತಕ್ಕಂತೆ ಕೆಲಸ ಮಾಡುವಂತಹ ಸರ್ಕಾರ ಬರಬೇಕು. ಅದಕ್ಕಾಗಿ ನನ್ನ ಶ್ರಮ ಮೀಸಲು, ಅದು ಬಿಟ್ಟು ಮುಖ್ಯಮಂತ್ರಿ ಸ್ಥಾನದ ವಿಷಯ ಮುಖ್ಯವಲ್ಲ. ಮೊದಲು ಈ ಕೆಟ್ಟ ಸರ್ಕಾರ ಹೋಗಬೇಕು ಎಂದು ಎಚ್.ಡಿ. ಕುಮಾರಸ್ವಾಮಿ ಹೇಳಿದರು.

### ಅಡ್ಡ ಮತದಾನ: ಹಣ ಕೊಟ್ಟ ಬಗ್ಗೆ ಯಾರಿಗೆ ಫೋನ್ ಮಾಡಬೇಕು?

ರಾಜ್ಯದಲ್ಲಿ ಭ್ರಷ್ಟಾಚಾರ ತೊಲಗಬೇಕು. ಯಾರಾದರೂ ಹತ್ತು ರೂಪಾಯಿ ಕೇಳಿದರೆ ಈ ನಂಬರ್‌ಗೆ ಕಾಲ್ ಮಾಡಿ ಎಂದು ಮುಖ್ಯಮಂತ್ರಿಗಳು ಹೇಳಿದ್ದಾರೆ. ಈ ಚುನಾವಣೆಯಲ್ಲಿ ಕೋಟಿ ಕೋಟಿ ಕೈ ಬದಲಾಗಿದೆ. ಈ ಸಂದರ್ಭದಲ್ಲಿ ಯಾರಿಗೆ ದೂರು ಕೊಡಬೇಕು. ಇಲ್ಲಿ ಹಣ ಕೊಟ್ಟವರನ್ನು, ಹಣ ಪಡೆದವರನ್ನು ಈ ನಂಬರ್‌ನಿಂದ ಹೊರಗೆ ಇಟ್ಟಿದ್ದಾರೆಯೇ? ಅದಕ್ಕೆ ಪ್ರತ್ಯೇಕ ನಿಯಮ ಎಂದರೂ ಮಾಡಿದ್ದಾರಾ ಎಂದು ಎಚ್.ಡಿ. ಕುಮಾರಸ್ವಾಮಿ ಖಾರವಾಗಿ ಪ್ರಶ್ನಿಸಿದರು. ಅಡ್ಡ ಮತದಾನ ಮಾಡಿದ ಶಾಸಕರ ವಿರುದ್ಧ ಕ್ರಮ ಜರುಗಿಸದೆ ಬಿಡುವುದಿಲ್ಲ. ಸಮಯ, ಸಂದರ್ಭ ನೋಡಿಕೊಂಡು ಮಾಡುತ್ತೇವೆ. 2028ರ ಚುನಾವಣೆಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವಾಗ ಕಠಿಣ ನಿರ್ಧಾರಗಳನ್ನು ಮಾಡಬೇಕಾಗುತ್ತದೆ. ಅಂತಹ ನಿರ್ಧಾರಗಳನ್ನು ನಾವು ಮಾಡಿಯೇ ಮಾಡುತ್ತೇವೆ ಎಂದು ಸಚಿವರು ಪ್ರಶ್ನೆ ಒಂದಕ್ಕೆ ಉತ್ತರಿಸಿದರು.

### ಭೂಮಾಲೀಕರಿಗೆ ಪರಿಹಾರದ ಚೆಕ್: ಎಚ್‌ಡಿಕೆ ಲೇವಡಿ

ಬಿಡದಿ ಟೌನ್‌ಶಿಪ್ ಬಗ್ಗೆ ವಿಧಾನಸಭೆಯಲ್ಲಿ ಈ ಹಿಂದೆಯೇ ಚರ್ಚೆ ಆಗಿತ್ತು. ನನ್ನ ಕಾಲದಲ್ಲಿ ಐದು ಟೌನ್‌ಶಿಪ್ ಮಾಡುವ ವಿಚಾರದ ಬಗ್ಗೆ ವಿಸ್ತೃತ ಚರ್ಚೆ ನಡೆದಿತ್ತು. ಅದಕ್ಕೆ ಪ್ರತಿಯಾಗಿ ಕಾಂಗ್ರೆಸ್ ಸತ್ಯಶೋದನಾ ಸಮಿತಿ ಬೇರೆ ರಚಿಸಿತ್ತು. ಆ ಬಗ್ಗೆ ನಾನು ಅಂದಿನ ಮುಖ್ಯಮಂತ್ರಿ ಆಗಿ ಏನು ಹೇಳಿದ್ದೇನೆ ಎಂಬುದು ದಾಖಲೆಯಲ್ಲಿದೆ. ರೈತರ ಒಂದಿಂಚೂ ಫಲತ್ತಾದ ಭೂಮಿ ಸ್ವಾಧೀನ ಮಾಡುವ ವಿಚಾರ ಇಲ್ಲ ಎಂದಿದ್ದೇನೆ.

ನಾಡಿದ್ದು ಸುದ್ದಿಗೋಷ್ಠಿ ನಡೆಸಿ ಎಲ್ಲವನ್ನೂ ಹೇಳುತ್ತೇನೆ. ಆಗ ನನ್ನ ಜತೆ ಇದ್ದು, ಈ ಯೋಜನೆಯನ್ನು ವಿರೋಧಿಸಿದವರು ಇವತ್ತು ಬೇರೆ ಪಕ್ಷದಲ್ಲಿದ್ದು ಮಾತು ಬದಲಿಸುತ್ತಿದ್ದಾರೆ ಎಂದು ಎಚ್.ಡಿ. ಕುಮಾರಸ್ವಾಮಿ ಕಟುವಾಗಿ ಟೀಕಿಸಿದರು. ಬಿಡದಿ ಟೌನ್‌ಶಿಪ್ ಭೂಸ್ವಾಧೀನ ಸಂಬಂಧ ಭೂ ಮಾಲೀಕರಿಗೆ ಶಾಸಕ ಪರಿಹಾರದ ಚೆಕ್ ಕೊಟ್ಟ ಬಗ್ಗೆ ಲೇವಡಿ ಮಾಡಿದ ಕೇಂದ್ರ ಸಚಿವರು; ಭೂ ಸ್ವಾಧೀನ ಅಧಿಕಾರಿ ಎಂಬ ವ್ಯಕ್ತಿ ಇರುತ್ತಾನೆ. ಅಥವಾ ಆ ಜಿಲ್ಲೆಗೆ ಸಂಬಂಧಿಸಿದ ಅಧಿಕಾರಿಗಳು ಇರುತ್ತಾರೆ, ಅವರು ಪರಿಹಾರದ ಚೆಕ್ ಕೊಡಬೇಕಾಗುತ್ತದೆ. ಕೆಲವರು ಚೆಕ್ ತೆಗೆದುಕೊಂಡಿದ್ದಾರೆ. ಆ ಹಣ ಎಷ್ಟು ದಿನ ಇರುತ್ತದೆ. 2 ಕೋಟಿ 30 ಲಕ್ಷದ ಚೆಕ್ ಕೊಟ್ಟು ರೈತರಿಗೆ ಆಸೆ ಹುಟ್ಟಿಸಿದ್ದಾರೆ. 20 ವರ್ಷಕ್ಕೆ 2 ಕೋಟಿ ಹಣವನ್ನು ಎಫ್‌ಡಿ ಇಟ್ಟರೆ ಹೆಚ್ಚೂ ಎಂದರೆ 40 ಲಕ್ಷ ಬಡ್ಡಿ ಸಿಗಬಹುದು. ಆದರೆ ಜಮೀನನ್ನು ಹಾಗೆ ಇಟ್ಟುಕೊಂಡರೆ 20 ಕೋಟಿ ಬೆಲೆ ಬಾಳುತ್ತದೆ ಎಂದು ಎಚ್.ಡಿ. ಕುಮಾರಸ್ವಾಮಿ ಹೇಳಿದರು.




ರಾಜ್ಯ ವಿಧಾನಸಭೆಯಿಂದ ರಾಜ್ಯಸಭೆಗೆ ಆಯ್ಕೆಯಾಗಿರುವ ಪ್ರೊ. ಮಾ. ನಾಗರಾಜ ಅವರು ಸಂಸದ ಬಸವರಾಜ ಬೊಮ್ಮಾಯಿಯವರನ್ನು ಆರ್.ಟಿ.ನಗರದ ನಿವಾಸದಲ್ಲಿ ಭೇಟಿಮಾಡಿ ಧನ್ಯವಾದ ತಿಳಿಸಿದರು. ಈ ಸಂದರ್ಭದಲ್ಲಿ ಬಸವರಾಜ ಬೊಮ್ಮಾಯಿ ನಾಗರಾಜ ಅವರಿಗೆ ಶುಭ ಕೋರಿದರು.



ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಕ್ಕೆ ನೂತನ ವ್ಯವಸ್ಥಾಪಕ ನಿರ್ದೇಶಕರಾಗಿ ಶಿವಕುಮಾರ್ ಕೆ.ಬಿ. ಅವರು ಹೊಣೆಗಾರಿಕೆ ವಹಿಸಿಕೊಂಡಿರುವ ಹಿನ್ನೆಲೆಯಲ್ಲಿ (ಇದಕ್ಕೂ ಮುನ್ನ ಬಿ.ಎಂ.ಟಿ.ಸಿಯ ವ್ಯವಸ್ಥಾಪಕ ನಿರ್ದೇಶಕರಾಗಿ ಕಾರ್ಯನಿರ್ವಹಿಸುತ್ತಿದ್ದರು) ಅವರನ್ನು ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇಲಾಖೆಯ ಆಯುಕ್ತ ಡಾ. ಸೆಲ್ವಮಣಿ ಆರ್. ಅವರು ನಿಗಮದ ವ್ಯವಸ್ಥಾಪಕ ನಿರ್ದೇಶಕರ (ಸಮವರ್ತಿತ ಪ್ರಭಾರದಲ್ಲಿದ್ದವರು) ಅಧಿಕಾರವನ್ನು ಹಸ್ತಾಂತರಿಸಿ ಶುಭ ಕೋರಿದರು.

## ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಇಂದು ಪದಗ್ರಹಣ
## ಅರಮನೆ ಮೈದಾನದಲ್ಲಿ ಭವ್ಯ ವೇದಿಕೆ ನಿರ್ಮಾಣ

**ಬೆಂಗಳೂರು, ಜೂ.20:** ಪಕ್ಷನಿಷ್ಠೆಯ ನಾಯಕ, ವಿಧಾನಪರಿಷತ್ ಸದಸ್ಯರೂ ಆದ ಬಿ.ಕೆ.ಹರಿಪ್ರಸಾದ್ ಕೆಪಿಸಿಸಿ ನೂತನ ಅಧ್ಯಕ್ಷರಾಗಿ ಭಾನುವಾರ ಅಧಿಕಾರ ಸ್ವೀಕಾರ ಮಾಡುತ್ತಿದ್ದು, ನಗರದ ಅರಮನೆ ಮೈದಾನದ ತ್ರಿಪುರ ವಾಸಿನಿಯಲ್ಲಿ ಭರದ ಸಿದ್ಧತೆ ನಡೆಯುತ್ತಿದೆ. ಇದಕ್ಕಾಗಿ ಭವ್ಯ ವೇದಿಕೆಯನ್ನು ಸಜ್ಜುಗೊಳಿಸಲಾಗಿದೆ.,



ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಎಐಸಿಸಿ ಮುಖಂಡರು, ವಿವಿಧ ರಾಜ್ಯಗಳ ಕೆಪಿಸಿಸಿ ಅಧ್ಯಕ್ಷರು, ವಿವಿಧ ಕಾಂಗ್ರೆಸ್ ಮುಖಂಡರು ನಾಳಿನ ಪದಗ್ರಹಣ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ನಿಯೋಜಿತ ಕೆಪಿಸಿಸಿ ಅಧ್ಯಕ್ಷರಾದ ಬಿ. ಕೆ.ಹರಿಪ್ರಸಾದ್ ಅವರಿಗೆ ಕೆಪಿಸಿಸಿ ಹಾಲಿ ಅಧ್ಯಕ್ಷರಾದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ರವರು ಅಧಿಕಾರ ಹಸ್ತಾಂತರ ಮಾಡಲಿದ್ದಾರೆ. ಬೆಂಗಳೂರು ಅರಮನೆ ಮೈದಾನದ ತ್ರಿಪುರ ವಾಸಿನಿಯಲ್ಲಿ ಬೃಹತ್ ಕಾರ್ಯಕ್ರಮ ಆಯೋಜಿಸಲಾಗಿದ್ದು, ನಾಡಿನ ಮೂಲೆಮೂಲೆಗಳಿಂದ ಕಾಂಗ್ರೆಸ್ ಕಾರ್ಯಕರ್ತರು ಬೃಹತ್ ಸಂಖ್ಯೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ರವರ ಪದಗ್ರಹಣ ಕಾರ್ಯಕ್ರಮವನ್ನು ರಾಜಭವನದಲ್ಲಿ ಸರಳವಾಗಿ ಆಚರಿಸಲಾಗಿತ್ತು. ಆದರೆ ಕೆಪಿಸಿಸಿ ಅಧ್ಯಕ್ಷರ ಪದಗ್ರಹಣ ಕಾರ್ಯಕ್ರಮವನ್ನು ನಗರದ ಅರಮನೆ ಮೈದಾನದಲ್ಲಿ ಅದ್ದೂರಿಯಾಗಿ ಆಚರಿಸಲು ಕಾಂಗ್ರೆಸ್ ಪಕ್ಷ ತೀರ್ಮಾನಿಸಿದೆ. ಅದಕ್ಕೆ ಕಳೆದ ಒಂದು ವಾರದಿಂದ ಭರದ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ.

ನಗರದ ಸುತ್ತಮುತ್ತ ಬಿ.ಕೆ. ಹರಿಪ್ರಸಾದ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ಪ್ರತಿಪಕ್ಷದ ನಾಯಕ ರಾಹುಲ್‌ಗಾಂಧಿ ಸೇರಿದಂತೆ ವಿವಿಧ ಮುಖಂಡರ ಕಟೌಟ್‌ಗಳು, ಸ್ವಾಗತ ಅಭಿನಂದನೆ ಫ್ಲೆಕ್ಸ್ ಗಳು, ಬ್ಯಾನರ್‌ಗಳು ವಿಜೃಂಭಿಸುತ್ತಿವೆ. ಕೆಪಿಸಿಸಿ ಮುಖಂಡರು ಈಗಾಗಲೇ ಪೂರ್ವ ಸಿದ್ಧತಾ ಕಾರ್ಯಕ್ರಮಗಳನ್ನು ಪರಿಶೀಲನೆ ನಡೆಸಿದ್ದಾರೆ. ಮುಖ್ಯಮಂತ್ರಿ ಡಿಕೆಶಿ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಎಐಸಿಸಿ ಮುಖಂಡರು, ಸೇವಾದಳ, ಎನ್.ಎಸ್.ಯು.ಐ, ಯುವ ಕಾಂಗ್ರೆಸ್, ಮಹಿಳಾ ಕಾಂಗ್ರೆಸ್ ಸೇರಿದಂತೆ ಎಲ್ಲಾ ಘಟಕಗಳ ಮುಖಂಡರು, ಕಾರ್ಯಕರ್ತರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

## ಮೇಕೆದಾಟು ಯೋಜನೆ ಅನುಷ್ಠಾನ ವಿಚಾರದಲ್ಲಿ ದ್ವಂದ್ವ ಬೇಡ: ಅಶೋಕ್

**ನಿಲುವು ಸ್ಪಷ್ಟಪಡಿಸುವಂತೆ ಕಾಂಗ್ರೆಸ್‌ಗೆ ಆರ್. ಅಶೋಕ್ ಆಗ್ರಹ**

**ರಾಜಕಾರಣಕ್ಕಾಗಿ ರಾಜ್ಯದ ಹಿತ ಬಲಿ**

**ಬೆಂಗಳೂರು, ಜೂ.20:** ಮೇಕೆದಾಟು ಯೋಜನೆ ಅನುಷ್ಠಾನ ವಿಚಾರದಲ್ಲಿ ಕಾಂಗ್ರೆಸ್‌ನಿಂದ ಕನ್ನಡಿಗರಿಗೆ ಮತ್ತೊಮ್ಮೆ ಮಹಾದ್ರೋಹ ಬಗೆಯಲಾಗುತ್ತಿದ್ದು, ತಮಿಳುನಾಡಿನಲ್ಲಿ ಮೈತ್ರಿ ರಾಜಕಾರಣಕ್ಕಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮೇಕೆದಾಟುವನ್ನು ಬಲಿ ಕೊಟ್ಟಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್.ಆಶೋಕ್ ಆರೋಪಿಸಿದ್ದಾರೆ.

ತಮಿಳುನಾಡಿನಲ್ಲಿ ಕಾಂಗ್ರೆಸ್ ಮೈತ್ರಿಕೂಟದ ಸರ್ಕಾರ ಮೇಕೆದಾಟು ಯೋಜನೆ ವಿರುದ್ಧ ನಿರ್ಣಯ ಅಂಗೀಕರಿಸಿದೆ. ಅಲ್ಲಿನ ಕಾಂಗ್ರೆಸ್ ನಾಯಕರು ಕರ್ನಾಟಕದ ಹಕ್ಕಿನ ವಿರುದ್ಧ ನಿಂತಿದ್ದಾರೆ. ಆದರೆ ಕರ್ನಾಟಕದ ಕಾಂಗ್ರೆಸ್ ಸರ್ಕಾರ ಮಾತ್ರ ಬಾಯಿ ಮುಚ್ಚಿಕೊಂಡು ಕುಳಿತಿದೆ ಎಂದು ದೂರಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಒಂದು ರಾಜ್ಯದಲ್ಲಿ ಮೇಕೆದಾಟು ಪರ, ಮತ್ತೊಂದು ರಾಜ್ಯದಲ್ಲಿ ಮೇಕೆದಾಟು ವಿರೋಧ, ರಾಹುಲ್ ಗಾಂಧಿಯವರೇ ಇದೇನಾ ನಿಮ್ಮ ನಾಯಕತ್ವ, ಮೇಕೆದಾಟು ವಿಚಾರದಲ್ಲಿ ನಿಮ್ಮ ಪಕ್ಷದ ನಿಲುವು ಸ್ಪಷ್ಟಪಡಿಸಿ ಎಂದು ಆಗ್ರಹಿಸಿದ್ದಾರೆ.

ತಮಿಳುನಾಡಿನ ಮೈತ್ರಿಕೂಟದ ರಾಜಕೀಯಕ್ಕಾಗಿ ಕರ್ನಾಟಕವನ್ನು ಮತ್ತೆ ಬಲಿಕೊಡಲು ಹೊರಟಿದ್ದೀರಾ. ಕಾಂಗ್ರೆಸ್ಗೆ ಮೇಕೆದಾಟು ಎಂದರೆ ಚುನಾವಣೆ ಬಂದಾಗ ಮಾತ್ರ ನೆನಪಾಗುವ ಘೋಷಣೆ, ಅಧಿಕಾರ ಬಂದ ಮೇಲೆ ಕರ್ನಾಟಕದ ಹಕ್ಕು,



ರೈತರ ಬವಣೆ, ಕುಡಿಯುವ ನೀರಿನ ಭದ್ರತೆ ಎಲ್ಲವೂ ಮರೆತು ಹೋಗುತ್ತದೆ ಎಂದು ವ್ಯಂಗ್ಯವಾಡಿದ್ದಾರೆ.

ಕರ್ನಾಟಕದ ನೀರಿನ ಹಕ್ಕಿಗಾಗಿ ಹೋರಾಡುತ್ತಿದ್ದೇನೆ ಎಂದು ಪಾದಯಾತ್ರೆಯ ಬೀದಿ ನಾಟಕ ನಡೆಸಿದ ಡಿ.ಕೆ. ಶಿವಕುಮಾರ್ ಇಂದು ಎಲ್ಲಿದ್ದಾರೆ ಎಂದು ಪ್ರಶ್ನಿಸಿರುವ ಅವರು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್‌ರವರೇ ಅಂದು ನೀವು ನಡೆಸಿದ್ದು ಮೇಕೆದಾಟು ಪಾದ ಯಾತ್ರೆಯೋ ಅಥವಾ ಮುಖ್ಯಮಂತ್ರಿ ಕುರ್ಚಿಗಾಗಿ ಪಾದಯಾತ್ರೆಯೋ ಎಂದು ಪ್ರಶ್ನಿಸಿದ್ದಾರೆ.1

ತಮಿಳುನಾಡಿನಲ್ಲಿ ಇಂದು ನಿಮ್ಮದೇ ಪಕ್ಷದವರು ಕರ್ನಾಟಕದ ಹಕ್ಕಿಗೆ ಕೊಡಲಿ ಪೆಟ್ಟು ಹಾಕುತ್ತಿದ್ದರೂ ಒಂದು ಮಾತು ಮಾತನಾಡುವ ಧೈರ್ಯವಿಲ್ಲ, ಇದೇನಾ ನಿಮ್ಮ ಕನ್ನಡ ಪ್ರೇಮ, ಇದೇನಾ ನಿಮ್ಮ ನೀರಿನ ಹೋರಾಟ ಎಂದು ಪ್ರಶ್ನಿಸಿದ್ದಾರೆ. ಅಂದು ಪಾದಯಾತ್ರೆ ಇಂದು ಮೌನ ಯಾತ್ರೆ. ಕಾಂಗ್ರೆಸ್ ಹೈಕಮಾಂಡ್ ಮುಂದೆ ಶರಣಾಗಿದ್ದೀರಿ. ಮೇಕೆದಾಟು ಉಳಿಸೋದು ಮುಖ್ಯವೋ, ಮೈತ್ರಿ ಉಳಿಸೋದು ಮುಖ್ಯವೋ ಉತ್ತರಿಸಿ ಎಂದು ಆರ್. ಅಶೋಕ್ ಆಗ್ರಹಿಸಿದ್ದಾರೆ.

### ಅಡ್ಡಮತದಾನ: ವಿಜಯೇಂದ್ರ, ಅಶೋಕ್, ರಾಧಾ ಮೋಹನ್‌ದಾಸ್ ಅಗರವಾಲ್‌ಗೆ ದೆಹಲಿಗೆ ಬುಲಾವ್

ವಿಧಾನ ಪರಿಷತ್ ಚುನಾವಣೆಯಲ್ಲಿ ನಡೆದಿರುವ ಕ್ರಾಸ್ ವೋಟಿಂಗ್ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ಬಿಜೆಪಿ ಹೈಕಮಾಂಡ್, ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಹಾಗೂ ರಾಜ್ಯ ಉಸ್ತುವಾರಿ ರಾಧಾ ಮೋಹನ್ ದಾಸ್ ಅಗರವಾಲ್ ಅವರನ್ನು ಜೂನ್ 23ರಂದು ನವದೆಹಲಿಗೆ ಕರೆದಿದೆ ಎಂದು ಮೂಲಗಳು ತಿಳಿಸಿವೆ. ಮೂಲಗಳ ಪ್ರಕಾರ, ವಿಜಯೇಂದ್ರ ಅವರು ಭಾನುವಾರವೇ ದೆಹಲಿಗೆ ತೆರಳುವ ಸಾಧ್ಯತೆಯಿದೆ. ವಿಧಾನ ಪರಿಷತ್ ಚುನಾವಣೆಯಲ್ಲಿ ಎನ್ಡಿಎ ಅಭ್ಯರ್ಥಿಗೆ ಆಗಿರುವ ಹೀನಾಯ ಸೋಲಿನಿಂದ ಕೇಂದ್ರ ಸಚಿವ ಹಾಗೂ ಜೆಡಿಎಸ್ ರಾಜ್ಯಾಧ್ಯಕ್ಷ ಎಚ್.ಡಿ. ಕುಮಾರಸ್ವಾಮಿ ಕೂಡ ಬಿಜೆಪಿ ರಾಜ್ಯ ನಾಯಕತ್ವದ ಬಗ್ಗೆ ಅಸಮಾಧಾನಗೊಂಡಿದ್ದಾರೆ ಎನ್ನಲಾಗಿದೆ.

63 ಶಾಸಕರನ್ನು ಹೊಂದಿರುವ ಬಿಜೆಪಿ ಎರಡು ಸ್ಥಾನಗಳನ್ನು ಗೆದ್ದಿದ್ದರೂ, ಅದರ ಅಭ್ಯರ್ಥಿಗಳಿಗೆ ಕೇವಲ 56 ಮತಗಳು ಲಭಿಸಿವೆ. ಏಳು ಬಿಜೆಪಿ ಶಾಸಕರ ಮತಗಳು ಕಾಂಗ್ರೆಸ್ ಪರವಾಗಿ ಹೋಗಿರುವ ಶಂಕೆ ವ್ಯಕ್ತವಾಗಿದೆ.

## ಏಳು ಹೊಸ ಬುಲೆಟ್ ರೈಲು ಯೋಜನೆಗಳಿಗೆ ಕೇಂದ್ರ ಅನುಮೋದನೆ

### ಬೆಂಗಳೂರಿಗೂ ಬಂಪರ್ ಕೊಡುಗೆ: 16 ಲಕ್ಷ ಕೋಟಿ ರೂ.ವೆಚ್ಚದಲ್ಲಿ 7 ಯೋಜನೆಗಳ ಘೋಷಣೆ

**ನವದೆಹಲಿ, ಜೂ.20:** ಏಳು ಹೊಸ ಬುಲೆಟ್ ರೈಲು ಯೋಜನೆಗಳನ್ನು ಕೇಂದ್ರ ಸರ್ಕಾರ ಘೋಷಣೆ ಮಾಡಿದ್ದು, ಈ ನಿಟ್ಟಿನಲ್ಲಿ ಕಾರ್ಯಗಳು ಚುರುಕಾಗಿ ನಡೆಯುತ್ತಿವೆ.

ದೀರ್ಘಾವಧಿ ದೃಷ್ಟಿಯಿಂದ ಕೇಂದ್ರಸರ್ಕಾರ ಏಳು ಹೆಚ್ಚುವರಿ ಹೈಸ್ಪೀಡ್ ರೈಲು ಮಾರ್ಗಗಳನ್ನು ಗುರುತಿಸಿದ್ದು, ಈಗಾಗಲೇ ಮುಂಬೈ-ಅಹಮದಾಬಾದ್ ಬುಲೆಟ್ ರೈಲು ಕಾರಿಡಾರ್ ಕಾಮಗಾರಿ ಪ್ರಗತಿಯಲ್ಲಿದೆ. ಈ ಪ್ರಸ್ತಾವಿತ ಕಾರಿಡಾರ್‌ಗಳು ದೆಹಲಿ, ವಾರಾಣಸಿ, ಪುಣೆ, ಹೈದರಾಬಾದ್, ಬೆಂಗಳೂರು ಮತ್ತು ಚೆನ್ನೈ ಸೇರಿದಂತೆ ಪ್ರಮುಖ ನಗರಗಳನ್ನು ಸಂಪರ್ಕಿಸುವ ಗುರಿ ಹೊಂದಿದ್ದು, ರಾಷ್ಟ್ರೀಯ ಬುಲೆಟ್ ರೈಲ್ವೆಜಾಲಕ್ಕೆ ಶಕ್ತಿ ನೀಡಲಿವೆ. ದೇಶದ ಪ್ರಮುಖ ನಗರಗಳ ನಡುವೆ ಪ್ರಯಾಣದ ಸಮಯವನ್ನು ಕಡಿತಗೊಳಿಸಲು ಕೇಂದ್ರ ಸರ್ಕಾರ ಬರೋಬ್ಬರಿ 16 ಲಕ್ಷ ಕೋಟಿ ರೂಪಾಯಿ ವೆಚ್ಚದಲ್ಲಿ 7 ಹೊಸ ಬುಲೆಟ್ ಟ್ರೈನ್ ಕಾರಿಡಾರ್ ಯೋಜನೆ ಗಳನ್ನು ಘೋಷಿಸಿದೆ. ಇದರಲ್ಲಿ ನಮ್ಮ ಸಿಲಿಕಾನ್ ಸಿಟಿ ಬೆಂಗಳೂರಿಗೆ ಬಂಪರ್ ಕೊಡುಗೆ ಸಿಕ್ಕಿದ್ದು, ಹೈದರಾಬಾದ್ ಮತ್ತು ಚೆನ್ನೈ ನಡುವಿನ ಪ್ರಯಾಣ ಇನ್ಮುಂದೆ ವಿಮಾನಕ್ಕಿಂತಲೂ ವೇಗವಾಗಲಿದೆ.



ಈ ಯೋಜನೆ ಗಳು ಭಾರತೀಯ ಸಾರಿಗೆ ವ್ಯವಸ್ಥೆಯ ಮುಖ ಪುಟವನ್ನೇ ಬದಲಾಯಿಸಲಿದ್ದು, ಬೆಂಗಳೂರಿನ ಜನರಿಗೆ ಇನ್ಮುಂದೆ ನೆರೆಯ ಮೆಟ್ರೋ ಸಿಟಿಗಳಿಗೆ ಹೋಗಿ ಬರುವುದು ಪಕ್ಕದ ಏರಿಯಾಗೆ ಹೋಗುವಷ್ಟೇ ಸುಲಭವಾಗಲಿದೆ.

**ಪ್ರಸ್ತಾಪಿಸಿದ ಹೊಸ ಮಾರ್ಗಗಳು**

**ಮುಂಬೈ-ಪುಣೆ, ಪುಣೆ-ಹೈದರಾಬಾದ್, ಹೈದರಾಬಾದ್-ಬೆಂಗಳೂರು, ಹೈದರಾಬಾದ್-ಚೆನ್ನೈ, ಚೆನ್ನೈ-ಬೆಂಗಳೂರು, ದೆಹಲಿ-ವಾರಾಣಸಿ ಮತ್ತು ವಾರಾಣಸಿ-ಸಿಲಿಗುರಿ. ಈ ಮಾರ್ಗಗಳು ಭಾರತದ ಕೆಲವು ದೊಡ್ಡ ಆರ್ಥಿಕ, ಕೈಗಾರಿಕಾ, ತಂತ್ರಜ್ಞಾನ ಮತ್ತು ಪ್ರವಾಸೋದ್ಯಮ ಕೇಂದ್ರಗಳನ್ನು ಸಂಪರ್ಕಿಸುವ ಗುರಿಯನ್ನು ಹೊಂದಿವೆ.**

**ಹೈದರಾಬಾದ್- ಬೆಂಗಳೂರು ಕಾರಿಡಾರ್:** ಬೆಂಗಳೂರು ಮತ್ತು ಹೈದರಾಬಾದ್ ದೇಶದ ಅತಿ ದೊಡ್ಡ ಟೆಕ್ ಹಬ್‌ಗಳು. ಸದ್ಯ ಈ ಎರಡು ನಗರಗಳ ನಡುವೆ ವಂದೇ ಭಾರತ್ ಎಕ್ಸ್‌ಪ್ರೆಸ್‌ನಲ್ಲಿ ಪ್ರಯಾಣಿಸಬೇಕಾದರೂ ಕನಿಷ್ಠ 8.5 ಗಂಟೆ ಬೇಕು. ಆದರೆ ಬುಲೆಟ್ ಟ್ರೈನ್ ಬಂದ ಮೇಲೆ ಈ ಪ್ರಯಾಣ ಸಮಯ ಕೇವಲ 2 ಗಂಟೆ ಯಾಗಲಿದೆ. ಅದೇ ರೀತಿ ಚೆನ್ನೈ-ಬೆಂಗಳೂರು ಹೊಸ ಮಾರ್ಗಕ್ಕೆ ಅನುಮೋದನೆ ಸಿಕ್ಕಿದೆ.

## ಬೆಂಗಳೂರು-ತುಮಕೂರು ನಡುವೆ ಚತುಷ್ಪಥ ರೈಲುಮಾರ್ಗ

**ಶೀಘ್ರದಲ್ಲೇ ಕಾಮಗಾರಿ ಆರಂಭ: ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ**

**ತುಮಕೂರು, ಜೂ.20:** ಬೆಂಗಳೂರು-ತುಮಕೂರು ನಡುವೆ ಪ್ರತಿನಿತ್ಯ ರೈಲಿನಲ್ಲಿ ಸಂಚರಿಸುವ ಪ್ರಯಾಣಿಕರಿಗೆ ಸಿಹಿಸುದ್ದಿ ಸಿಕ್ಕಿದ್ದು, ಶೀಘ್ರದಲ್ಲೇ ಎರಡೂ ನಗರಗಳ ನಡುವೆ ಚತುಷ್ಪಥ ರೈಲುಮಾರ್ಗ ಕಾಮಗಾರಿ ಆರಂಭಿಸುವುದಾಗಿ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ.

ಸುದ್ದಿಗಾರರ ಜತೆ ಶನಿವಾರ ಮಾತನಾಡಿದ ಅವರು, ಬೆಂಗಳೂರು ಮತ್ತು ತುಮಕೂರು ನಡುವೆ ಸದ್ಯ ಕೇವಲ ಎರಡು ಪಥಗಳ



ರೈಲ್ವೆಹಳಿ ಇರುವುದರಿಂದ ರೈಲುಗಳ ಸಂಚಾರ ವಿಳಂಬವಾಗುತ್ತಿದ್ದು, ಇದನ್ನು ನಾಲ್ಕು ಪಥವಾಗಿ ಅಭಿವೃದ್ಧಿಪಡಿಸಲಾಗುವುದು. ಚತುಷ್ಪಥ ರೈಲು ಮಾರ್ಗ ನಿರ್ಮಾಣದ ಪೂರ್ವ ಸಿದ್ಧತೆ ಕಾರ್ಯಗಳು ಚುರುಕಾಗಿವೆ ಎಂದು ಹೇಳಿದ್ದಾರೆ.

ಈ ಉದ್ದೇಶಿತ ಬೃಹತ್ ಯೋಜನೆಗಾಗಿ ಈಗಾಗಲೇ ವಿಸ್ತೃತ ಯೋಜನಾ ವರದಿಯನ್ನು ಸಲ್ಲಿಸಲಾಗಿದೆ.

ಅಲ್ಲದೆ, ರೈಲ್ವೆ ಇಲಾಖೆಯ ಅತ್ಯುನ್ನತ ತಾಂತ್ರಿಕ ಸಮಿತಿಯು ಈ ವರದಿಯನ್ನು ಪರಿಶೀಲಿಸಿ ಅನುಮೋದನೆ ನೀಡಿದೆ. ಸದ್ಯ ಈ ಪ್ರಕ್ರಿಯೆಯು ರೈಲ್ವೆ ಮಂಡಳಿಯ ಅಂತಿಮ ಒಪ್ಪಿಗೆಯ ಹಂತದಲ್ಲಿದ್ದು, ಬೋರ್ಡ್ ಮುದ್ರೆ ಬೀಳುತ್ತಿದ್ದಂತೆ ಯೋಜನೆ ಅಧಿಕೃತವಾಗಿ ಕಾರ್ಯರೂಪಕ್ಕೆ ಬರಲಿದೆ ಎಂದು ಸಚಿವರು ತಿಳಿಸಿದರು.

ಅಂದಾಜು 6,000 ಕೋಟಿ ರೂಪಾಯಿಗೂ ಅಧಿಕ ವೆಚ್ಚದಲ್ಲಿ ಈ ಚತುಷ್ಪಥ ರೈಲು ಮಾರ್ಗದ ಬೃಹತ್ ಮೂಲಸೌಕರ್ಯ ಕಾಮಗಾರಿ ನಡೆಯಲಿದೆ. ಯೋಜನೆಗೆ ಅಗತ್ಯವಿರುವ ಹೆಚ್ಚುವರಿ ಭೂಮಿಯನ್ನು ಗುರುತಿಸುವ ಕಾರ್ಯ ಭರದಿಂದ ಸಾಗುತ್ತಿದ್ದು, ಮುಂದಿನ ಐದಾರು ತಿಂಗಳುಗಳ ಅವಧಿಯಲ್ಲಿ ಭೂಸ್ವಾಧೀನ ಪ್ರಕ್ರಿಯೆಯು ಸಹ ಅಧಿಕೃತವಾಗಿ ಆರಂಭವಾಗಲಿದೆ ಎಂದು ವಿ. ಸೋಮಣ್ಣ ಹೇಳಿದ್ದಾರೆ. ಈ ನಾಲ್ಕು ಪಥಗಳ ಮಾರ್ಗ ಪೂರ್ಣಗೊಂಡರೆ, ಎಕ್ಸ್‌ಪ್ರೆಸ್ ಮತ್ತು ಪ್ಯಾಸೆಂಜರ್ ರೈಲುಗಳು ಯಾವುದೇ ಸಿಗ್ನಲ್ ಕಾಯುವಿಕೆಯಿಲ್ಲದೆ ಸಂಚರಿಸಬಹುದಾಗಿದ್ದು, ಬೆಂಗಳೂರು-ತುಮಕೂರು ನಡುವಿನ ಪ್ರಯಾಣದ ಸಮಯ ಈಗಿರುವುದಕ್ಕಿಂತ ಅರ್ಧದಷ್ಟು ಕಡಿಮೆ ಆಗಲಿದೆ.

## ಅಧಿಕಾರ ಕೈಯಲ್ಲಿರುವಾಗ ಯೋಜನೆ ಅನುಷ್ಠಾನ ಮಾಡಿ ತೋರಿಸಬೇಕು

ಮೇಕೆದಾಟು ಅನುಷ್ಠಾನಕ್ಕೆ ಮುಂದಾಗುವಂತೆ ಸಿಎಂ ಡಿ.ಕೆ.ಶಿವಕುಮಾರ್‌ಗೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆಗ್ರಹ



ರಾಜ್ಯದ ಮುಖ್ಯಮಂತ್ರಿಗಳು ಮೇಕೆದಾಟು ವಿಚಾರವಾಗಿ ಹೋರಾಟ ಮಾಡಿದರು. ಕೇವಲ ವಿರೋಧ ಪಕ್ಷದಲ್ಲಿದ್ದಾಗ ಹೋರಾಟ ಮಾಡಿದರೆ ಸಾಲದು, ಅಧಿಕಾರ ಕೈಯಲ್ಲಿರುವಾಗ ಹೋರಾಟ ಮಾಡಿ ತೋರಿಸಬೆಕು ಎಂದು ಕೇಂದ್ರ ಸಚಿವ ಶೋಭಾ ಕರಂದ್ಲಾಜೆ ಆಗ್ರಹಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಶನಿವಾರ ಮಾತನಾಡಿದ ಅವರು, ಇಂದು ಡಿ.ಕೆ. ಶಿವಕುಮಾರ್ ಅವರ ಕೈಗೆ ಅಧಿಕಾರ ಬಂದಿದೆ. ಮೇಕೆದಾಟು ಯೋಜನೆಯನ್ನು ಜಾರಿ ಮಾಡಿ ತೋರಿಸಬೇಕು. ಏಕೆಂದರೆ ತಮಿಳುನಾಡಿನಲ್ಲೂ ಇಂದು ಕಾಂಗ್ರೆಸ್ ಬೆಂಬಲಿತ ಸರ್ಕಾರವಿದೆ. ಎರಡು ಸರ್ಕಾರಗಳು ತಕ್ಷಣ ಮೇಕೆದಾಟು ಯೋಜನೆಯನ್ನು ಮಾಡಬೇಕು ಎಂದು ಶಿವಕುಮಾರ್ ಅವರಿಗೆ ಆಗ್ರಹಿಸುತ್ತೇನೆ. ರಾಜಕೀಯ, ಎಲ್ಲ ಮೇಲಾಟಗಳನ್ನು ಬಿಟ್ಟು ಅಭಿವೃದ್ಧಿಯ ಕಡೆ ಗಮನಹರಿಸುವಂತೆ ಒತ್ತಾಯಿಸಿದರು. ಮೇಕೆದಾಟು ಯೋಜನೆಯನ್ನ ಪೂರ್ಣಮಾಡುವ ಕಡೆ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಗಮನ ಕೊಡಬೇಕು ಎಂದು ಹೇಳಿದರು.

## ಓಟಿನ ರಾಜಕೀಯ ಬಿಟ್ಟು ನೆರವು ನೀಡಿದರೆ ಶಿಕ್ಷಣ ವ್ಯವಸ್ಥೆ ಸುಧಾರಿಸಲು ಸಾಧ್ಯ: ಪ್ರತಿಪಕ್ಷ ನಾಯಕ ಅಶೋಕ್

**ಬೆಂಗಳೂರು, ಜೂ.20:** ರಾಜಕಾರಣಿಗಳು ಓಟಿಗಾಗಿ ರಾಜಕೀಯ ಮಾಡುವುದನ್ನು ಬಿಟ್ಟು ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಸಹಾಯ ಮಾಡಿದರೆ ಶಿಕ್ಷಣ ವ್ಯವಸ್ಥೆ ಸುಧಾರಿಸಲು ಸಾಧ್ಯ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಹೇಳಿದ್ದಾರೆ. ಚಂದ್ರಗುಪ್ತಮೌರ್ಯ ಆಟದ ಮೈದಾನದಲ್ಲಿ ರಕ್ಷಾ ಫೌಂಡೇಷನ್‌ನಿಂದ 14ನೇ ವರ್ಷದ ಉಚಿತ ನೋಟ್ ಪುಸ್ತಕ ವಿತರಣೆ, ಪ್ರತಿಭಾ ಪುರಸ್ಕಾರ ಮತ್ತು ವಿದ್ಯಾರ್ಥಿಗಳಿಗೆ ಲ್ಯಾಪ್ ಟಾಪ್ ವಿತರಣೆ, ಸಂಘ, ಸಂಸ್ಥೆಗಳಿಗೆ ದೇಣಿಗೆ, ವಿಕಲಚೇತನರಿಗೆ ವೀಲ್ ಚೇರ್ ವಿತರಿಸಿದರು. ಸಂಸದರಾದ ತೇಜಸ್ವಿಸೂರ್ಯ, ರಕ್ಷಾ ಫೌಂಡೇಷನ್ ಅಧ್ಯಕ್ಷ ಹಾಗೂ ಶಾಸಕರಾದ ಸಿ.ಕೆ.ರಾಮಮೂರ್ತಿ, ಎಂ.ಕೃಷ್ಣಪ್ಪ, ರವಿಸುಬ್ರಹ್ಮಣ್ಯ, ಸತೀಶ್ ರೆಡ್ಡಿ, ಬಿಗ್ ಬಾಸ್ ವಿನ್ನರ್ ನಟ ಗಿಲ್ಲಿ, ಜಯದೇವ ಆಸ್ಪತ್ರೆ ನಿರ್ದೇಶಕ ಡಾ.ಜಿ.ದಿನೇಶ್, ಬಿಬಿಎಂಪಿ ಮಾಜಿ ಸದಸ್ಯರಾದ ನಾಗರತ್ನ ರಾಮಮೂರ್ತಿ, ಕೇಂದ್ರ ಜಿಲ್ಲಾ ಬಿಜೆಪಿ ಅಧ್ಯಕ್ಷರಾದ ಸಪ್ತಗಿರಿಗೌಡ, ನಟಿ ತಾರ ಆನುರಾಧ ಅವರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

ನಂತರ ಮಾತನಾಡಿದ ಅಶೋಕ್, ಪ್ರತಿವರ್ಷ ರಕ್ಷಾ ಫೌಂಡೇಷನ್ ನಿಂದ ಮಕ್ಕಳ ಶಿಕ್ಷಣಕ್ಕಾಗಿ ಉಚಿತ ನೋಟ್ ಪುಸ್ತಕ, ಲ್ಯಾಪ್‌ಟಾಪ್, ವಿದ್ಯಾರ್ಥಿ ವೇತನ ವಿತರಿಸುವ ಪವಿತ್ರವಾದ ಕೆಲಸ ಮಾಡುತ್ತಿದ್ದಾರೆ. ಅಡಂಬರ, ಪ್ರಚಾರವಿಲ್ಲದೇ ಸಮಾಜಕ್ಕೆ ಸೇವೆ ಸಲ್ಲಿಸಬೇಕು. ರಕ್ಷಾ ಫೌಂಡೇಷನ್ ಸಮಾಜಮುಖಿಯಾಗಿ ಕೆಲಸ ಮಾಡುತ್ತಿದೆ. ಸಿ.ಕೆ. ರಾಮಮೂರ್ತಿ ಸೇವೆಗೆ ಮಾದರಿಯಾಗಿದ್ದು, ಇವರನ್ನು ಇತರ ಶಾಸಕರು ಸಹ ಅನುಕರಣೆ ಮಾಡಬೇಕು.

ದಿವಂಗತ ಶಾಸಕ ವಿಜಯಕುಮಾರ್ ಜಯನಗರ ವಿಧಾನಸಭಾ ಕ್ಷೇತ್ರ ಅಭಿವೃದ್ಧಿಗೆ ಸಾಕಷ್ಟು ಕೊಡುಗೆ ನೀಡಿದ್ದಾರೆ. ಅವರ ಶಿಷ್ಯರಾದ ಸಿ.ಕೆ.ರಾಮಮೂರ್ತಿ ಅವರ ಆದರ್ಶಗಳನ್ನು ಪಾಲಿಸುತ್ತಿದ್ದಾರೆ ಎಂದರು.

ಸಿ.ಕೆ. ರಾಮಮೂರ್ತಿ ಮಾತನಾಡಿ, ಶಿಕ್ಷಣದಿಂದ ದೇಶ ಅಭಿವೃದ್ಧಿಯಾಗಲಿದ್ದು, ವಿದ್ಯಾವಂತ ಸಮಾಜ ನಿರ್ಮಾಣ ಮಾಡಬೇಕು ಎಂಬ ಉದ್ದೇಶದಿಂದ ಕಳೆದ 14ವರ್ಷಗಳಿಂದ ನೋಟ್ ಪುಸ್ತಕ, ಲ್ಯಾಪ್‌ಟಾಪ್ ವಿತರಿಸುವ ಜೊತೆಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ರಕ್ಷಾ ಫೌಂಡೇಷನ್ ಮಕ್ಕಳ ಶಿಕ್ಷಣ ಮತ್ತು ಆರೋಗ್ಯ ರಕ್ಷಣೆ ಜೊತೆಗೆ ಪರಿಸರ ಉಳಿಸಿ ಬೆಳಸಲು ಶ್ರಮಿಸುತ್ತಿದೆ ಎಂದರು.



ಚಿಕ್ಕಮಗಳೂರಿನಲ್ಲಿ ನೀಟ್ ಪರೀಕ್ಷಾ ಕೇಂದ್ರಕ್ಕೆ ಭಾನುವಾರ ಮರು ಪರೀಕ್ಷೆ ನಿಗದಿಯಾಗಿರುವುದರಿಂದ ಶನಿವಾರ ಬಿಗಿ ಭದ್ರತೆ ಕೈಗೊಳ್ಳಲಾಗಿದೆ.

# ಮುಖ್ಯಮಂತ್ರಿ ಡಿಕೆಶಿ–ಪ್ರಣವಾನಂದ ಶ್ರೀ ಮಹತ್ವದ ಚರ್ಚೆ ಈಡಿಗ ಬಿಲ್ಲವರ ಕಲ್ಯಾಣದ ಬಗ್ಗೆ ಚಿಂತನೆ

**ಕಲಬುರಗಿ, ಜೂ.20–** ಈಡಿಗ ಬಿಲ್ಲವ ಸೇರಿದಂತೆ 26 ಪಂಗಡಗಳ ಬೇಡಿಕೆ ಹಾಗೂ ಇತರ ಗಂಭೀರ ವಿಷಯಗಳ ಕುರಿತಾಗಿ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರನ್ನು ಬ್ರಹ್ಮಶ್ರೀ ನಾರಾಯಣ ಗುರು ಶಕ್ತಿ ಪೀಠದ ಡಾ. ಪ್ರಣವಾನಂದ ಶ್ರೀಗಳು ಮುಖ್ಯಮಂತ್ರಿ ನಿವಾಸದಲ್ಲಿ ಭೇಟಿಯಾಗಿ ಮಹತ್ವದ ಚರ್ಚೆ ನಡೆಸಿದರು.

ಬೆಂಗಳೂರಿನ ಸದಾಶಿವನಗರದಲ್ಲಿರುವ ಮುಖ್ಯಮಂತ್ರಿಗಳ ನಿವಾಸದಲ್ಲಿ ಜೂ. 16ರಂದು ಭೇಟಿಯಾಗಿ ರಾಜ್ಯದಲ್ಲಿರುವ ಈಡಿಗ, ಬಿಲ್ಲವರು ಸೇರಿದಂತೆ 26 ಪಂಗಡಗಳು ಡಿ.ಕೆ ಶಿವಕುಮಾರ್ ಹಾಗೂ ರಾಜ್ಯ ಸರ್ಕಾರದಿಂದ ಬಯಸುವ ನಿರೀಕ್ಷೆಗಳ ಬಗ್ಗೆ ಮನವಿಯನ್ನು ಸಲ್ಲಿಸಿದರು.



ಬ್ರಹ್ಮಶ್ರೀ ನಾರಾಯಣ ಗುರು ನಿಗಮಕ್ಕೆ ಅನುದಾನ ಬಿಡುಗಡೆ ಹಾಗೂ ನಿರ್ದೇಶಕರ ನೇಮಕ ಬೆಂಗಳೂರಿನಲ್ಲಿ ನಾರಾಯಣ ಗುರು ಪ್ರತಿಮೆ ಸ್ಥಾಪನೆಗೆ ಜಮೀನು, ರಾಜ್ಯದ ಅತಿ ಹೆಚ್ಚು ಸಮುದಾಯದ ಜನರಿರುವ ಜಿಲ್ಲೆಗಳಿಗೆ ಅನುದಾನದ ಬಿಡುಗಡೆ, ಗೋಕರ್ಣದಲ್ಲಿ ಇತ್ತೀಚೆಗೆ ನಡೆದ ಈಡಿಗ ರಾಷ್ಟ್ರೀಯ ಮಹಾಮಂಡಳಿಯ 20 ಜಿಲ್ಲೆಗಳ ಪದಾಧಿಕಾರಿಗಳ ಸಭೆಯಲ್ಲಿ ಕೈಗೊಂಡ ನಿರ್ಣಯಗಳ ಜಾರಿಗೆ ಒತ್ತಾಯ ಹಾಗೂ ಅತಿ ಹಿಂದುಳಿದ ಸಮುದಾಯದವರನ್ನು ಸಮಾನವಾಗಿ ಕಂಡು ಅವರ ಕಲ್ಯಾಣಕ್ಕಾಗಿ ಯೋಜನೆ ಜಾರಿ ಮಾಡಿ ಕೂಡಲೇ ಕಾರ್ಯಕ್ರಮ ಘೋಷಿಸಬೇಕು ಮತ್ತು ಮುಖ್ಯವಾಹಿನಿಯಲ್ಲಿ ಸೇರಿಸಿಕೊಳ್ಳುವಂತೆ ಸಲಹೆ ನೀಡಿದರು. ಸಚಿವ ಸಂಪುಟ ವಿಸ್ತರಣೆಯ ವೇಳೆ ಕನಿಷ್ಠ ಇಬ್ಬರಿಗೆ ಸಚಿವ ಸ್ಥಾನ ನೀಡಬೇಕು. ಹಿರಿತನದ ಆಧಾರದ ಮೇಲೆ ಬೇಳೂರು ಗೋಪಾಲಕೃಷ್ಣ ಅವರಿಗೆ ಸಂಪುಟ ದರ್ಜೆಯ ಸ್ಥಾನಮಾನ ನೀಡುವಂತೆ ಕೂಡ ಮನವಿ ಮಾಡಿದರು.

ಸ್ವಾಮೀಜಿಯವರಿಂದ ಮನವಿ ಸ್ವೀಕರಿಸಿದ ನಂತರ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಮಾತನಾಡಿ ಸಮುದಾಯದ ಸಮಸ್ಯೆ ಹಾಗೂ ಬೇಡಿಕೆಗಳ ಬಗ್ಗೆ ಮನವರಿಕೆಯಾಗಿದ್ದು ಸೂಕ್ತ ತೀರ್ಮಾನ ಶೀಘ್ರದಲ್ಲೇ ಕೈಗೊಳ್ಳಲಾಗುವುದು. ಸ್ವಾಮೀಜಿಯವರ ಜೊತೆ ನಿಮ್ಮನ್ನು ಮತ್ತೆ ಸೇರಿಸಿ ಮಾತುಕತೆ ನಡೆಸಲಾಗುವುದು ಜಿಲ್ಲಾ ಭೇಟಿಯ ಸಂದರ್ಭದಲ್ಲಿ ನಿಮ್ಮನ್ನೆಲ್ಲ ಖುದ್ದಾಗಿ ಭೇಟಿ ಮಾಡಿ ಮಾತನಾಡುತ್ತೇನೆ ಎಂದು ಭರವಸೆ ನೀಡಿದರು. ಮುಖ್ಯಮಂತ್ರಿಗಳ ನಿವಾಸಕ್ಕೆ ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿದ 40ಕ್ಕೂ ಹೆಚ್ಚು ಮುಖಂಡರು ಮುಖ್ಯಮಂತ್ರಿಗಳಿಗೆ ಬ್ರಹ್ಮಶ್ರೀ ನಾರಾಯಣ ಗುರುಗಳ ಭಾವಚಿತ್ರ ಹಾಗೂ ಗಾಣಗಾಪುರ ದತ್ತನ ಪ್ರಸಾದ ನೀಡಿ ಗೌರವಿಸಿದರು.

# ಯುವಮೋರ್ಚಾದ ಹೋರಾಟವೇ ಬಿಜೆಪಿಯ ಶಕ್ತಿ: ಎಚ್.ರವೀಂದ್ರ

## ವಿಜಯನಗರ ವಿಧಾನಸಭಾ ಕ್ಷೇತ್ರದ ಬಿಜೆಪಿ ಯುವ ಮೋರ್ಚಾ ಸದಸ್ಯರಿಗೆ ಹೆಚ್ಚಿನ ಜವಾಬ್ದಾರಿ





ವಿಜಯನಗರ ವಿಧಾನಸಭಾ ಕ್ಷೇತ್ರ ಬಿಜೆಪಿ ಯುವ ಮೋರ್ಚಾದ ನೂತನ ಸದಸ್ಯರಿಗೆ ಬಿಜೆಪಿ ಮುಖಂಡ ಎಚ್.ರವೀಂದ್ರ ನೇಮಕಾತಿ ಆದೇಶ ಪ್ರತಿ ವಿತರಿಸಿದರು. ಈ ಸಂದರ್ಭದಲ್ಲಿ ಮಂಡಲ ಅಧ್ಯಕ್ಷ ವಿ.ರಾಮಾಂಜಿನಿ, ಉಪಾಧ್ಯಕ್ಷ ನರಸಿಂಹಮೂರ್ತಿ, ಪ್ರಧಾನ ಕಾರ್ಯದರ್ಶಿ ಎ.ಜಿ.ಆನಂದ್‌ಗೌಡ, ಗೋಪಿನಾಥ್ ರಾಜ್, ಬಸವನಗುಡಿ ಕ್ಷೇತ್ರದ ಮಾಜಿ ಮಂಡಲ ಅಧ್ಯಕ್ಷ ಗಿರೀಶ್ ಸೇರಿದಂತೆ ಮತ್ತಿತರಿದ್ದರು.

**ಬೆಂಗಳೂರು:** ವಿಜಯನಗರ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿ ಯುವ ಮೋರ್ಚಾ ಸಂಘಟನೆ ಹೊಸ ಉತ್ಸಾಹ, ಹೊಸ ದಿಕ್ಕು ಮತ್ತು ಶಕ್ತಿಶಾಲಿ ಕಾರ್ಯತಂತ್ರದೊಂದಿಗೆ ಮುನ್ನಡೆಯುತ್ತಿದ್ದು, ಮಂಡಲ ಮಟ್ಟದಲ್ಲಿ ಸರ್ವ ಸದಸ್ಯರಿಗೆ ಜವಾಬ್ದಾರಿಗಳನ್ನು ಹಂಚಿಕೆ ಮಾಡುವ ಮೂಲಕ ವಿಜಯನಗರ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿ ಪಕ್ಷದ ಸಂಘಟನೆಯ ಬಲವನ್ನು ಬಹುಪಟ್ಟು ಹೆಚ್ಚಿಸಲಾಗಿದೆ. ಹಾಗಾಗಿ ಬಿಜೆಪಿ ಯುವ ಮೋರ್ಚಾದ ಹೊಣೆಗಾರಿಕೆ ಜವಾಬ್ದಾರಿಗಳಿಗೆ ಉತ್ಸಾಹಿ ಯುವಕರಿಗೆ ವಹಿಸಲಾಗಿದೆ. ಅಧ್ಯಕ್ಷರಾಗಿ ರವಿರಾಜ್, ಉಪಾಧ್ಯಕ್ಷರುಗಳಾಗಿ ನವೀನ್. ಎನ್, ಆಶಿಶ್ ಬಿ.ಎಚ್ (ಅನೂಪ್), ಶ್ರೀನಿವಾಸ್.ಎಂ, ಕಾರ್ತಿಕ್.ಯು, ಪ್ರದೀಪ್.ಆರ್, ಅವಿನಾಶ್, ಎಂ, ಪ್ರಧಾನ ಕಾರ್ಯದರ್ಶಿಗಳಾಗಿ ಮೋಹನ್, ಅಭಿಷೇಕ್, ಕಾರ್ಯದರ್ಶಿಗಳಾಗಿ ಮನೋಜ್. ಎಚ್.ಎ, ಚಂದ್ರಶೇಖರ್. ಎಂ, ಅಭಿಷೇಕ್.ಪಿ, ಆಕಾಶ್.ಆರ್, ಕಾರ್ತಿಕ್ ಆರ್. ಎಸ್.ಟಿ, ವೀರಭದ್ರ.ಎಂ, ಅಕ್ಷಯ್.ಆರ್, ಕಾರ್ಯಕಾರಣಿ ಸದಸ್ಯರುಗಳಾಗಿ ಹೇಮಂತ್ ನಾಯಕ್.ಎಂ, ರಾಘವೇಂದ್ರ. ಎನ್, ಚಂದನ್.ಆರ್. ಶ್ರೇಯಸ್.ಆರ್. ಇವರುಗಳಿಗೆ ಬಿಜೆಪಿ ಮುಖಂಡರಾದ ಎಚ್.ರವೀಂದ್ರ, ವಿಜಯನಗರ ಕ್ಷೇತ್ರದ ಬಿಜೆಪಿ ಅಧ್ಯಕ್ಷ ವಿ.ರಾಮಾಂಜನಿ ಮತ್ತು ಪ್ರಧಾನ ಕಾರ್ಯದರ್ಶಿ ಎ.ಜಿ. ಆನಂದ್‌ಗೌಡ ಅವರು ಹೆಚ್ಚಿನ ಜವಾಬ್ದಾರಿ ನೀಡಿ ಕ್ಷೇತ್ರದಲ್ಲಿ ಪಕ್ಷ ಸಂಘಟನೆಗೆ ನಿಯುಕ್ತಿ ಮಾಡಿ ಆದೇಶ ಪ್ರತಿ ನೀಡಿದರು.

ಈ ಕರ್ತವ್ಯ ಹಂಚಿಕೆ ಸಾಮಾನ್ಯ ಆಡಳಿತಾತ್ಮಕ ಕ್ರಮವಲ್ಲ ; ಇದು ಕ್ಷೇತ್ರದಲ್ಲಿ ಬಿಜೆಪಿ ಸಂಘಟನೆಯನ್ನು ಬೂತ್ ಮಟ್ಟದಿಂದಲೇ ಬಲಿಷ್ಠಗೊಳಿಸುವ ದಿಟ್ಟ ಹೆಜ್ಜೆಯಾಗಿದೆ. ಪ್ರತಿಯೊಬ್ಬ ಕಾರ್ಯಕರ್ತನಿಗೂ ಸ್ಪಷ್ಟವಾದ ಜವಾಬ್ದಾರಿ ನೀಡಲಾಗಿದ್ದು, ಪಕ್ಷದ ಕಾರ್ಯಚಟುವಟಿಕೆಗಳನ್ನು ವೇಗವಾಗಿ ಮತ್ತು ಪರಿಣಾಮಕಾರಿಯಾಗಿ ಜಾರಿಗೆ ತರುವ ವ್ಯವಸ್ಥೆ ರೂಪುಗೊಂಡಿದೆ ಎಂದು ಬಿಜೆಪಿ ಮುಖಂಡ ಹೆಚ್.ರವೀಂದ್ರ ಯುವ ಮೋರ್ಚಾದ ಅಧ್ಯಕ್ಷರಿಗೆ ಪ್ರೋತ್ಸಾಹಿಸಿದ್ದಾರೆ.

ಯುವ ಮೋರ್ಚಾ ಕಾರ್ಯಕರ್ತರು ಈಗ ಕೇವಲ ಹೆಸರಿನ ಸದಸ್ಯರಲ್ಲ. ಅವರು ಕ್ಷೇತ್ರದ ಪ್ರತಿಯೊಂದು ಭಾಗದಲ್ಲೂ ಸಕ್ರಿಯ ಯೋಧರಂತೆ ಕಾರ್ಯನಿರ್ವಹಿಸುತ್ತಿದ್ದಾರೆ. ಸಂಘಟನೆಯ ಒಳಬಲ ಹೆಚ್ಚಿದಂತೆ, ಕ್ಷೇತ್ರದಲ್ಲಿ ಬಿಜೆಪಿ ಪ್ರಭಾವವೂ ಗಣನೀಯವಾಗಿ ಏರಿಕೆಯಾಗುತ್ತಿದೆ. ಈ ಸಂಘಟಿತ ಚಟುವಟಿಕೆಗಳ ಹಿಂದೆ ಯುವ ಮೋರ್ಚಾ ನಾಯಕ ಎಚ್. ರವೀಂದ್ರ ಅವರ ದಿಟ್ಟ ನಾಯಕತ್ವ ಪ್ರಮುಖ ಶಕ್ತಿಯಾಗಿದೆ. ಅವರ ಮಾರ್ಗದರ್ಶನದಲ್ಲಿ ಯುವಕರು ರಾಜಕೀಯ ಚಟುವಟಿಕೆಯಲ್ಲಿ ಉತ್ಸಾಹದಿಂದ ತೊಡಗಿಸಿಕೊಂಡು, ಪಕ್ಷದ ಧ್ಯೇಯವನ್ನು ಜನತೆಗೆ ತಲುಪಿಸುತ್ತಿದ್ದಾರೆ.

ಇದಕ್ಕೆ ಜೊತೆಯಾಗಿ, ವಿಜಯನಗರ ಮಂಡಲದ ಅಧ್ಯಕ್ಷ ವಿ. ರಾಮಾಂಜನಿ ಮತ್ತು ಪ್ರಧಾನ ಕಾರ್ಯದರ್ಶಿ ಎ.ಜಿ. ಆನಂದ್ ಗೌಡ ಅವರ ಸಮರ್ಥ ಮಾರ್ಗದರ್ಶನ ಸಂಘಟನೆಯ ಬಲವರ್ಧನೆಗೆ ಬೆನ್ನೆಲುಬಾಗಿದೆ. ಇವರ ತಂತ್ರಜ್ಞಾನ, ಶಿಸ್ತು ಮತ್ತು ಸಮನ್ವಯದ ಫಲವಾಗಿ ಯುವ ಮೋರ್ಚಾ ಚಟುವಟಿಕೆಗಳು ಅತ್ಯಂತ ವೇಗದಲ್ಲಿ ವಿಸ್ತರಿಸುತ್ತಿವೆ.

ಸಾಮಾಜಿಕ ಸೇವೆಗಳಿಂದ ಹಿಡಿದು ಜನಸಂಪರ್ಕ ಅಭಿಯಾನಗಳವರೆಗೆ, ಯುವ ಮೋರ್ಚಾ ಕಾರ್ಯಕರ್ತರು ಪ್ರತಿಯೊಂದು ಹಂತದಲ್ಲೂ ತಮ್ಮ ಸಾಮರ್ಥ್ಯವನ್ನು ತೋರಿಸುತ್ತಿದ್ದು, ವಿಜಯನಗರ ಕ್ಷೇತ್ರವನ್ನು ಬಿಜೆಪಿ ಭದ್ರ ಕೋಟೆಯಾಗಿ ರೂಪಿಸುವ ದಿಸೆಯಲ್ಲಿ ನಿರಂತರವಾಗಿ ಶ್ರಮಿಸುತ್ತಿದ್ದಾರೆ.

ಒಟ್ಟಿನಲ್ಲಿ, ಯುವ ಮೋರ್ಚಾದ ಈ ದಿಟ್ಟ ಹೆಜ್ಜೆಗಳು ಕೇವಲ ಸಂಘಟನಾ ಚಟುವಟಿಕೆಗಳಲ್ಲ. ಇದು ವಿಜಯನಗರ ಕ್ಷೇತ್ರದಲ್ಲಿ ಬಿಜೆಪಿ ಭವಿಷ್ಯವನ್ನು ರೂಪಿಸುವ ಮಹತ್ವದ ರಾಜಕೀಯ ಚಳುವಳಿಯಾಗಿದೆ. ಯುವಕರ ಶಕ್ತಿ, ನಾಯಕತ್ವದ ದೃಢತೆ ಮತ್ತು ಸಂಘಟನೆಯ ಏಕತೆ. ಇವೆಲ್ಲವೂ ಸೇರಿ ಬಿಜೆಪಿ ಪಕ್ಷವನ್ನು ಇನ್ನಷ್ಟು ಶಕ್ತಿಶಾಲಿಯಾಗಿ ಕಟ್ಟಿಕೊಡುತ್ತಿವೆ ಎಂದು ಹೇಳಬಹುದು.

# ನೀಟ್ ಪರೀಕ್ಷೆ: ನಿಷೇಧಾಜ್ಞೆ'

ವಿಜಯಪುರ,ಜೂ.20 ಜೂನ್ 21ರಂದು ನೀಟ್ ಪರೀಕ್ಷೆಯು ವಿಜಯಪುರ ನಗರದ ಒಟ್ಟು 19 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀ.ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾ ದಂಡಾಧಿಕಾರಿಗಳಾದ ಜಿಲ್ಲಾಧಿಕಾರಿ ಡಾ.ಆನಂದ.ಕೆ ಅವರು ಆದೇಶ ಹೊರಡಿಸಿದ್ದಾರೆ.

ಪರೀಕ್ಷಾ ಕೇಂದ್ರಗಳ 200 ಮೀ ವ್ಯಾಪ್ತಿಯಯಲ್ಲಿನ ಪರೀಕ್ಷಾ ಕೇಂದ್ರದ ಸಮೀಪದಲ್ಲಿರುವ ಝರಾಕ್ಸ್ ಅಂಗಡಿಗಳು, ಕಂಪ್ಯೂಟರ್ ಸೆಂಟರ್‌ಗಳು, ಇಂಟರನೆಟ್, ಸೈಬರ್ ಕೆಫೆಗಳು ಮತ್ತು ಕೋಚಿಂಗ್ ಕೇಂದ್ರಗಳು ಬೆಳಿಗ್ಗೆ 9:30 ಗಂಟೆಯಿಂದ ಪರೀಕ್ಷೆ ಮುಕ್ತಾಯವಾಗುವವರೆಗೆ ತೆರೆಯದಂತೆ ಆದೇಶಿಸಲಾಗಿದೆ.

ಪರೀಕ್ಷೆಯಲ್ಲಿ ತೊಡಗಿರುವ ಯಾವುದೇ ಅಧಿಕಾರಿ ಹಾಗೂ ಸಿಬ್ಬಂದಿಗಳು ಮತ್ತು ಇತರರರು ಮೊಬೈಲ್ ತರುವುದನ್ನು ಹಾಗೂ ಬಳಸುವುದನ್ನು ನಿಷೇಧಿಸಲಾಗಿದೆ

# ಜೂ.23: ಸಂವಿಧಾನ ನುಡಿ ಸಂಹಿತೆ ಕೃತಿ ಬಿಡುಗಡೆ

**ಬೆಂಗಳೂರು, ಜೂ.20:** ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಮಹತ್ವದ ಪ್ರಕಟಣೆಯಾಗಿ ಭಾರತದ ಸಂವಿಧಾನದಲ್ಲಿ ಭಾಷೆಗಳು ನಡೆದ ಹಾದಿಯ ಕುರಿತಾದ ಸಂವಿಧಾನ ನುಡಿ ಸಂಹಿತೆ ಎನ್ನುವ ಕೃತಿ ಜೂ.23ರಂದು ಬೆಂಗಳೂರಿನ ನಯನ ಸಭಾಂಗಣದಲ್ಲಿ ಬಿಡುಗಡೆಯಾಗಲಿದೆ.

ಡಾ. ಸಂತೋಷ ಹಾನಗಲ್ಲ ಸಂಪಾದಿಸಿರುವ ಈ ವಿಶಿಷ್ಟ ಕೃತಿಯಲ್ಲಿ ಸಂವಿಧಾನದಲ್ಲಿ ಭಾಷೆಗಳ ಕುರಿತು ನೀಡಲಾದ ಸ್ಥಾನಮಾನ, ಹಕ್ಕುಗಳು, ಜವಾಬ್ದಾರಿಗಳು ಮತ್ತು ಮೌಲ್ಯಗಳು ಹೇಗೆ ದೇಶದ ಏಕತೆಗೆ ಕಾರಣೀಭೂತವಾಗಿವೆ ಮತ್ತು ಇಲ್ಲಿನ ವೈವಿಧ್ಯತೆಯನ್ನು ಗೌರವಿಸುವ ನಮ್ಮ ಸಂಸ್ಕೃತಿಯ ವಿಶೇಷತೆಯನ್ನು ಪ್ರತಿಬಿಂಬಿಸಿವೆ ಎನ್ನುವ ಅಂಶಗಳನ್ನು ಅತ್ಯಂತ ಪರಿಣಾಮಕಾರಿಯಾಗಿ ನಿರೂಪಿಸಲಾಗಿದೆ.

# ಜು.25ರಿಂದ ರಾಷ್ಟ್ರೀಯ ಮಟ್ಟದ ಬೃಹತ್ ರೈತ ಸಮಾವೇಶ ಗಣ್ಯರ ದಂಡು ಕಲಬುರಗಿಗೆ: ಮಾಲೀಕಯ್ಯ ಗುತ್ತೇದಾರ್



**ಕಲಬುರಗಿ, ಜೂ.20–** ರಾಷ್ಟ್ರೀಯ ಮಟ್ಟದ ಬೃಹತ್ ರೈತ ಸಮಾವೇಶವನ್ನು ಜುಲೈ 25 ರಿಂದ ಮೂರು ದಿನಗಳ ಕಾಲ ಹಮ್ಮಿಕೊಳ್ಳಲಾಗಿದೆ.ಇದರಲ್ಲಿ ಕೇಂದ್ರ ಮತ್ತು ರಾಜ್ಯ ಸಚಿವರು ಹಾಗೂ ರಾಜ್ಯದ ಮುಖ್ಯಮಂತ್ರಿಗಳು ಪಾಲ್ಗೊಳ್ಳಲಿದ್ದಾರೆ ಎಂದು ಮಾಜಿ ಸಚಿವರು ಹಾಗೂ ಬೃಹತ್ ರೈತ ಸಮಾವೇಶದ ಸ್ವಾಗತ ಸಮಿತಿಯ ಅಧ್ಯಕ್ಷರಾದ ಮಾಲೀಕಯ್ಯ ಗುತ್ತೇದಾರ್ ತಿಳಿಸಿದರು.

ಕಲಬುರಗಿಯ ಹೋಟೆಲ್ ಬೃಂದಾವನ ಗ್ರ್ಯಾಂಡ್ ನಲ್ಲಿ ಜೂನ್ 20 ರಂದು ಜಿಲ್ಲಾ ಹೋಟೆಲ್ ಅಸೋಸಿಯೇಷನ್ ಜೊತೆ ಸ್ವಾಗತ ಸಮಿತಿ ಹಾಗು ನವ ಕರ್ನಾಟಕ ರೈತ ಸಮಿತಿ ನೇತೃತ್ವದಲ್ಲಿ ನಡೆಸಿದ ಪೂರ್ವಸಿದ್ಧತಾ ಸಭೆಯ ನಂತರ ಸುದ್ದಿಗಾರರ ಜೊತೆ ಮಾತನಾಡಿ ಕಲಬುರಗಿಯ ಶ್ರೀ ಶರಣ ಬಸವೇಶ್ವರ ಜಾತ್ರಾ ಮೈದಾನದಲ್ಲಿ ಜುಲೈ 25, 26 ಮತ್ತು 27ರಂದು ಮೂರು ದಿನ ರಾಷ್ಟ್ರೀಯ ಮಟ್ಟದ ಬೃಹತ್ ರೈತ ಸಮಾವೇಶ ಹಮ್ಮಿಕೊಳ್ಳಲಾಗಿದೆ.

ಕೇಂದ್ರ ಕೃಷಿ ಸಚಿವರಾದ ಶಿವರಾಜ್ ಸಿಂಗ್ ಚೌಹಾಣ್, ಉಕ್ಕು ಮತ್ತು ಗಣಿ ಖಾತೆ ಸಚಿವರಾದ ಎಚ್. ಡಿ ಕುಮಾರಸ್ವಾಮಿ, ಸಾರಿಗೆ ಸಚಿವರಾದ ನಿತಿನ್ ಗಡ್ಕರಿ, ನಾಗರಿಕ ಪೂರೈಕೆ ಹಾಗೂ ಗ್ರಾಹಕ ವ್ಯವಹಾರ ಸಚಿವರಾದ ಪ್ರಲ್ಹಾದ ಜೋಶಿ, ಜಲಸಂಪನ್ಮೂಲ ಸಚಿವರಾದ ಸಿ.ಆರ್ ಪಾಟೀಲ್, ಲೋಕಸಭಾ ಸ್ಪೀಕರ್ ಓಂ ಬಿರ್ಲಾ, ಮುಖ್ಯಮಂತ್ರಿಗಳಾದ ಡಿ.ಕೆ ಶಿವಕುಮಾರ್, ಜಲ ಸಂಪನ್ಮೂಲ ಸಚಿವರಾದ ರಾಮಲಿಂಗಾ ರೆಡ್ಡಿ, ಗೃಹ ಸಚಿವರಾದ ಪ್ರಿಯಾಂಕ ಖರ್ಗೆ, ಸಾಮಾಜಿಕ ಹೋರಾಟಗಾರ ಅಣ್ಣಾ ಹಜಾರೆ, ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆ, ಕೊಪ್ಪಳದ ಗವಿಸಿದ್ದೇಶ್ವರ ಸ್ವಾಮೀಜಿ, ಕನ್ಹೇರಿ ಮಠದ ಕಾಡಸಿದ್ದೇಶ್ವರ ಸ್ವಾಮೀಜಿ, ನೀರಾವರಿ ತಜ್ಞ ರಾಜಸ್ಥಾನದ ರಾಜೇಂದ್ರ ಸಿಂಗ್ ಬಾಬು ಸೇರಿದಂತೆ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದ ತಜ್ಞರು ಪಾಲ್ಗೊಳ್ಳಲಿದ್ದಾರೆ ಎಂದರು.

**ಸಮ್ಮೇಳನದ ಆಶಯ**

ರಾಷ್ಟ್ರೀಯ ಮಟ್ಟದ ಮೂರು ದಿನಗಳ ಬೃಹತ್ ರೈತ ಸಮಾವೇಶದಲ್ಲಿ ಸಾವಯವ ಕೃಷಿಗೆ ಉತ್ತೇಜನ, ಡಾ. ಸ್ವಾಮಿನಾಥನ್ ವರದಿಯ ಆಧಾರದ ಮೇಲೆ ಬೆಂಬಲ ಬೆಲೆ ಘೋಷಣೆ ಮತ್ತು ಸರಕಾರವೇ ಕೃಷಿ ಉತ್ಪನ್ನ ಖರೀದಿ, ಗ್ರಾಮ ಸ್ವರಾಜ್ ಜಾರಿ, ದೇಸಿ ಆಹಾರ ಪದ್ಧತಿಯ ಶೈಲಿ ಮುಂತಾದ ಆಶಯಗಳನ್ನು ಇಟ್ಟುಕೊಂಡು ವಿಚಾರಗೋಷ್ಠಿ ಮತ್ತು ಸಮಾವೇಶ ನಡೆಯಲಿದೆ. ಸಮಾವೇಶ ದಲ್ಲಿ ನಿರ್ಣಯ ಮಂಡಿಸಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಗೆ ಪ್ರಸ್ತಾಪ ಸಲ್ಲಿಸಲಾಗುವುದು. ಇದಕ್ಕಾಗಿ ರಾಷ್ಟ್ರದ ಉದ್ದಗಲಕ್ಕೂ ಪ್ರವಾಸ ಮಾಡಿ ಜಾಗೃತಿಯನ್ನು ಮೂಡಿಸಲಾ ಗುತ್ತಿದೆ. ಜೂನ್ 24ರಂದು ಕೃಷಿ ತಜ್ಞರನ್ನು ಭೇಟಿಯಾಗಲು ಗುಜರಾತ್ ಪ್ರವಾಸ ಕೈಗೊಳ್ಳಲಾಗುವುದು ಎಂದರು.

**20 ಉಪ ಸಮಿತಿಗಳ ರಚನೆ**

ಮೂರು ದಿನಗಳ ಸಮಾವೇಶದ ಯಶಸ್ವಿಗಾಗಿ ಸ್ವಾಗತ ಸಮಿತಿಯ ಜೊತೆಗೆ 20 ಉಪಸಮಿತಿಗಳನ್ನು ರಚಿಸಲಾಗಿದೆ. ವಸತಿ, ಸಾರಿಗೆ, ಆಹಾರಕ್ಕಾಗಿ ವಿಶೇಷ ಒತ್ತು ನೀಡಲಾಗಿದೆ. ಆರ್ಥಿಕ ಬಗ್ಗೆ ಚರ್ಚಿಸಿ ನಿರ್ಧಾರ ಕೈಗೊಳ್ಳಲಾಗಿದೆ. ಸಮ್ಮೇಳನಕ್ಕೆ ಪಕ್ಷಾತೀತವಾಗಿ ಎಲ್ಲರನ್ನು ಆಹ್ವಾನಿಸಲಾಗಿದೆ. ಜೊತೆಗೆ ಡಾ. ಬಸವರಾಜ ಪಾಟೀಲ್ ಸೇಡಂ ದಯಾನಂದ ಪಾಟೀಲ್ ಮಾಲಿಕಯ್ಯ ಗುತ್ತೇದಾರ್ ಬಸವರಾಜ್ ದೇಶ ಮುಖ್ ಮತ್ತು ಶಿವಕಾಂತ್ ಮಹಾಜನ್ ಜಿ.ಕೆ ಪಾಟೀಲ್, ತೇಲಕೂರ್ ಸಂತೋಷ್ ಗುತ್ತೇದಾರ್ ಅಳಂದ ದಿವ್ಯಾ ಹಾಗರಗಿ ಇವರನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿದೆ ಎಂದು ಗುತ್ತೇದಾರ್ ಹೇಳಿದರು.

# ರೌಡಿನಿಗ್ರಹ ತಂಡಗಳನ್ನು ರಚಿಸಿದ ಎಸ್‌ಪಿ ಡಾ.ಸುಮನ್ ಪನ್ನೇಕರ್

**ಬಳ್ಳಾರಿ, ಜೂ,20–**ಎಸ್ಪಿ ಡಾ.ಸುಮನ್ ಡಿ.ಪನ್ನೇಕರ್ ಜಿಲ್ಲೆಯಲ್ಲಿ 3 ರೌಡಿ ನಿಗ್ರಹ ತಂಡಗಳನ್ನು ರಚನೆ ಮಾಡಿದ್ದಾರೆ. ರೌಡಿಗಳ ಕಾನೂನು ಬಾಹಿರ ಚಟುವಟಿಕೆಗಳನ್ನು ನಿಯಂತ್ರಿಸಲು ಎಸಗಪಿಯವರು ತಮ್ಮ ಅಧೀನದಲ್ಲಿ ಬಳ್ಳಾರಿ ನಗರ, ಸಿರುಗುಪ್ಪ ತೋರಣಗಲ್ಲು ಉಪ–ವಿಭಾಗದ ಡಿ.ಎಸ್.ಪಿ.ಗಳ ನೇತೃತ್ವದಲ್ಲಿ ಸಿ.ಪಿ.ಐ.ಪಿ.ಐ ಹಾಗೂ ಅಧಿಕಾರಿ/ಸಿಬ್ಬಂದಿಯವರನ್ನೊಳಗೊಂಡ ರೌಡಿ ನಿಗ್ರಹ ತಂಡಗಳನ್ನು ನೇಮಕ ಮಾಡಿದ್ದಾರೆ.


ಈ ತಂಡಗಳು ಉಪ–ವಿಭಾಗದ ವ್ಯಾಪ್ತಿಯಲ್ಲಿನ ಎಲ್ಲಾ ರೌಡಿಗಳ ಚಲನ ವಲನಗಳ ಮೇಲೆ ನಿಗಾವಣೆ ಇರಿಸಿ ಅವರ ವಿರುದ್ಧ ಈಗಾಗಲೆ ದಾಖಲಾದ ಪ್ರಕರಣಗಳ ಪರಿ ಶೀಲನೆ, ದಾಖಲಾತಿ ನಿರ್ವಹಣೆ, ಪದೇಪದೇ ಕಾನೂನು ಬಾಹಿರ ಕೃತ್ಯಗಳಲ್ಲಿ ಬಾಗಿಯಾದ ವ್ಯಕ್ತಿಗಳ ಗಡಿಪಾರು, ಗೂಂಡಾ ಕಾಯ್ದೆ, ಹಾಗೂ ಕೋಕಾ ಕಾಯ್ದೆ ಅಡಿಯಲ್ಲಿ ಕ್ರಮ ಕೈಗೊಳ್ಳುವುದು, ಸೂಕ್ಷ್ಮ ಪ್ರದೇಶಗಳಲ್ಲಿ ಹಠಾತ್ ದಾಳಿ ಕೈಗೊಂಡು. ಚೆಕ್ ಮಾಡಿ ಕ್ರಮ ಕೈಗೊಳ್ಳುವುದು ತಂಡದ ಸದಸ್ಯರುಗಳಿಗೆ ಜವಾಬ್ದಾರಿ ಯಾಗಿದೆ.



# ಪುರಾತತ್ವ ಇಲಾಖೆ ನಿರ್ಲಕ್ಷ್ಯ: ರಾಯಚೂರು ಕೋಟೆ ಮೇಲೆ ಬೆಳೆದ ಗಿಡಮರ: ಗೋಡೆ ಶಿಥಿಲ

**ರಾಯಚೂರು, ಜೂ. 20:** ನಗರದ ಕೇಂದ್ರ ಬಸ್ ನಿಲ್ದಾಣದ ಬಳಿ ಇರುವ ಐತಿಹಾಸಿಕ ರಾಯಚೂರು ಕೋಟೆ ಗೋಡೆಯ ಮೇಲೆ ಗಿಡಗಳನ್ನು ನೆಟ್ಟು ಬೆಳೆಸುತ್ತಿರುವ ಕಾರಣ ಕೋಟೆ ಗೋಡೆ ಶಿಥಿಲಗೊಳ್ಳುತ್ತಿವೆ. ಕ್ರಿ.ಶ. 1294ರಲ್ಲಿ ಕಾಕತೀಯ ರಾಜಮನೆತನದ ರಾಣಿ ರುದ್ರಮ್ಮ ದೇವಿ ಆಳ್ವಿಕೆಯಲ್ಲಿ ನಿರ್ಮಿಸಿದ ಕೋಟೆಯು ರಾಜ್ಯ ಪುರಾತತ್ವ, ವಸ್ತುಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಅಧೀನದಲ್ಲಿದ್ದರೂ ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ಕೋಟೆಯ ಗೋಡೆ ಜನರ ಕಣ್ಣೆದುರಲ್ಲೇ ಹಾಳಾಗುತ್ತಿದೆ.

15ರಿಂದ 20 ಅಡಿ ಎತ್ತರದ ಕೋಟೆಯ ಗೋಡೆ ಹಾಗೂ ಬುರುಜುಗಳ ಮೇಲೆ ಗಿಡಗಳನ್ನು ನೆಟ್ಟು ಪೋಷಿಸಲಾಗುತ್ತಿದೆ. ಬೆಳೆದ ಕೆಲವು ಮರಗಳ ಬೇರುಗಳಿಂದಾಗಿ ಕೋಟೆ ಗೋಡೆಯಲ್ಲಿ ಬಿರುಕುಬಿಡುತ್ತಿದೆ. ಕೋಟೆ ಮೇಲೆ ನೆಟ್ಟಿರುವ ಗಿಡಗಳು ಬೃಹದಾಕಾರದಲ್ಲಿ ಬೆಳೆಯುತ್ತಿದ್ದು, ಕೋಟೆಯ ಗೋಡೆಯ ಕಲ್ಲುಗಳು ಸಡಿಲಗೊಳ್ಳಲಾರಂಭಿಸಿವೆ.



ರಾಯಚೂರು ಜಿಲ್ಲೆಯಲ್ಲಿ ಅನೇಕ ಐತಿಹಾಸಿಕ ಸ್ಮಾರಕಗಳು ಇದ್ದರೂ ಸರ್ಕಾರ ಅವುಗಳ ಸಂರಕ್ಷಣೆ ಮಾಡದ ಕಾರಣ ಪಾಳುಬಿದ್ದು ಕಾಲಗರ್ಭ ಸೇರುತ್ತಿವೆ. ಅಧಿಕಾರಿಗಳ ನಿರ್ಲಕ್ಷ್ಯದಿಂದ ಸ್ಮಾರಕ ಗಳೇ ಹಾಳಾಗುತ್ತಿವೆ. ಅವುಗಳ ಸ್ಥಿತಿಗತಿಗಳ ಮೇಲೆ ಬೆಳಕು ಚೆಲ್ಲಲು ವಿಶೇಷ ವರದಿಗಳ ಸರಣಿ ಆರಂಭಿಸಲಾಗಿದೆ.

ಎರಡು ತಿಂಗಳ ಹಿಂದೆ ಕೋಟೆ ಮೇಲೆ ಮೆಕ್ಕಾ ದರ್ವಾಜಾದಿಂದ ಜೆಸ್ಕಾಂ ಕಚೇರಿವರೆಗೂ ಮತ್ತೆ 20ಕ್ಕೂ ಅಧಿಕ ಬೇವು, ಗುಲ್‌ಮೋಹರ್ ಗಿಡಗಳನ್ನು ನೆಡಲಾಗಿದೆ. ಮರಗಳಿಂದಾಗಿ ಕೋಟೆಗೆ ಹಾನಿಯಾಗುತ್ತಿದೆ ಎಂದು ರಾಜ್ಯ ಪುರಾತತ್ವ ಇಲಾಖೆ ಅಧಿಕಾರಿಗಳಿಗೆ ಸಾಮಾಜಿಕ ಸಂಘಟನೆಗಳ ಸದಸ್ಯರು ಹಾಗೂ ಸಾರ್ವಜನಿಕರು ದೂರು ಕೊಟ್ಟರೂ ಅಧಿಕಾರಿಗಳು ಸ್ಪಂದಿಸುತ್ತಿಲ್ಲ.

ಸ್ಮಾರಕಗಳ ರಕ್ಷಣೆಗೆ ಪ್ರವಾಸೋದ್ಯಮ ಇಲಾಖೆಯು 'ಪ್ರವಾಸಿ ಮಿತ್ರ' ಯೋಜನೆ ಅಡಿಯಲ್ಲಿ ಇಲ್ಲಿ ಒಬ್ಬ ಕಾವಲುಗಾರರನ್ನು ಒದಗಿಸಿದೆ.

**ಕೋಟೆ ನಮ್ಮ ಇಲಾಖೆಯ ಅಧೀನದಲ್ಲೇ ಇದೆ. ಕೋಟೆ ಮೇಲೆ ಯಾರು ಗಿಡಗಳನ್ನು ನೆಟ್ಟು ಬೆಳೆಸುತ್ತಿದ್ದಾರೆ ಗೊತ್ತಿಲ್ಲ. ಅಲ್ಲಿಗೆ ಭೇಟಿ ನೀಡಿ ಪರಿಶೀಲಿಸಲಾಗುವುದು.**

**–ಶಿವಪ್ರಕಾಶ, ರಾಜ್ಯ ಪುರಾತತ್ವ, ವಸ್ತು ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆ ಅಧಿಕಾರಿ.**

ಆದರೆ, ಪುರಾತತ್ವ ಇಲಾಖೆಯ ಅಧಿಕಾರಿಗಳು ಸ್ಮಾರಕ ರಕ್ಷಣೆ ಬಗ್ಗೆ ತಲೆ ಕೆಡಿಸಿಕೊಳ್ಳುತ್ತಿಲ್ಲ ಎಂದು ಸ್ಥಳೀಯರು ದೂರುತ್ತಿದ್ದಾರೆ.

'ಕೋಟೆ ಗೋಡೆಗಳ ಮೇಲೆ ಗಿಡಗಳನ್ನು ನೆಟ್ಟು ಸ್ಮಾರಕ ಹಾಳು ಮಾಡದಂತೆ ಪ್ರಾಚ್ಯವಸ್ತು ಇಲಾಖೆಯ ಅಧಿಕಾರಿಗಳಿಗೆ ಮನವಿ ಮಾಡಿದ್ದೇವೆ. ಆದರೆ, ಅವರು ಸ್ಪಂದಿಸುತ್ತಿಲ್ಲ. ಗೋಡೆ ಮೇಲೆ ಗಿಡ ಬೆಳೆಸಿದರೆ ಎಂತಹ ಕಟ್ಟಡವೂ ಹಾಳಾಗುತ್ತದೆ ಎಂಬುದು ಜನಸಾಮಾನ್ಯರಿಗೂ ಗೊತ್ತು. ಅಧಿಕಾರಿಗಳ ಅಚಾತುರ್ಯದಿಂದಲೇ ರಾಯಚೂರಿನ ಸ್ಮಾರಕಗಳಿಗೆ ಧಕ್ಕೆಯಾಗುತ್ತಿದೆ' ಎಂದು ರಾಯಚೂರು ಕೋಟೆ ಅಧ್ಯಯನ ಸಮಿತಿ ಕಾರ್ಯದರ್ಶಿ ಸೈಯದ್ ಹಫೀಜುಲ್ಲಾ ಬೇಸರ ವ್ಯಕ್ತಪಡಿಸುತ್ತಾರೆ.

# ಗೃಹಸಚಿವರ ಜಿಲ್ಲೆಯಲ್ಲೇ ಲಂಚಕ್ಕೆ ಕೈಚಾಚಿದ ಪಿಎಸ್‌ಐ, ಪಿಸಿ ಲೋಕಾ ಬಲೆಗೆ!



**ಕಲಬುರಗಿ, ಜೂ. 20:** ಗೃಹ ಸಚಿವರ ತವರು ಜಿಲ್ಲೆಯಲ್ಲೇ ಅಕ್ಕಿ ವ್ಯಾಪಾರ ಮಾಡಲು ಅನುಕೂಲ ಮಾಡಿಕೊಡಲು ಬರೋಬ್ಬರಿ 50 ಸಾವಿರ ರೂಪಾಯಿ ಲಂಚಕ್ಕೆ ಬೇಡಿಕೆಯಿಟ್ಟು, ಮುಂಗಡವಾಗಿ ಫೋನ್ ಪೇ ಮೂಲಕ ಹಣ ಪಡೆದು, ಉಳಿದ ಹಣ ಸ್ವೀಕರಿಸುತ್ತಿದ್ದ ಯಡ್ರಾಮಿ ಪೊಲೀಸ್ ಠಾಣೆಯ ಪಿಎಸ್‌ಐ ಹಾಗೂ ಕಾನ್‌ಸ್ಟೆಬಲ್ ಇಬ್ಬರೂ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.

ಯಡ್ರಾಮಿ ಪೊಲೀಸ್ ಠಾಣೆಯ ಪಿಎಸ್‌ಐ ವಿಶ್ವನಾಥ್ ರೆಡ್ಡಿ ಮುದ್ರಡ್ಡಿ ಹಾಗೂ ಪೊಲೀಸ್ ಪೇದೆ ಸಿದ್ದಣ್ಣ ಬಿರಾದರ್ ಲೋಕಾಯುಕ್ತ ಅಧಿಕಾರಿಗಳಿಂದ ರೆಡ್ ಹ್ಯಾಂಡ್ ಆಗಿ ಬಂಧನಕ್ಕೊಳಗಾದ ಆರೋಪಿ ಎಂದು ಗುರುತಿಸಲಾಗಿದೆ.

ಘಟನೆಯ ಹಿನ್ನೆಲೆ: ಜಿಲ್ಲೆಯ ಯಡ್ರಾಮಿ ತಾಲೂಕಿನ ನಿವಾಸಿಯಾದ ಆನಂದ್ ಕುಮಾರ್ ಎಂಬುವವರು ಅಕ್ಕಿ ವ್ಯಾಪಾರ ಮಾಡಲು ಉದ್ದೇಶಿಸಿದ್ದರು. ಈ ವೇಳೆ ಯಡ್ರಾಮಿ ಠಾಣೆಯ ಪಿಎಸ್‌ಐ ವಿಶ್ವನಾಥ ಮುದ್ದರೆಡ್ಡಿ ಅವರು ವ್ಯಾಪಾರಕ್ಕೆ ಅನುಕೂಲ ಮಾಡಿಕೊಡಲು 50 ಸಾವಿರ ರೂಪಾಯಿ ಲಂಚ ನೀಡಬೇಕು ಎಂದು ಬೇಡಿಕೆಯಿಟ್ಟಿದ್ದರು. "ನೋಡಿ ಸರ್, ನಾವು ಬಡವರು" ಎಂದು ದೂರುದಾರರು ಬದ್ಧಿ ಮಾಡಿಕೊಂಡರೂ ಕೇಳದ ಪಿಎಸ್‌ಐ, 50 ಸಾವಿರ ಕೊಟ್ಟರೆ ಮಾತ್ರ ವ್ಯಾಪಾರ ಮಾಡಲು ಬಿಡುತ್ತೇವೆ ಎಂದು ಖಡಕ್ ಆಗಿ ಹೇಳಿದ್ದಾರೆ.

ಅಲ್ಲದೆ, ತಮ್ಮ ಮೊಬೈಲ್ ಸ್ಕ್ರೀನ್ ಮೇಲೆ ಆನ್‌ಲೈನ್ ಪೇಮೆಂಟ್ ನಂಬರ್ ತೋರಿಸಿ ಅದಕ್ಕೆ ಹಣ ಹಾಕುವಂತೆ ಸೂಚಿಸಿದ್ದಾರೆ. ಅದರಂತೆ ಆನಂದ್ ಕುಮಾರ್ ಅವರು ಮೊದಲ ಕಂತಾಗಿ 20 ಸಾವಿರ ರೂಪಾಯಿಯನ್ನು ಫೋನ್ ಪೇ ಮೂಲಕ ಕಳುಹಿಸಿದ್ದರು. ಆದರೂ ತೃಪ್ತರಾಗದ ಪಿಎಸ್‌ಐ ವಿಶ್ವನಾಥ್ ರೆಡ್ಡಿ ಹಾಗೂ ಕಾನ್‌ಸ್ಟೆಬಲ್ ಸಿದ್ದಣ್ಣ ಬಿರಾದರ್, ಉಳಿದ 30 ಸಾವಿರ ರೂಪಾಯಿ ಹಣವನ್ನು ಆದಷ್ಟು ಬೇಗ ನೀಡಬೇಕು ಎಂದು ಪೀಡಿಸುತ್ತಿದ್ದರು. ಲಂಚ ನೀಡಲು ಇಷ್ಟವಿಲ್ಲದ ಆನಂದ್ ಕುಮಾರ್ ಅವರು ಈ ಕುರಿತು ಕಲಬುರಗಿ ಲೋಕಾಯುಕ್ತ ಅಧಿಕಾರಿಗಳಿಗೆ ಅಧಿಕೃತ ದೂರು ನೀಡಿದ್ದರು. ದೂರಿನ ಅನ್ವಯ ಲೋಕಾಯುಕ್ತ ಪೊಲೀಸರು ವ್ಯವಸ್ಥಿತವಾಗಿ ಕಾರ್ಯಾಚರಣೆಯ ಜಾಲ ಹೆಣೆದಿದ್ದರು.

# ಸರ್ಕಾರಿ ಶಾಲಾ ಮಕ್ಕಳಿಗೆ ಇನ್ನರ್‌ವೀಲ್ ಟ್ರಸ್ಟ್ ವತಿಯಿಂದ ಊಟದ ತಟ್ಟೆಗಳ ವಿತರಣೆ

ಬಳ್ಳಾರಿ, ಜೂ.20: ನಗರದ 35ನೇ ವಾರ್ಡಿನ ಇಂದಿರಾನಗರದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಇನ್ನರ್ ವೀಲ್ ಕ್ಲಬ್ ಆಫ್ ಬಳ್ಳಾರಿ ವತಿಯಿಂದ ಸುಮಾರು 250 ಊಟದ ತಟ್ಟೆಗಳನ್ನು ವಿತರಿಸಲಾಯಿತು.

ವಾರ್ಡ್ ಸದಸ್ಯ ಶ್ರೀನಿವಾಸುಲು ಮಿಂಚು ಅವರ ನೇತೃತ್ವದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳ ಮಧ್ಯಾಹ್ನದ ಊಟದ ವ್ಯವಸ್ಥೆಗೆ ನೆರವಾಗುವ ಉದ್ದೇಶದಿಂದ ತಟ್ಟೆಗಳನ್ನು ವಿತರಿಸಲಾಯಿತು.

ಈ ಕುರಿತು ಮಾತನಾಡಿದ ಗಣ್ಯರು, ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಹಾಗೂ ಮಕ್ಕಳ ಮೂಲಭೂತ ಅಗತ್ಯಗಳ ಪೂರೈಕೆಗೆ ಸಮಾಜದ ವಿವಿಧ ಸಂಘ–ಸಂಸ್ಥೆಗಳು ಕೈ ಜೋಡಿಸುವುದು ಶ್ಲಾಘನೀಯ ಕಾರ್ಯ ಎಂದು ಅಭಿಪ್ರಾಯಪಟ್ಟರು.

# ನಾಗೇಂದ್ರ ಸಚಿವರಾಗಲೆಂದು ದರ್ಗಾದಲ್ಲಿ ವಿಶೇಷ ಪ್ರಾರ್ಥನೆ

**ಬಳ್ಳಾರಿ, ಜೂ 20:** ಬಳ್ಳಾರಿ ಗ್ರಾಮಾಂತರ ಕ್ಷೇತ್ರದ ಶಾಸಕ ಬಿ. ನಾಗೇಂದ್ರ ಅವರು ರಾಜ್ಯ ಸಚಿವ ಸಂಪುಟದಲ್ಲಿ ಸ್ಥಾನ ಪಡೆಯಲೆಂದು ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಬಳ್ಳಾರಿ ತಾಲೂಕಿನ ಹೊನ್ನಳ್ಳಿ ಗ್ರಾಮದಲ್ಲಿರುವ ಹಜರತ್ ದಿವಾನ ಪೀರ್ ದರ್ಗಾಕ್ಕೆ ಭೇಟಿ ನೀಡಿದ ಕಾಂಗ್ರೆಸ್ ಮುಖಂಡರು, ದರ್ಗಾದಲ್ಲಿ ಚಾದರ್ ಹೊದಿಸಿ ಪ್ರಾರ್ಥನೆ ಸಲ್ಲಿಸಿದರು. ಬಿ. ನಾಗೇಂದ್ರ ಅವರಿಗೆ ಸಚಿವ ಸ್ಥಾನ ದೊರೆಯುವುದರೊಂದಿಗೆ ಜಿಲ್ಲೆಯ ಅಭಿವೃದ್ಧಿಗೆ ಮತ್ತಷ್ಟು ವೇಗ ಸಿಗಲಿ ಎಂದು ಅವರು ಬೇಡಿಕೊಂಡರು. ರಾಜ್ಯದಲ್ಲಿ ಸಚಿವ ಸಂಪುಟ ವಿಸ್ತರಣೆಯ ಕುರಿತು ಚರ್ಚೆಗಳು ನಡೆಯುತ್ತಿರುವ ಹಿನ್ನೆಲೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರ ಈ ನಡೆ ರಾಜಕೀಯ ವಲಯದಲ್ಲಿ ಗಮನ ಸೆಳೆದಿದೆ. ಬಿ. ನಾಗೇಂದ್ರ ಅವರಿಗೆ ಸಚಿವ ಸ್ಥಾನ ದೊರೆಯುವ ನಿರೀಕ್ಷೆಯಲ್ಲಿ ಅವರ ಬೆಂಬಲಿಗರು ವಿವಿಧ ಧಾರ್ಮಿಕ ಕೇಂದ್ರಗಳಲ್ಲಿ ವಿಶೇಷ ಪೂಜೆ ಹಾಗೂ ಪ್ರಾರ್ಥನೆಗಳನ್ನು ನಡೆಸುತ್ತಿರುವುದು ಕಂಡು ಬಂದಿದೆ.

### ಕರೇಜ್ (ನೀರು ಸರಬರಾಜು ಸುರಂಗ ಮಾರ್ಗ) ಪ್ರವಾಸಿತಾಣವಾಗಿ ಅಭಿವೃದ್ಧಿ

## ಜೂ.24, 25ರಂದು ಸ್ಥಳ ಪರಿಶೀಲಿಸಲಿರುವ ವಿಶೇಷ ತಂಡ: ಜಿಲ್ಲಾಧಿಕಾರಿಯಿಂದ ಸ್ಥಳ ಪರಿಶೀಲನೆ

**ವಿಜಯಪುರ,ಜೂ.20:**ನಗರದ ಐತಿಹಾಸಿಕ ಕರೇಜ್ ವ್ಯವಸ್ಥೆಯನ್ನು ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿ ಪಡಿಸುವ ಉದ್ದೇಶದಿಂದ ಇಂಡಿಯನ್ ಹೆರಿಟೇಜ್ ಸಿಟಿ ನೆಟ್ ವರ್ಕ್ ಫೌಂಡೇಶನ್ ಸಂಸ್ಥೆ (ಡಿಪಿಆರ್) ಕ್ರಿಯಾ ಯೋಜನೆ ಸಿದ್ಧಪಡಿಸಲು ಜೂ.24 ಹಾಗು 25ರಂದು ನಗರಕ್ಕೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಇಟಗಿ ಪೆಟ್ರೋಲ್ ಪಂಪ್ ಬಳಿ ಇರುವ ವೆಂಟ್ ಸ್ವಚ್ಛಗೊಳಿಸುವಂತೆ ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಮಹಾನಗರ ಪಾಲಿಕೆ ಅಧಿಕಾರಿಗಳಿಗೆ ಸೂಚಿಸಿದರು.



ನಗರದಲ್ಲಿರುವ ಐತಿಹಾಸಿಕ ಕರೇಜ್ ವ್ಯವಸ್ಥೆಯನ್ನು ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿ ಪಡಿಸಬೇಕೆಂಬ ಹಿನ್ನೆಲೆಯಲ್ಲಿ ಕರೇಜ್ ಮಾರ್ಗದಲ್ಲಿ ಕೈಗೊಳ್ಳಬೇಕಾಗಿರುವ ಸುರಕ್ಷತಾ ಕ್ರಮಗಳ ಕುರಿತು ಇಟಗಿ ಪೆಟ್ರೋಲ್ ಬಂಕ್ ಹತ್ತಿರ ಕರೇಜ್ ವೆಂಟ್ಸ್ ಹಾಗೂ ಮಾರ್ಗ ಪರಿಶೀಲಿಸಿ ಅವರು ಮಾತನಾಡಿದರು. ಚರಂಡಿ ನೀರು ವೆಂಟ್‌ನಲ್ಲಿ ಹರಿಯುವುದನ್ನು ತಡೆಗಟ್ಟಲು ಮಹಾನಗರಪಾಲಿಕೆ ಅಧಿಕಾರಿಗಳಿಗೆ ಸೂಚಿಸಿದರು.

2024–25ನೇ ಸಾಲಿನ ಆಯವ್ಯಯದಲ್ಲಿ ಪ್ರವಾಸೋದ್ಯಮ ಇಲಾಖೆ ವತಿಯಿಂದ ನಗರ ಪ್ರದೇಶದಲ್ಲಿರುವ ಐತಿಹಾಸಿಕ ಕರೇಜ್ –ನೀರು ಸರಬರಾಜು ಸುರಂಗ ಮಾರ್ಗ ವ್ಯವಸ್ಥೆಯನ್ನು ಅಭಿವೃದ್ಧಿ ಪಡಿಸುವ ಉದ್ದೇಶದಿಂದ ಪುರಾತತ್ವ, ವಸ್ತು ಸಂಗ್ರಾಹಾಲಯ ಮತ್ತು ಪರಂಪರೆ ಇಲಾಖೆ ಮುಂದಾಗಿದೆ. ಈ ಹಿನ್ನೆಲೆಯಲ್ಲಿ ವಿಜಯಪುರ ಕರೇಜ್ ಪುನಶ್ಚೇತನ ಮತ್ತು ಅಭಿವೃದ್ಧಿಗೊಳಿಸಲು ಡಿಪಿಆರ್ ತಯಾರಿಸುವ ಕಾರ್ಯದಲ್ಲಿ ನೈಪುಣ್ಯತೆ ಹೊಂದಿರುವ ಐಎಚ್ ಸಿಎನ್ ಎಫ್ ಸಂಸ್ಥೆಯವರಿಂದ ವಿಸ್ತೃತ ಡಿಪಿಆರ್ ಯೋಜನಾ ವರದಿ ಸಿದ್ಧಪಡಿಸಲು ನೇಮಕ ಮಾಡಿದೆ ಎಂದರು.

## ನರೇಂದ್ರ ಮೋದಿ ದೇಶದ ರಕ್ಷಾ ಕವಚ: ಸಿ.ಟಿ.ರವಿ ಬಣ್ಣನೆ

**ಕಲಬುರಗಿ, ಜೂ. 20:** ಪ್ರಧಾನಿ ನರೇಂದ್ರ ಮೋದಿ ಅವರ ಅಭಿವೃದ್ಧಿ ಹಾಗೂ ವಿಕಸಿತ ಭಾರತದ ಆಡಳಿತಕ್ಕೆ ದೇಶದ ಜನರೆಲ್ಲರೂ ರಕ್ಷಾಕವಚವಾಗಿ ನಿಲ್ಲಬೇಕಿದೆ. ನಾವು ಮೋದಿಯವರಿಗೆ ರಕ್ಷಣೆಯಾದರೆ, ಇಡೀ ದೇಶದ ರಕ್ಷಾ ಕವಚವಾಗಲಿದ್ದಾರೆ. ಅವರು ತಮ್ಮ ವೈಯಕ್ತಿಕ ಕುಟುಂಬದ ಬಗ್ಗೆ ಎಂದಿಗೂ ಆಸಕ್ತಿ ತೋರದೇ, ತಮ್ಮ ಇಡೀ ಜೀವನ ದೇಶಕ್ಕೆ ಮುಡುಪಾಗಿಟ್ಟಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಹೇಳಿದರು.



ನಗರದ ಕೆಕೆಸಿಸಿಐ ಸಭಾಂಗಣದಲ್ಲಿ ಹಮ್ಮಿಕೊಂಡ ಮೋದಿ ಸರ್ಕಾರದ 12 ವರ್ಷ ವಿಕಸಿತ ಭಾರತ ಸಂಕಲ್ಪ ಸಮಾವೇಶದಲ್ಲಿ ಮಾತನಾಡಿದ ಅವರು, ಮೋದಿ ಸರ್ಕಾರದ ಸಾಧನೆ ಅರ್ಥವಾಗಬೇಕಾದರೆ, ಹಿಂದಿನ ಯುಪಿಎ ಸಕಾರದ ಆಡಳಿತದಲ್ಲಿ ನಡೆದ ಹಗರಣಗಳನ್ನು ಅವಲೋಕಿಸಬೇಕು. ಅಂದಿನ ಸರ್ಕಾರದಲ್ಲಿಇಡೀ ಹತ್ತು ವರ್ಷಗಳ ವರೆಗೆ ಒಂದಿಲ್ಲೊಂದು ಹಗರಣ ನಡೆಯುತ್ತಿದ್ದವು. ಹಗರಣವಿಲ್ಲದ ದಿನಗಳೇ ಇರಲಿಲ್ಲ. 2ಜಿ, ಕೋಲ್‌ಜಿ ಹಾಗೂ ಕಾಮನ್‌ವೆಲ್ತ್‌ನಂತಹ ಲಕ್ಷ ಲಕ್ಷ ಕೋಟಿಗಳ ಬೃಹತ್ ಹಗರಣಗಳೇ ನೆನಪಾಗುತ್ತಿದ್ದವು. 12 ವರ್ಷದಲ್ಲಿ ಮೋದಿ ಸರ್ಕಾರ ಒಂದೇ ಒಂದು ಹಗರಣವಿಲ್ಲದೇ ಬಡವರಿಗೆ ಯೋಜನೆ ನೀಡುತ್ತಿದೆ. ದೇಶದ ಸಮಗ್ರ ಅಬಿವೃದ್ಧಿ ಮಾಡುತ್ತಿದೆ. ಮಾತೆತ್ತಿದರೆ ಅದಾನಿ, ಅಂಬಾನಿ ಎಂದು ಟೀಕಿಸುವ ಕಾಂಗ್ರೆಸ್ಸಿಗರು, ಬೆಂಗಳೂರಿನ ಟನಲ್ ರೋಡ್ ಕಾಮಗಾರಿಗೆ ಅದಾನಿ ಸಮೂಹದ ಜತೆ ಒಪ್ಪಂದ ಮಾಡಿಕೊಂಡಿದ್ದೇಕೆ? ಎಂದು ಪ್ರಶ್ನಿಸಿದರು.



**ಪ್ರಿಯಂಕ್ ಖರ್ಗೆ ಅಜ್ಜ ಎಂಎಸ್‌ಕೆ ಮಿಲ್‌ನಲ್ಲಿ ಕಾರ್ಮಿಕರಾಗಿ ದುಡಿಯುತ್ತಿದ್ದರು. ಅಂತಹ ನೌಕರಿ ನೀಡುವ ಪಿಎಂ ಮಿತ್ರ ಯೋಜನೆ ಕಲಬುರಗಿಗೆ ಪ್ರಧಾನಿ ನರೇಂದ್ರ ಮೋದಿ ನೀಡಿದ್ದಾರೆ. ಉದ್ದೇಶಪೂರ್ವಕವಾಗಿ ಯೋಜನೆ ವಿಳಂಬ ಮಾಡಬಾರದು. ಕೇಂದ್ರ ಸರ್ಕಾರದಿಂದ ಕಲಬುರಗಿ ನಗರದ ರಿಂಗ್ ವೃತ್ತ ರಸ್ತೆ ಮಾಡಲಾಗಿದೆ. ಜೆಜೆಎಂ ನೀರು ಪೂರೈಕೆ ಕ್ರಾಂತಿ ಮಾಡಲಾಗಿದೆ.**

**–ಡಾ.ಉಮೇಶ ಜಾಧವ್, ಮಾಜಿ ಸಂಸದ**

ಮಾಜಿ ಸಂಸದ ಡಾ.ಉಮೇಶ ಜಾಧವ್ ಮಾತನಾಡಿ, ಕಲಬುರಗಿ ಜಿಲ್ಲೆಯ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಸದಾ ಸ್ಪಂದಿಸಿದೆ. ಜಿಲ್ಲೆಯಲ್ಲಿ 1021 ಕೋಟಿ ರೂ. ವೆಚ್ಚದ 71 ಕಿ.ಮೀ ಉದ್ದದ ಭಾರತಮಾಲಾ ರಸ್ತೆಯ ಮೂಲಕ ದೇಶದ ವಿವಿಧ ಮಹಾನಗರಳಿಗೆ ಸಂಪರ್ಕ ಕಲ್ಪಿಸುವ ರಾಷ್ಟ್ರೀಯ ಹೆದ್ದಾರಿಗಳನ್ನು ನಿರ್ಮಿಸಲಾಗುತ್ತಿದೆ. ಮೆಗಾ ಟೆಕ್ಸ್‌ಟೈಲ್ ಪಾರ್ಕ್ ಜಿಲ್ಲೆಗೆ ಮಂಜೂರಾಗಿದೆ. ವಂದೇ ಭಾರತ್ ಸೌಲಭ್ಯ ದೊರಕಿದೆ. ಜಲ್ ಜೀವನ ಮಿಷನ್ ಯೋಜನೆ ಅಡಿ ನೂರಾರು ಹಳ್ಳಿ, ತಾಂಡಾಗಳಿಗೆ ನೀರು ಪೂರೈಕೆ ಆಗುತ್ತಿದೆ. ಮುಖಂಡ ಅವ್ವಣ್ಣ ಮ್ಯಾಕೇರಿ ಪ್ರಾಸ್ತಾವಿಕವಾಗಿ ಮಾತನಾಡಿ, ದೀರ್ಘಕಾಲದ ಪ್ರಧಾನಿಯಾಗಿ ದೇಶ ಮುನ್ನಡೆಸಿರುವ ಮೋದಿ, ಅಂಬೇಡ್ಕರ್ ಆಶಯದಂತೆ ಕಟ್ಟಕಡೆಯ ವ್ಯಕ್ತಿಗೂ ಸಾಮಾಜಿಕ ನ್ಯಾಯ ಒದಗಿಸಿದ್ದಾರೆ. ರಾಜ್ಯದಲ್ಲಿ 40 ಸಾವಿರ ಸಸಿಗಳನ್ನು ನೆಡಲಾಗಿದೆ ಎಂದರು.

ಜಿಲ್ಲಾಧ್ಯಕ್ಷರಾದ ಅಶೋಕ್ ಬಗಲಿ, ನಗರ ಅಧ್ಯಕ್ಷ ಚಂದು ಪಾಟೀಲ್, ಮಾಜಿ ಸಚಿವ ಬಾಬುರಾವ ಚವ್ಹಾಣ, ಮಾಜಿ ಶಾಸಕ ದತ್ತಾತ್ರೇಯ ಪಾಟೀಲ್ ರೇವೂರ್, ಮಾಜಿ ಎಂಎಲ್‌ಸಿ ಅಮರನಾಥ ಪಾಟೀಲ್, ಮುಖಂಡರಾದ ಶರಣಪ್ಪ ತಳವಾರ, ನಿತಿನ್ ಗುತ್ತೇದಾರ, ಸಿದ್ದಾಜಿ ಪಾಟೀಲ್, ಚನ್ನಮ್ಮ ಪಾಟೀಲ್, ಶೋಭಾ ಬಾಣಿ, ಡಾ.ಸುಧಾ ಹಾಲಕಾಯಿ, ಲಿಂಗರಾಜ ಬಿರಾದಾರ, ಹರ್ಷಾನಂದ ಗುತ್ತೇದಾರ, ಗಿರಿರಾಜ ಯಳಮೇಲಿ, ಗಿರೀಶ ಭಜಂತ್ರಿ ಇತರರಿದ್ದರು.

## ಸಣ್ಣ ವ್ಯಾಪಾರಿಗಳ ರಕ್ಷಣೆಗೆ ನೀತಿ ಅಗತ್ಯ: ಮನೋಹರ ಅಗರವಾಲ್

**ಕಲಬುರಗಿ, ಜೂ. 20:** ಇ–ಕಾಮರ್ಸ್, ಕ್ವಿಕ್ ಕಾಮರ್ಸ್ ಕಂಪನಿಗಳಿಂದ ದೇಶದ ಸಾಂಪ್ರದಾಯಿಕ ವ್ಯಾಪಾರಿಗಳು ತೀವ್ರ ಸಂಕಷ್ಟಕ್ಕೆ ಸಿಲುಕುತ್ತಿದ್ದಾರೆ. ಹೀಗಾಗಿ ಸಣ್ಣ ವ್ಯಾಪಾರಿಗಳ ರಕ್ಷಣೆಗೆ ಸೂಕ್ತ ನೀತಿ ರೂಪಿಸುವ ಅಗತ್ಯವಿದೆ ಎಂದು ನವದೆಹಲಿಯ ಸ್ವದೇಶಿ ವ್ಯಾಪಾರಿ ಮಂಚ್ ರಾಷ್ಟ್ರೀಯ ಸಹ ಸಂಯೋಜಕ ಮನೋಹರ ಅಗರವಾಲ್ ಆತಂಕ ವ್ಯಕ್ತಪಡಿಸಿದರು.



ಕಲ್ಯಾಣ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ, ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ ಹಾಗೂ ಸ್ವದೇಶಿ ಜಾಗರಣ ಮಂಚ್ ಸಹಯೋಗದಲ್ಲಿ ಆಯೋಜಿಸಿದ್ದ ವ್ಯಾಪಾರಿ ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ದೇಶದ ಆರ್ಥಿಕತೆ ಹಾಗೂ ಉದ್ಯೋಗ ಸೃಷ್ಟಿಯ ಬೆನ್ನೆಲುಬಾಗಿರುವ ಸಣ್ಣ ವ್ಯಾಪಾರಿಗಳು ಇಂದಿನ ನೀತಿಗಳಿಂದ ಹಿನ್ನಡೆ ಅನುಭವಿಸುತ್ತಿದ್ದಾರೆ. ವ್ಯಾಪಾರಿ ಕುಟುಂಬಗಳ ಮುಂದಿನ ಪೀಳಿಗೆ ಕುಟುಂಬದ ವ್ಯಾಪಾರ ಮುಂದುವರಿಸುವ ಬದಲು ಉದ್ಯೋಗ ಗಳತ್ತ ಮುಖ ಮಾಡುತ್ತಿರುವುದು ಚಿಂತಾಜನಕ ಬೆಳವಣಿಗೆ. ಪೋಷಕರು ತಮ್ಮ ಮಕ್ಕಳಿಗೆ ವ್ಯಾಪಾರದ ಬಗ್ಗೆ ಸಕಾರಾತ್ಮಕ ವಾಗಿ ಮಾತನಾಡಿ, ಅವರನ್ನು ಆ ಪತ್ರಕ್ಕೆ ಪ್ರೋತ್ಸಾಹಿಸಬೇಕು.

ಸ್ವದೇಶಿ ವ್ಯಾಪಾರಿ ಮಂಚ್ ನೊಂದಿಗೆ ವಿವಿಧ ವ್ಯಾಪಾರ ಸಂಗಳು ಕೈಜೋಡಿಸುವಂತೆ ಆಹ್ವಾನಿಸಿದ ಅವರು, ಸ್ಥಳಿಯ ಮಟ್ಟದಲ್ಲಿ ವ್ಯಾಪಾರಿಗಳು ಎದುರಿಸುತ್ತಿರುವ ಸಮಸ್ಯೆಗಳು ಹಾಗೂ ನೀತಿ ಸಂಬಂಧಿತ ವಿಚಾರಗಳನ್ನು ಒಗ್ಗಟ್ಟಿನಿಂದ ಸರ್ಕಾರದ ಗಮನಕ್ಕೆ ತರಲು ಸಾಧ್ಯವಾಗಲಿದೆ. ಧಾನ್ಯ ಮತ್ತು ಬೀಜ ವ್ಯಾಪಾರಿಗಳ ಸಂದ ಅಧ್ಯ ಸಂತೋಷ ಲಂಗರ್ ಮಾತನಾಡಿ, ಖಾನಾ ವಿದೇಶಿ, ಪಹೆನಾ ಸ್ವದೇಶಿ ಎಂಬ ಸ್ಥಿತಿ ನಿರ್ಮಾಣವಾಗಿದೆ. ಆಹಾರ ಧಾನ್ಯ ಹಾಗೂ ಕೃಷಿ ಉತ್ಪನ್ನಗಳ ಆಮದು ಹೆಚ್ಚುತ್ತಿರುವುದರಿಂದ ರೈತರು ಮತ್ತು ವ್ಯಾಪಾರಿಗಳಿಗೆ ತೊಂದರೆಯಾಗುತ್ತಿದ್ದು, ಮಾರುಕಟ್ಟೆ ಬೆಲೆ ಕನಿಷ್ಠ ಬೆಂಬಲ ಬೆಲೆಗಿಂತ ಕೆಳಮಟ್ಟಕ್ಕೆ ಇಳಿಯುತ್ತಿವೆ. ಹೀಗಾಗಿ ಭಾರತದಲ್ಲೆ ಉತ್ಪಾದನೆಯಾಗುವ ಕೃಷಿ ಉತ್ಪನ್ನಗಳ ಆಮದು ನಿಯಂತ್ರಿಸುವ ನೀತಿ ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು.

**ಬದಲಾಗುವ ತಂತ್ರಾನ, ಗ್ರಾಹಕರ ಮನೋಭಾವ ಹಾಗೂ ಸರ್ಕಾರಿ ನೀತಿಗಳಿಗೆ ಅನುಗುಣವಾಗಿ ವ್ಯಾಪಾರಿಗಳೂ ಬದಲಾಗಬೇಕು. ಆಗ ಮಾತ್ರ ಈ ಕ್ಷೇತ್ರದಲ್ಲಿ ಉಳಿಯಲು ಮತ್ತು ಬೆಳೆಯಲು ಸಾಧ್ಯ.**

**– ಮನೋಹರ ಅಗರವಾಲ್, ರಾಷ್ಟ್ರೀಯ ಸಹ ಸಂಯೋಜಕ, ಸ್ವದೇಶಿ ವ್ಯಾಪಾರಿ ಮಂಚ್.**

## ಹೊಸ ಕಾರ್ಮಿಕ ಸಂಹಿತೆ-2025: ಜಾಗೃತಿ ಕಾರ್ಯಾಗಾರ




**ಬಳ್ಳಾರಿ, ಜೂ 20:** ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಹಾಗೂ ಮಿತ್ರಾ ಟೆಕ್ನಾಲಜೀಸ್ ಅವರ ಜಂಟಿ ಆಶ್ರಯದಲ್ಲಿ 'ಹೊಸ ಕಾರ್ಮಿಕ ಸಂಹಿತೆ–2025?ರ ಜಾಗೃತಿ ಕಾರ್ಯಾಗಾರವು ನಡೆಯಿತು. ಇಎಸ್‌ಐಸಿನ ನಿವೃತ್ತ ಅಧಿಕಾರಿ ಶೇಖ್ ಹನೀಫ್, ಇಎಸ್‌ಐಸಿ ಮತ್ತು ಇಪಿಎಫ್‌ಒಗಳ ಹೊಸ ನಿಯಮಗಳು ಮತ್ತು ಉದ್ಯೋಗಿಗಳ ಸಾಮಾಜಿಕ ಭದ್ರತೆ, ಕಾನೂನುಬದ್ಧ ಸೌಲಭ್ಯಗಳು ಹಾಗೂ ವೇತನ ಪಾವತಿಯ ದಾಖಲೆಗಳ ನಿರ್ವಹಣಾ ವ್ಯವಸ್ಥೆಯ ಕುರಿತು ಮಾಹಿತಿ ನೀಡಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಅವ್ವಾರ್ ಮಂಜುನಾಥ್ ಅವರು, ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿ, ಹೊಸ ಕಾರ್ಮಿಕ ಸಂಹಿತೆ–2025ರ ಕುರಿತು ಕೈಗಾರಿಕಾ ಮತ್ತು ಉದ್ಯೋಗ ಕ್ಷೇತ್ರದಲ್ಲಿ ಇರುವ ಮಾನವ ಸಂಪನ್ಮೂಲ ವಿಭಾಗದ ಪ್ರತಿಯೊಬ್ಬರೂ ತಿಳಿದುಕೊಂಡು, ಅರ್ಥ ಮಾಡಿಕೊಳ್ಳಬೇಕು. ಈ ಮೂಲಕ ಕೆಲಸಗಾರರಿಗೆ ಹೆಚ್ಚಿನ ಪ್ರಮಾಣದಲ್ಲಿ ಕೇಂದ್ರ ಸರ್ಕಾರದ ಸೌಲಭ್ಯಗಳು ಸಿಗುವಂತೆ ಮುಂಜಾಗ್ರತೆಗಳನ್ನು ಕೈಗೊಳ್ಳಲು ಅನುಕೂಲವಾಗಲಿದೆ ಎಂದರು.

### ವಿಶ್ವ ತಂಬಾಕುರಹಿತ ದಿನಾಚರಣೆ

## ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಜಾಗೃತಿ ಅಗತ್ಯ: ನ್ಯಾ.ಶ್ರೀನಿವಾಸ ನವಲೆ



ಕಲಬುರಗಿ ನಗರದ ಎಸ್.ಎಸ್.ತೆಗ್ನೂರು ಪಿ.ಯು ಮತ್ತು ಪದವಿ ಮಹಾವಿದ್ಯಾಲಯ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ರಾಷ್ಟ್ರೀಯ ಬಾಯಿ ಆರೋಗ್ಯ ಕಾರ್ಯಕ್ರಮ ಹಾಗೂ ಇವರುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿದ್ದ 'ವಿಶ್ವ ತಂಬಾಕು ರಹಿತ ದಿನಾಚರಣೆ' ಕಾರ್ಯಕ್ರಮವನ್ನು ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರರದ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ ಅವರು ಉದ್ಘಾಟಿಸಿ ಮಾತನಾಡಿದರು.

**ಕಲಬುರಗಿ, ಜೂ. 20:** ಯುವ ಸಮುದಾಯ ತಂಬಾಕು ಉತ್ಪನ್ನಗಳಿಂದ ದೂರವಿರುವುದು ಮಾತ್ರವಲ್ಲ, ತಂಬಾಕು ದುಷ್ಪರಿಣಾಮದ ಬಗ್ಗೆ ಸಮಾಜದಲ್ಲಿ ಜಾಗೃತಿ ಮೂಡಿಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ ಹೇಳಿದರು.

ತಂಬಾಕು ಮತ್ತು ನಿಕೋಟಿನ್ ಬಳಕೆಯಿಂದ ಉಂಟಾಗುವ ಆರೋಗ್ಯ ಸಮಸ್ಯೆಗಳ ತಡೆ, ಜಾಗೃತಿ ಹಾಗೂ ಚಿಕಿತ್ಸೆಗೆ ಸರ್ಕಾರವು ವಾರ್ಷಿಕವಾಗಿ ಸುಮಾರು ?1,700 ಕೋಟಿ ರೂ. ಗಳಿಗಿಂತಲೂ ಅಧಿಕ ಹಣ ವೆಚ್ಚ ಮಾಡುತ್ತಿದೆ. ಕರೋನಾ ಸಾಂಕ್ರಾಮಿಕಕ್ಕಿಂತಲೂ ಹೆಚ್ಚು ಸಾವುಗಳು ತಂಬಾಕು ಬಳಕೆಯಿಂದಾಗುತ್ತಿವೆ. ದೇಶದಲ್ಲಿ ಕೋಟ್ಯಂತರ ಜನರು ತಮ್ಮ ಪ್ರಾಣ ಕಳೆದುಕೊಳ್ಳುತ್ತಿದ್ದಾರೆ. ಇತ್ತೀಚೆಗೆ 13–14 ವರ್ಷದ ಮಕ್ಕಳು, ವಿದ್ಯಾರ್ಥಿನಿಯರು ಹಾಗೂ ಮಹಿಳೆಯರು ಸಿಗರೇಟ್ ಮತ್ತು ತಂಬಾಕು ಬಳಕೆಗೆ ಒಳಗಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಪ್ಯಾಕೆಟ್ಗಳ ಮೇಲೆ ಎಚ್ಚರಿಕೆ ಚಿತ್ರಗಳಿದ್ದರೂ ಜನರು ಅದನ್ನು ನಿರ್ಲಕ್ಷ್ಯ ಮಾಡುತ್ತಿದ್ದಾರೆ ಎಂದು ವಿಷಾದಿಸಿದರು.

ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಕಾರ್ಯಕ್ರಮದ ಸಲಹೆಗಾರರು ಶ್ರೀಮತಿ ಸುಜಾತಾ ಪಾಟೀಲ ಅವರು ಪ್ರಸ್ತಾವಿಕವಾಗಿ ಮಾತನಾಡಿದರು. ಜಿಲ್ಲಾ ಕಾರ್ಯಕ್ರಮಾಧಿಕಾರಿಗಳು ಎನ್.ಓ.ಎಚ್.ಪಿ. ಡಾ. ರಾಜು ರಾಂಪುರೆ ಮಾತನಾಡಿ, ವಿದ್ಯಾರ್ಥಿಗಳು ತಂಬಾಕು ಸೇವನೆ ಧೂಮಪಾನದಂತಹ ದುಶ್ಚಟಗಳಿಂದ ದೂರವಿರಲು ದೃಢ ನಿರ್ಧಾರ ಕೈಗೊಂಡರೆ ಅವರ ಭವಿಷ್ಯ ಉಜ್ವಲವಾಗಲು ಸಾಧ್ಯ ಎಂದರು.

## ಸಂವಿಧಾನವೇ ದೇಶದ ನಿಜವಾದ ಧರ್ಮಗ್ರಂಥ: ಎಸ್.ಬಿ.ಕುಚಬಾಳ



**ಬೀದರ್, ಜೂ. 20:** ಡಾ.ಬಾಬಾಸಾಹೇಬ ಅಂಬೇಡ್ಕರ್ ರಚಿಸಿದ ಸಂವಿಧಾನವೇ ದೇಶದ ನಿಜವಾದ ಧರ್ಮಗ್ರಂಥವಾಗಿದ್ದು, ಅದು ಭಾರತೀಯರ ರಕ್ಷಾ ಕವಚವಾಗಿದೆ ಎಂದು ನಿವೃತ್ತ ಶಿಕ್ಷಣಾಧಿಕಾರಿ ಎಸ್.ಬಿ.ಕುಚಬಾಳ ಹೇಳಿದರು.

ನಗರದ ಜಿಲ್ಲಾ ರಂಗಮಂದಿರದಲ್ಲಿ ಭೀಮರಾಜ ಸಾಹಿತ್ಯ ಪರಿಷತ್ ವತಿಯಿಂದ ಮಂಗಳವಾರ ಆಯೋಜಿಸಲಾಗಿದ್ದ ಬುದ್ಧ, ಬಸವ, ಅಂಬೇಡ್ಕರ್ ಸಾಂಸ್ಕೃತಿಕ ಉತ್ಸವ ಹಾಗೂ ಸಂವಿಧಾನ ಕುರಿತ ವಿಚಾರ ಸಂಕಿರಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಭಾರತದಲ್ಲಿ ವಿವಿಧ ಜಾತಿ, ಧರ್ಮಗಳ ಜನರು ವಾಸಿಸುತ್ತಿದ್ದು, ಪ್ರತಿಯೊಬ್ಬರಿಗೂ ತಮ್ಮದೇ ಆದ ಧರ್ಮಗ್ರಂಥಗಳಿವೆ. ಆದರೆ, ದೇಶದ ಎಲ್ಲ ನಾಗರಿಕರನ್ನು ಸಮಾನವಾಗಿ ಕಾಣುವ ಸಂವಿಧಾನವೇ ಭಾರತದ ಧರ್ಮಗ್ರಂಥವಾಗಿದೆ. ಇದು ಸಮಾನ ಅವಕಾಶಗಳನ್ನು ನೀಡುತ್ತದೆ' ಎಂದರು.

ಮುಖಂಡ ಶಂಕರರಾವ ದೊಡ್ಡಿ ಮಾತನಾಡಿ, ಸಂವಿಧಾನವು ಕೇವಲ ದಲಿತ ಸಮುದಾಯಕ್ಕೆ ಸೀಮಿತವಾಗಿಲ್ಲ. ಅದು ಎಲ್ಲ ಧರ್ಮ, ಜಾತಿ ಹಾಗೂ ವರ್ಗಗಳ ಜನರಿಗೆ ನ್ಯಾಯ ಮತ್ತು ಸಮಾನ ಹಕ್ಕುಗಳನ್ನು ಒದಗಿಸಿದೆ ಎಂದು ಹೇಳಿದರು. ಸಂದೀಪ್ ಕಾಂಟೆ ಮಾತನಾಡಿ, ಇಂದಿನ ಪರಿಸ್ಥಿತಿಯಲ್ಲಿ ಸಂವಿಧಾನವೇ ನಮ್ಮ ಉಸಿರಾಗಿದ್ದು, ಅದರ ಮೌಲ್ಯಗಳನ್ನು ಕಾಪಾಡುವುದು ಪ್ರತಿಯೊಬ್ಬ ನಾಗರಿಕನ ಆದ್ಯ ಕರ್ತವ್ಯವಾಗಿದೆ' ಎಂದರು.


## ವಿದ್ಯಾವಂತ ಮೋಸಗಾರರು, ದೇಶದ್ರೋಹಿಗಳ ಸಂಖ್ಯೆ ಹೆಚ್ಚಳ: ಉಪಲೋಕಾಯುಕ್ತರ ಕಳವಳ

**ಬೀದರ್, ಜೂ. 20:** ಸ್ವಾತಂತ್ರ್ಯ ಪೂರ್ವದಲ್ಲಿ ಶೇ 95ರಷ್ಟು ಜನ ದೇಶಭಕ್ತರಿದ್ದರು. ಕೆಲವರು ಮಾತ್ರ ಮೀರ್ ಸಾದಿಕ್‌ಗಳಿದ್ದರು. ಆದರೆ, ಸ್ವಾತಂತ್ರ್ಯ ನಂತರ ದೇಶದಲ್ಲಿ ವಿದ್ಯಾವಂತ ಮೋಸಗಾರರು, ದೇಶದ್ರೋಹಿಗಳ ಸಂಖ್ಯೆ ಹೆಚ್ಚಾಗಿದೆ ಎಂದು ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ಅವರು ಕಳವಳ ವ್ಯಕ್ತಪಡಿಸಿದರು.

ಇಡೀ ಭಾರತದಲ್ಲಿ ಅನೇಕ ಸಂಘಗಳು ಹುಟ್ಟಿಕೊಂಡಿವೆ. ಅವುಗಳು ಜನರಿಗಾಗಿ ದನಿ ಎತ್ತುವ ಕೆಲಸ ಮಾಡುತ್ತಿವೆ. ಆದರೆ, ಅಧಿಕಾರಿಗಳು ಪ್ರಾಮಾಣಿಕರಾಗಿದ್ದರೆ ಅವುಗಳಿಗೆ ಹೆದರಬೇಕಿಲ್ಲ. ಕೋಟಿಗಟ್ಟಲೇ ಆಸ್ತಿ ಗಳಿಸಿರುವ ಅನೇಕ ಅಧಿಕಾರಿಗಳು ನೆಮ್ಮದಿಯಿಂದ ಇಲ್ಲ. ಅನೇಕ ಜನ ಐಎಎಸ್, ಐಪಿಎಸ್ ಅಧಿಕಾರಿಗಳು ಅವರ ಪೋಷಕರನ್ನು ಅನಾಥಾಶ್ರಮಕ್ಕೆ ಸೇರಿಸಿದ್ದಾರೆ. ಸಮಾಜಕ್ಕೆ ಉತ್ತಮ ಸಂಸ್ಕಾರ ಸಿಕ್ಕರೆ ಸಮಾಜದಿಂದ ಭ್ರಷ್ಟಾಚಾರ ದೂರವಾಗುತ್ತದೆ. ಅಧಿಕಾರದಲ್ಲಿ ಇರುವ ತನಕ ಉತ್ತಮ ಕೆಲಸ ಮಾಡಿದರೆ ಜನ ಸ್ಮರಿಸುತ್ತಾರೆ. ಆಸ್ತಿ ಮಾಡಿದವರು ಅನೇಕರಿದ್ದಾರೆ. ಆದರೆ, ಅಂಥವರನ್ನು ಯಾರೂ ನೆನೆಸಲ್ಲ ಎಂದರು.

ನಾನು ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷನಾಗಿದ್ದಾಗ ಊರೂರು ಸಂಚರಿಸಿ 1.8 ಕೋಟಿ ಪ್ರಕರಣಗಳನ್ನು ಇತ್ಯರ್ಥಗೊಳಿಸಿದ್ದೆ. ಅಧಿಕಾರಿಗಳು ಹಾಗೂ ಸಾರ್ವಜನಿಕರು ಸರಿಯಾಗಿ ಸ್ಪಂದಿಸಿದರೆ ಸಮಸ್ಯೆಗಳನ್ನು ಬಗೆಹರಿಸಬಹುದು ಎಂದು ಹೇಳಿದರು.

ಸಾರ್ವಜನಿಕರು ಹಾಗೂ ಅಧಿಕಾರಿಗಳು ತಮ್ಮ ಹಕ್ಕುಗಳು ಹಾಗೂ ಕರ್ತವ್ಯಗಳನ್ನು ನಿಭಾಯಿಸಬೇಕು. ಸಾರ್ವಜನಿಕರು ದೂರು ದಾಖಲಿಸಿದ ನಂತರ ಹೆದರದೆ ತಾರ್ಕಿಕ ಅಂತ್ಯದವರೆಗೆ ಸ್ಪಂದಿಸಬೇಕು. ಕೆಲ ದೂರುದಾರರು ಅರ್ಧಕ್ಕೆ ಹಿಂಜರಿಯುತ್ತಾರೆ. ಅನ್ಯಾಯದ ವಿರುದ್ಧ ಸಂಘ ಸಂಸ್ಥೆಗಳು ಹೋರಾಡಬೇಕಿದೆ. ಅಧಿಕಾರಿಗಳು ಅಧಿಕಾರಕ್ಕೆ ಬಂದ ನಂತರ ಲಂಚತನಕ್ಕೆ ಪರವಾನಗಿ ಸಿಕ್ಕಂತೆ ವರ್ತಿಸಬಾರದು. ಪ್ರಾಮಾಣಿಕ ಅಧಿಕಾರಿಗಳು ಸಹ ಇದ್ದಾರೆ. ಆದರೆ, ಭ್ರಷ್ಟ ಅಧಿಕಾರಿಗಳು ಹೆಚ್ಚು ಇದ್ದಾರೆ. ಅವರು ಜೀವಂತ ವಾಗಿದ್ದರೂ ಸತ್ತಂತೆ. ನಾವು ಮಾಡಿದ ಅನ್ನವನ್ನು ನಾವು ತಿನ್ನಬೇಕು. ಇತರರ ಅನ್ನ ಕಸಿದು ತಿಂದರೆ ದೇವರು ಶಾಪ ಹಾಕುತ್ತಾನೆ. ಪ್ರಾಮಾಣಿಕ ಅಧಿಕಾರಿಗಳು ಯಾವುದಕ್ಕೂ ಹೆದರುವ ಅಗತ್ಯವಿಲ್ಲ. ದುಷ್ಟರಿಗೆ ಶಿಕ್ಷೆ ಆಗಲೇಬೇಕು. ಕೋಟ್ಯಂತರ ಆಸ್ತಿ ಮಾಡಿದ ಸಾವಿರಾರು ಅಧಿಕಾರಿಗಳ ಜೀವನದ ನೋವನ್ನು ನಾನು ನೋಡಿರುವೆ. ತೀರ ಆಧೋಗತಿಯ ಜೀವನ ಸಾಗಿಸಿದ್ದಾರೆ. ಪಶ್ಚಾತ್ತಾಪ ಪಡುತ್ತಾರೆ. ಮಕ್ಕಳು ಅವರ ಮಾತು ಕೇಳುವುದಿಲ್ಲ. ಅನ್ಯಾಯದ ಹಣ ಗಳಿಸುವುದು ಪಾಪ.



ಸುಳ್ಳು ಕೇಸ್ ಹಾಕಿದರೆ ಜೈಲಿಗೆ ಕಳಿಸುವೆ: ಯಾರೂ ಕೂಡ ಸುಳ್ಳು ಕೇಸ್ ಹಾಕಬಾರದು. ಯಾರಾದರೂ ಸುಳ್ಳು ಕೇಸ್ ಹಾಕಿದರೆ ಅಂಥವರನ್ನು ಮೂರು ವರ್ಷ ಜೈಲಿಗೆ ಕಳಿಸುವೆ. ಹುಷಾರಾಗಿರಿ ಎಂದು ಉಪ ಲೋಕಾಯುಕ್ತರು ಎಚ್ಚರಿಕೆ ನೀಡಿದರು.

ಲೋಕಾಯುಕ್ತ ಸಂಸ್ಥೆಯಲ್ಲಿ ಮೂರು ಜನರಿದ್ದೇವೆ. 40 ಸಾವಿರಕ್ಕೂ ಅಧಿಕ ಪ್ರಕರಣಗಳಿವೆ. ಸುಳ್ಳು ಕೇಸ್ ಹಾಕಿದರೆ ಒಳ್ಳೆಯ ಕೇಸ್ ವಿಚಾರಣೆ ನಡೆಸಲು ಆಗುವುದಿಲ್ಲ. ಸುಪ್ರೀಂ ಕೋರ್ಟ್‌ನಲ್ಲೂ ಇದೇ ಪರಿಸ್ಥಿತಿ ಇದೆ. ಯಾರಾದರೂ ಸುಳ್ಳು ಕೇಸ್ ಹಾಕಿದರೆ ಅವರ ಬಗ್ಗೆ ಅಧಿಕಾರಿಗಳು ನಮಗೆ ಪತ್ರ ಬರೆದು ತಿಳಿಸಬೇಕು. ಕೆಲ ಶಕ್ತಿಗಳು ನಮ್ಮ ವಿರುದ್ಧವೂ ಪತ್ರ ಬರೆಯುತ್ತಾರೆ. ಕೆಲವು ರಾಜಕಾರಣಿಗಳು ಈ ಕೆಲಸ ಮಾಡಿಸುತ್ತಾರೆ ಎಂದು ಹೇಳಿದರು.

**ಮಾಂಜಾ ಪ್ರಕರಣದ ನೆನಕೆ :** ಕಳೆದ ವರ್ಷ ಬೀದರ್‌ನಲ್ಲಿ ಗಾಳಿಪಟ ಹಾರಿಸಲು ಉಪಯೋಗಿಸುವ ಮಾಂಜಾದಿಂದ ವ್ಯಕ್ತಿಯೊಬ್ಬರು ಸಾವನ್ನಪ್ಪಿದ ಪ್ರಕರಣವನ್ನು ನೆನೆದ ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ಅವರು, ನಿಜಕ್ಕೂ ಆ ಘಟನೆ ಬಹಳ ದುರದೃಷ್ಟಕರ. ಮಾಂಜಾದಿಂದ ಅಮಾಯಕ ವ್ಯಕ್ತಿ ಪ್ರಾಣ ಕಳೆದುಕೊಂಡಿದ್ದರು. ಕುಟುಂಬಕ್ಕೆ ಆಧಾರವಾಗಿದ್ದ ವ್ಯಕ್ತಿ ಮೃತಪಟ್ಟಿದ್ದರು. ಈ ಘಟನೆ ಸಂಬಂಧ ನಾನು ಮುಖ್ಯ ಕಾರ್ಯದರ್ಶಿಗೆ ನೋಟಿಸ್ ಜಾರಿ ಮಾಡಿದ್ದೆ. ರಾಜ್ಯದಾದ್ಯಂತ ಮಾಂಜಾ ನಿಷೇಧಿಸಲು ಸೂಚನೆ ಕೊಟ್ಟಿದ್ದೆ. ಈ ರೀತಿ ಮಾನವೀಯವಾಗಿ ಸ್ಪಂದಿಸುವ ಸಂಸ್ಥೆ ಲೋಕಾಯುಕ್ತ ಎಂದು ಹೇಳಿದಾಗ ಕರತಾಡನ ಮುಗಿಲು ಮುಟ್ಟಿತು. ಮುಖ್ಯಮಂತ್ರಿಗೆ ಜೈಲಿಗೆ ಕಳಿಸಿದ ಸಂಸ್ಥೆ: ಹಿಂದೆ ರಾಜ್ಯದ ಮುಖ್ಯಮಂತ್ರಿ, ಸಚಿವರನ್ನು ಜೈಲಿಗೆ ಕಳಿಸಿದ ಯಾವುದಾದರೂ ಸಂಸ್ಥೆಯಿದ್ದರೆ ಅದು ಲೋಕಾಯುಕ್ತ. ಲೋಕಾಯುಕ್ತ ಸಂಸ್ಥೆ ಇಡೀ ರಾಷ್ಟ್ರದಲ್ಲಿ ಬಲಿಷ್ಠ ಹಾಗೂ ಸ್ವಾಯತ್ತತೆ ಹೊಂದಿದೆ. ಮಗನ ವಿರುದ್ಧ ಆರೋಪ ಕೇಳಿ ಬಂದದ್ದರಿಂದ ಲೋಕಾಯುಕ್ತರೇ ರಾಜೀನಾಮೆ ಕೊಟ್ಟಿದ್ದರು. ಸಾರ್ವಜನಿಕರಿಗೆ ಯಾವುದೇ ತೊಂದರೆಯಾದಲ್ಲಿ ಲೋಕಾಯುಕ್ತ ಎದುರು ದೂರು ದಾಖಲಿಸಿದಲ್ಲಿ ಸಮಸ್ಯೆ ಪರಿಹರಿಸಲು ಕ್ರಮ ಕೈಗೊಳ್ಳಲಾಗುತ್ತದೆ. ಸಾರ್ವಜನಿಕ ಹಿತಾಸಕ್ತಿ ಇದ್ದಲ್ಲಿ ಸ್ವಯಂ ಪ್ರೇರಿತ ದೂರು ದಾಖಲಿಸಿ ನ್ಯಾಯ ಒದಗಿಸಿದ ಅನೇಕ ಉದಾಹರಣೆಗಳಿವೆ ಎಂದು ಹೇಳಿದರು.

**ನೇಣಿಗೆ ಹಾಕುತ್ತೇನೆ ಎಚ್ಚರ:** ಸುಳ್ಳು ಮಾಹಿತಿ ಕೊಟ್ಟರೆ ನೇಣಿಗೆ ಹಾಕುತ್ತೇನೆ ಎಚ್ಚರ ಎಂದು ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ಅವರು ಅಲ್ಪಸಂಖ್ಯಾತರ ವಸತಿ ನಿಲಯ ವಾರ್ಡನ್ ಕಾವೇರಿ ಅವರಿಗೆ ಎಚ್ಚರಿಕೆ ನೀಡಿದ ಅವರು, ಇದುವರೆಗೆ ನಿಮ್ಮ ಹಾಸ್ಟೆಲ್‌ನಲ್ಲಿ ಇಂಟರ್ನೆಟ್ ವ್ಯವಸ್ಥೆ ಸರಿಪಡಿಸಿಲ್ಲ. ಕಂಪ್ಯೂಟರ್ ವ್ಯವಸ್ಥೆ ಮಾಡಿಲ್ಲ. ಉನ್ನತ ಶಿಕ್ಷಣದ ಕನಸು ಹೊತ್ತು ಬರುವ ವಿದ್ಯಾರ್ಥಿಗಳಿಗೆ ಈ ರೀತಿ ಅನ್ಯಾಯ ಮಾಡುವುದು ಎಷ್ಟು ಸರಿ. ಮೇಲಿಂದ ಸುಳ್ಳು ಮಾಹಿತಿ ಕೊಟ್ಟಿದ್ದೀರಿ. ನಿಮ್ಮ ಹಾಸ್ಟೆಲ್‌ಗೆ ಖುದ್ದು ನಮ್ಮ ಅಧಿಕಾರಿಗಳು ಭೇಟಿ ಕೊಟ್ಟು ಪರಿಶೀಲಿಸಿದ್ದಾರೆ. ಕಾವೇರಿ ನೀರು ರಾಜ್ಯದ ಜನ ಕುಡಿಯುತ್ತಾರೆ. ನೀವು ಕಾವೇರಿ ಹೆಸರಿಟ್ಟುಕೊಂಡು ಕನಿಷ್ಠ ಮಕ್ಕಳಿಗೆ ಸರಿಯಾಗಿ ವಿದ್ಯೆ ಕೊಡದಿದ್ದರೆ ಹೇಗೆ. ಎರಡು ದಿನದೊಳಗೆ ಸಮಸ್ಯೆ ಬಗೆಹರಿಸಬೇಕೆಂದು ಸೂಚನೆ ನೀಡಿದರು.

## ಸೋಯಾಬೀನ್ ಬೀಜ ವಿತರಣೆಯಲ್ಲಿ ಅವ್ಯವಸ್ಥೆ ಖಂಡಿಸಿ ರೈತರ ಪ್ರತಿಭಟನೆ

**ಬೀದರ, ಜೂ. 20:** ಸೋಯಾಬೀನ್ ಬೀಜ ವಿತರಣೆಯಲ್ಲಿ ಉಂಟಾದ ಅವ್ಯವಸ್ಥೆ, ವಿಳಂಬ ಹಾಗೂ ಮೂಲ ಸೌಲಭ್ಯಗಳ ಕೊರತೆಯನ್ನು ಖಂಡಿಸಿ ರೈತರು ಬೀದರ್–ಲಾತೂರ್ ರಾಷ್ಟ್ರೀಯ ಹೆದ್ದಾರಿಯಲ್ಲಿ ರಸ್ತೆತಡೆದು ಪ್ರತಿಭಟನೆ ಮಾಡಿದರು.



ಜಿಲ್ಲೆಯ ಹುಲಸೂರಿನ ಬಸವೇಶ್ವರ ವೃತ್ತದ ಸಮೀಪದಲ್ಲಿರುವ ಹುಲಸೂರ ರೈತ ಸಂಪರ್ಕ ಕೇಂದ್ರದ ಎದುರು ಬೆಳಗ್ಗೆಯಿಂದಲೇ ವಿವಿಧ ಗ್ರಾಮಗಳ ರೈತರು ಬೀಜಕ್ಕಾಗಿ ಜಮಾಯಿಸಿದ್ದರು. ಆದರೆ, ಬೀಜ ವಿತರಣೆ ವಿಳಂಬವಾಗಿದ್ದರಿಂದ ಆಕ್ರೋಶಗೊಂಡ ರೈತರು ಹೆದ್ದಾರಿಯಲ್ಲಿ ಸಂಚಾರ ತಡೆದು ಕೃಷಿ ಇಲಾಖೆಯ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿದರು. ಹುಲಸೂರ ಜತೆಗೆ ಭಾಲ್ಕಿ ತಾಲ್ಲೂಕಿನ ಸಾಯಗಾಂವ ಸೇರಿದಂತೆ ಅದೇ ಹೋಬಳಿಯ ಹಲಸಿ, ತುಗಾಂವ, ಅಳವಾಯಿ, ಎಲ್ಲಮವಾಡಿ ಹಾಗೂ ವಿವಿಧ ಗ್ರಾಮಗಳ ರೈತರು ಸಾಯಗಾಂವ ರೈತ ಸಂಪರ್ಕ ಕೇಂದ್ರ ದಲ್ಲಿಯೂ ಬೀಜ ವಿತರಣೆ ವಿಳಂಬ, ನೀರು–ನೆರಳು ಇಲ್ಲ ಎಂದು ದೂರಿದರು.

ಬೀಜ ವಿತರಣೆಯಲ್ಲಿ ಸಾಯಗಾಂವ ರೈತ ಸಂಪರ್ಕ ಕೇಂದ್ರದ ಅಧಿಕಾರಿ ಕೆಲವರಿಗೆ ಆದ್ಯತೆ ನೀಡಿ, ಇನ್ನೂ ಕೆಲ ರೈತರನ್ನು ಗಂಟೆಗಟ್ಟಲೆ ಕಾಯಿಸಲಾಗುತ್ತಿದ್ದು, ಮುಖ ನೋಡಿ ಬೀಜ ವಿತರಣೆ ಮಾಡದೆ. ಎಲ್ಲರಿಗೂ ನ್ಯಾಯಯುತವಾಗಿ ಬೀಜ ವಿತರಿಸಬೇಕು ಎಂದು ಆಗ್ರಹಿಸಿದರು.

ಬೀಜ ಪಡೆಯಲು ಬೆಳಿಗ್ಗೆ 10 ಗಂಟೆಗೆ ಬಂದಿದ್ದೇವೆ. ಆದರೆ, ಸಿಬ್ಬಂದಿ ನಿರ್ಲಕ್ಷ್ಯದಿಂದ ವಿತರಣೆ ವಿಳಂಬವಾಗಿದೆ. ಸರದಿ ಸಾಲಿನಲ್ಲಿ ನಿಲ್ಲಲು ಟೆಂಟ್ ವ್ಯವಸ್ಥೆ ಇಲ್ಲ. ಕನಿಷ್ಠ ಕುಡಿಯುವ ನೀರಿನ ವ್ಯವಸ್ಥೆಯನ್ನೂ ಅಧಿಕಾರಿಗಳು ಮಾಡಿಲ್ಲ ಎಂದು ರೈತ ದಿಲೀಪ ಪಾಟೀಲ ಬೇಲೂರ ದೂರಿದರು. ಪ್ರತಿಭಟನೆಯ ಸುದ್ದಿ ತಿಳಿದು ಸ್ಥಳಕ್ಕೆ ಧಾವಿಸಿದ ಪೊಲೀಸರು ರೈತರನ್ನು ಸಮಾಧಾನಪಡಿಸಿದರು. ಕೃಷಿ ಇಲಾಖೆಯ ಅಧಿಕಾರಿಗಳು ಅಗತ್ಯ ಪ್ರಮಾಣದ ಬೀಜ ವಿತರಿಸುವ ಭರವಸೆ ನೀಡಿದ ನಂತರ ಪ್ರತಿಭಟನೆ ಹಿಂಪಡೆಯ ಲಾಯಿತು.

## ತಾಯಿ-ಶಿಶು ಮರಣ ಪ್ರಮಾಣ ಶೂನ್ಯಕ್ಕೆ ತನ್ನಿ-ಜಿಲ್ಲಾಧಿಕಾರಿ ಡಾ.ಕೆ ಆನಂದ

**ವಿಜಯಪುರ,ಜೂ.20–** ಗಂಡಾಂತರ ಗರ್ಭಿಣಿಯರ ಆರೋಗ್ಯ ತಪಾಸಣೆಗೆ ನಿಯಮಿತವಾಗಿ ಒಳಪಡಿಸಬೇಕು. ಆರಂಭಿಕ ಹಂತದಲ್ಲಿ ಅನೀಮಿಯಾ, ಅಧಿಕ ರಕ್ತದೊತ್ತಡ, ಮಾನಸಿಕ ಆರೋಗ್ಯ ಮತ್ತು ವಿವಿಧ ಆರೋಗ್ಯ ಸಮಸ್ಯೆಗಳನ್ನು ಗುರುತಿಸಿ ಉಚಿತ ಆರೋಗ್ಯ ಚಿಕಿತ್ಸೆಯನ್ನು ನೀಡವಂತಾಗಬೇಕು.ಕೈಗೊಳ್ಳುವ ಈ ಉಪಕ್ರಮದಿಂದ ತಾಯಿ–ಶಿಶು ಮರಣ ಪ್ರಮಾಣ ಶೂನ್ಯಕ್ಕೆ ತರಲು ಸೂಚಿಸಿದರು. ಜಿಲ್ಲೆಯಲ್ಲಿ ತಾಯಿ–ಮಕ್ಕಳ ಆರೋಗ್ಯ ರಕ್ಷಣೆಯಲ್ಲಿ ಆರ್.ಸಿ.ಎಚ್. ಪೋರ್ಟಲ್ ಮೂಲಕ ಗರ್ಭಿಣಿಯರಿಗೆ ಕಾಲಕಾಲಕ್ಕೆ ಆರೋಗ್ಯ ಮಾಹಿತಿ ಒದಗಿಸುವ ಜೊತೆಗೆ ತಾಯಿ–ಶಿಶು ಮರಣ ತಡೆಯಲು ಸರ್ಕಾರ ಹತ್ತಾರು ಕಾರ್ಯಕ್ರಮ ರೂಪಿಸಿ ಜಾರಿಗೊಳಿಸುತ್ತಿದೆ. ಈ ಬಗ್ಗೆ ಜಾಗೃತಿಗೆ ಮಾಹಿತಿ ನೀಡಿ ಮಾಹಿತಿ ನೀಡುವರಿಂದ ಹೆರಿಗೆಯಾಗಿ ಮಗುವಿಗೆ ಒಂದು ವರ್ಷ ಪೂರ್ಣಗೊಳ್ಳುವವರೆಗೆ ಪಡೆಯಬೇಕಾದ ಚಿಕಿತ್ಸೆ, ಲಸಿಕೆ ಸೌಲಭ್ಯಗಳ ಪ್ರತಿ ತಿಂಗಳ ಮಾಹಿತಿಯನ್ನು ಕಾಲೋಚಿತಗೊಳಿಸಬೇಕು. ಜೊತೆಗೆ ಆರೋಗ್ಯ ಸೇವಾ ಸೌಲಭ್ಯಗಳನ್ನು ನಿಗದಿತ ಅವಧಿಯಲ್ಲಿ ತಪ್ಪದೇ ನೀಡಬೇಕು. ಪ್ರತಿ ತಿಂಗಳು ಗರ್ಭಿಣಿಯರ ಹೆಸರು ನೋಂದಣಿ, ಆಶಾ ಕಾರ್ಯಕರ್ತೆಯರ ಮನೆ ಮನೆ ಭೇಟಿ ಆರೋಗ್ಯ ವಿವರ ದಾಖಲು, ಸಕಾಲದಲ್ಲಿ ಆರೋಗ್ಯ ಸೇವೆಯನ್ನು ನೀಡಿ ಪ್ರತಿ ತಿಂಗಳು ಪ್ರಗತಿ ಪರಿಶೀಲನೆ ಮಾಡಿ ತಾಯಿ–ಶಿಶು ಮರಣ ಪ್ರಮಾಣ ಜಿಲ್ಲೆಯಲ್ಲಿ ಶೂನ್ಯಕ್ಕೆ ತರಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ, ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ, ತಾಲೂಕಾ ಆರೋಗ್ಯ ಅಧಿಕಾರಿಗಳಿಗೆ ಹಾಗೂ ಎಲ್ಲ ವೈದ್ಯರಿಗೆ ಸೂಚಿಸಿದರು.



# ಅಮೆರಿಕ ಸಂಬಂಧಗಳಿಗೆ ಮೋದಿ ಸರ್ಕಾರದಿಂದ ರಾಷ್ಟ್ರೀಯ ಹಿತಾಸಕ್ತಿ ನಿರ್ಲಕ್ಷ್ಯ: ಕಾಂಗ್ರೆಸ್ ಆರೋಪ



**ನವದೆಹಲಿ, ಜೂ.20:** ನರೇಂದ್ರ ಮೋದಿ ಸರ್ಕಾರದ ವಿದೇಶಾಂಗ ನೀತಿಯ ಮೇಲೆ ಕಾಂಗ್ರೆಸ್ ಶನಿವಾರ ತೀವ್ರ ದಾಳಿ ನಡೆಸಿದ್ದು, ರಾಷ್ಟ್ರೀಯ ಹಿತಾಸಕ್ತಿಗಳಿಗಿಂತ ಸಾರ್ವಜನಿಕ ಸಂಬಂಧಗಳಿಗೆ ಆದ್ಯತೆ ನೀಡಿದೆ ಮತ್ತು ಅಮೆರಿಕದೊಂದಿಗೆ ವ್ಯವಹರಿಸುವಾಗ ಭಾರತದ ಕಾರ್ಯತಂತ್ರದ ಸ್ವಾಯತ್ತತೆಯನ್ನು ರಾಜಿ ಮಾಡಿಕೊಂಡಿದೆ ಎಂದು ಆರೋಪಿಸಿದೆ.

ಕಳೆದ 12 ವರ್ಷಗಳಲ್ಲಿ ಮೋದಿ ಸರ್ಕಾರದ ವಿದೇಶಾಂಗ ನೀತಿಯು ಭಾರತ ಮೊದಲು ಎನ್ನುವುದಕ್ಕಿಂತ ಮೊದಲು ವಿನಾಶಕಾರಿಯಾಗಿ ಪ್ರಚಾರವಾಗಿದೆ ಎಂದು ಕಾಂಗ್ರೆಸ್ ನಾಯಕ ಮತ್ತು ಅಖಿಲ ಭಾರತ ಕಾಂಗ್ರೆಸ್ ಸಮಿತಿಯ ಮಾಧ್ಯಮ ಮತ್ತು ಪ್ರಚಾರ ವಿಭಾಗದ ಅಧ್ಯಕ್ಷ ಪವನ್ ಖೇರಾ ಹೇಳಿಕೆಯಲ್ಲಿ ಹೇಳಿದ್ದಾರೆ ಮತ್ತು ಭಾರತದ ಸಾರ್ವಭೌಮತ್ವ ಮತ್ತು ಜಾಗತಿಕ ಸ್ಥಾನಮಾನವನ್ನು ಬಲಿಕೊಟ್ಟು ಪ್ರಧಾನಿ ನರೇಂದ್ರ ಮೋದಿ ಅಮೆರಿಕದ ಒತ್ತಡಕ್ಕೆ ಪದೇ ಪದೇ ಮಣಿಯುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಓಮನ್ ಕೊಲ್ಲಿಯಲ್ಲಿ ಇತ್ತೀಚೆಗೆ ನಡೆದ ಅಮೆರಿಕದ ವಾಯುದಾಳಿಯಲ್ಲಿ ಮೂವರು ಭಾರತೀಯ ನಾವಿಕರು ಸಾವನ್ನಪ್ಪಿದ ನಂತರ ಪ್ರಧಾನಿ ಭಾರತದ ಹಿತಾಸಕ್ತಿಗಳನ್ನು ರಕ್ಷಿಸುವಲ್ಲಿ ವಿಫಲರಾಗಿದ್ದಾರೆ ಎಂದು ಖೇರಾ ಆರೋಪಿಸಿದ್ದಾರೆ. ಪ್ರಧಾನಿಯಾಗಲಿ ಅಥವಾ ಸರ್ಕಾರವಾಗಲಿ ಟ್ರಂಪ್ ಆಡಳಿತದಿಂದ ಬೇಷರತ್ತಾದ ಕ್ಷಮೆಯಾಚನೆ ಅಥವಾ ವಿಷಾದ ವ್ಯಕ್ತಪಡಿಸುವಿಕೆಯನ್ನು ಕೋರಿಲ್ಲ ಎಂದು ಅವರು ಹೇಳಿದ್ದಾರೆ. ಪ್ರಧಾನಿ ಮೋದಿಯನ್ನು ಡೊನಾಲ್ಡ್ ಟ್ರಂಪ್ ಪದೇ ಪದೇ ನಿರ್ಲಕ್ಷಿಸುತ್ತಿರುವುದು ಅವರಿಗೆ ಮಾಡಿದ ಅವಮಾನ ಮಾತ್ರವಲ್ಲ; ಇದು 1.4 ಬಿಲಿಯನ್ ಭಾರತೀಯರಿಗೆ ಮುಜುಗರವಾಗಿದೆ ಎಂದು ಖೇರಾ ಹೇಳಿದರು. ನಾವಿಕರ ಸಾವಿನ ಬಗ್ಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಾಡಿರುವ ಹೇಳಿಕೆಗಳನ್ನು ಉಲ್ಲೇಖಿಸಿ, ಖೇರಾ ಅವರು ಸಂತಾಪ ಸೂಚಿಸಲು ಅಥವಾ ಕ್ಷಮೆಯಾಚಿಸಲು ವಿಫಲರಾಗಿದ್ದಾರೆ ಮತ್ತು ಅಂತಹ ಘಟನೆಗಳು "ಯಾವಾಗಲೂ ಸಂಭವಿಸಿವೆ" ಎಂದು ಹೇಳುವ ಮೂಲಕ ಘಟನೆಯನ್ನು ತಳ್ಳಿಹಾಕಿದ್ದಾರೆ ಎಂದು ಆರೋಪಿಸಿದರು. ಮೋದಿ ಸರ್ಕಾರವು ವಾಷಿಂಗ್ಟನ್ಗೆ ಪದೇ ಪದೇ ರಿಯಾಯಿತಿಗಳನ್ನು ನೀಡುವ ಮೂಲಕ ಭಾರತದ ರಾಜತಾಂತ್ರಿಕ ವಿಶ್ವಾಸಾರ್ಹತೆ ಮತ್ತು ಅಂತರರಾಷ್ಟ್ರೀಯ ನಿಲುವನ್ನು ದುರ್ಬಲಗೊಳಿಸಿದೆ ಎಂದು ಕಾಂಗ್ರೆಸ್ ನಾಯಕರು ವಾದಿಸಿದರು. ಭಾರತದ ದೀರ್ಘಕಾಲೀನ ಕಾರ್ಯತಂತ್ರದ ಸ್ವಾಯತ್ತತೆ ಮತ್ತು ಅಲಿಪ್ತತೆಯ ತತ್ವಗಳನ್ನು ಸರ್ಕಾರ ಕೈಬಿಟ್ಟಿದೆ ಎಂದು ಅವರು ಆರೋಪಿಸಿದರು. ಖೇರಾ ಎತ್ತಿರುವ ಸಮಸ್ಯೆಗಳಲ್ಲಿ, ಯುಎಸ್ ಇಂಡೋ–ಪೆಸಿಫಿಕ್ ಕಮಾಂಡ್ ಅನ್ನು ಅದರ ಹಿಂದಿನ ಹುದ್ದೆಗೆ ಮರುಸ್ಥಾಪಿಸಲಾಗಿದೆ ಎಂದು ವರದಿಯಾಗಿದೆ, ಜಮ್ಮು ಮತ್ತು ಕಾಶ್ಮೀರವನ್ನು ಚಿತ್ರಿಸುವ ತಪ್ಪಾದ ಯುಎಸ್ ಮಿಲಿಟರಿ ನಕ್ಷೆಯ ಪ್ರಕಟಣೆ, ಭಾರತದ ರಷ್ಯಾದ ತೈಲ ಖರೀದಿಗೆ ಸಂಬಂಧಿಸಿದಂತೆ ಅಮೆರಿಕದ ಒತ್ತಡ ಮತ್ತು ಭಾರತೀಯ ರೈತರು, ಸಣ್ಣ ವ್ಯವಹಾರಗಳು ಮತ್ತು ವ್ಯಾಪಾರಿಗಳ ವೆಚ್ಚದಲ್ಲಿ ಅಮೆರಿಕದ ಹಿತಾಸಕ್ತಿಗಳಿಗೆ ಅನುಕೂಲಕರವಾಗಿದೆ ಎಂದು ಅವರು ಹೇಳಿಕೊಳ್ಳುವ ಪ್ರಸ್ತಾವಿತ ಭಾರತ–ಯುಎಸ್ ವ್ಯಾಪಾರ ಒಪ್ಪಂದ ಸೇರಿವೆ. ಆಪರೇಷನ್ ಸಿಂಧೂರ್ ಸಮಯದಲ್ಲಿ ಭಾರತ ಮತ್ತು ಪಾಕಿಸ್ತಾನದ ನಡುವಿನ ಸಂಘರ್ಷವನ್ನು ನಿಲ್ಲಿಸಲು ಅವರು ಮಧ್ಯಪ್ರವೇಶಿಸಿದ್ದರು ಎಂಬ ಅಧ್ಯಕ್ಷ ಟ್ರಂಪ್ ಅವರ ಪುನರಾವರ್ತಿತ ಹೇಳಿಕೆಗಳನ್ನು ಖೇರಾ ಟೀಕಿಸಿದರು ಮತ್ತು ಬ್ರಿಕ್ಸ್ ಗುಂಪಿನ ಬಗ್ಗೆ ಅಮೆರಿಕ ಅಧ್ಯಕ್ಷರು ಮಾಡಿದ ಹೇಳಿಕೆಗಳ ಬಗ್ಗೆ ಕಳವಳ ವ್ಯಕ್ತಪಡಿಸಿದರು. "ಸತ್ಯವೆಂದರೆ ಮೋದಿ ಭಾರತದ ಹಿತಾಸಕ್ತಿಗಳನ್ನು ರಕ್ಷಿಸುವ ಬದಲು ಅಮೆರಿಕದ ಹಿತಾಸಕ್ತಿಗಳ ಮುಂದೆ ತಲೆಬಾಗುತ್ತಾರೆ" ಎಂದು ಖೇರಾ ಆರೋಪಿಸಿದರು.

ವಾಷಿಂಗ್ಟನ್ನೊಂದಿಗಿನ ಸಂಬಂಧಗಳನ್ನು ಸರ್ಕಾರ ನಿರ್ವಹಿಸುವ ರೀತಿಯನ್ನು ಪ್ರಶ್ನಿಸಿದ ಕಾಂಗ್ರೆಸ್ ನಾಯಕರು, ವಿದೇಶಾಂಗ ಸಚಿವ ಎಸ್ ಜೈಶಂಕರ್ ಅವರು ಭಾರತೀಯ ನಾವಿಕರ ಸಾವಿನ ಬಗ್ಗೆ ಪ್ರಧಾನಿ ಮೋದಿ ಅಧ್ಯಕ್ಷ ಟ್ರಂಪ್ ಅವರೊಂದಿಗೆ ಏನು ಚರ್ಚಿಸಿದ್ದಾರೆ ಮತ್ತು ಅಮೆರಿಕದಿಂದ ಯಾವುದೇ ಭರವಸೆಗಳನ್ನು ಪಡೆಯಲಾಗಿದೆಯೇ ಎಂದು ವಿವರಿಸುವ ವಿವರವಾದ ಹೇಳಿಕೆಯನ್ನು ನೀಡುತ್ತಾರೆಯೇ ಎಂದು ಕೇಳಿದರು.

ಪ್ರಸ್ತಾವಿತ ಭಾರತ–ಅಮೆರಿಕ ವ್ಯಾಪಾರ ಒಪ್ಪಂದದ ವಿವರಗಳ ಬಗ್ಗೆ ಹೆಚ್ಚಿನ ಪಾರದರ್ಶಕತೆಯನ್ನು ಅವರು ಒತ್ತಾಯಿಸಿದರು, ಇದು ಭಾರತೀಯ ರೈತರು, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು ಮತ್ತು ವ್ಯಾಪಾರಿಗಳ ಮೇಲೆ ಪ್ರತಿಕೂಲ ಪರಿಣಾಮ ಬೀರಬಹುದೇ ಎಂದು ಕೇಳಿದರು.

ಭಾರತದ ವಿದೇಶಾಂಗ ನೀತಿ ನಿರ್ದೇಶನ ಮತ್ತು ಅಮೆರಿಕದೊಂದಿಗೆ ಅದರ ವಿಕಸನಗೊಳ್ಳುತ್ತಿರುವ ಸಂಬಂಧದ ಬಗ್ಗೆ ತೀವ್ರಗೊಳ್ಳುತ್ತಿರುವ ರಾಜಕೀಯ ಚರ್ಚೆಯ ಮಧ್ಯೆ ಕಾಂಗ್ರೆಸ್ನ ಟೀಕೆ ಬಂದಿದೆ.

ಭಾರತದ ಕಾರ್ಯತಂತ್ರದ ಸ್ವಾಯತ್ತತೆಯನ್ನು ರಾಜಿ ಮಾಡಿಕೊಳ್ಳಲಾಗಿದೆ ಎಂಬ ವಿರೋಧ ಪಕ್ಷದ ಆರೋಪಗಳನ್ನು ಸರ್ಕಾರ ಪದೇ ಪದೇ ತಿರಸ್ಕರಿಸಿದೆ, ಅದರ ವಿದೇಶಾಂಗ ನೀತಿ ನಿರ್ಧಾರಗಳು ಭಾರತದ ಭದ್ರತೆ, ಆರ್ಥಿಕ ಮತ್ತು ರಾಜತಾಂತ್ರಿಕ ಆದ್ಯತೆಗಳನ್ನು ಆಧರಿಸಿವೆ ಎಂದು ಪ್ರತಿಪಾದಿಸುತ್ತದೆ.

# ಇಂದು ಅಂ.ರಾ. ಯೋಗ ದಿನಾಚರಣೆ

## 6 ಲಕ್ಷ ಜನರಿಂದ ನೋಂದಣಿ – 'ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ' ಘೋಷವಾಕ್ಯದಡಿ ಆಯೋಜನೆ




ನವದೆಹಲಿ, ಜೂ.20: ಭಾನುವಾರ ಅಂತಾರಾಷ್ಟ್ರೀಯ ಯೋಗ ದಿನಾಚರಣೆ. ಈ ಬಾರಿ ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ ಎಂಬ ಘೋಷವಾಕ್ಯದಡಿ ಯೋಗ ದಿನವನ್ನು ಆಯೋಜಿಸಲಾಗಿದೆ. ಈ ಯೋಗ ದಿನದಂದು ಪ್ರಧಾನಿ ಮೋದಿ ಜೊತೆಗೆ ಯೋಗ ನಡೆಸಲು ದೇಶಾದ್ಯಂತ ವಿವಿಧ ಸಂಸ್ಥೆ ಮತ್ತು ಸಮುದಾಯಗಳು ಮುಂದಾಗಿದ್ದು, ಬರೋಬ್ಬರಿ 6 ಲಕ್ಷ ನೋಂದಣಿ ಆಗಿವೆ ಎಂದು ಆಯುಷ್ ಸಚಿವಾಲಯದ ಯೋಗ ಸಂಗಮ ಪೋರ್ಟಲ್ ಅಧಿಕೃತವಾಗಿ ಪ್ರಕಟಿಸಲಾಗಿದೆ.

ನೋಂದಾಯಿತ ಸಂಸ್ಥೆಗಳು ಜೂನ್ 21 ರಂದು ಪ್ರಧಾನಿ ನರೇಂದ್ರ ಮೋದಿಯವರೊಂದಿಗೆ ರಾಷ್ಟ್ರವ್ಯಾಪಿ ಯೋಗ ಸಂಗಮ ಆಂದೋಲನಕ್ಕೆ ಸೇರಲು ಮತ್ತು ಯೋಗಾಭ್ಯಾಸ ಮಾಡಲು ಅವಕಾಶ ನೀಡಿದೆ. ಭಾಗಿದಾರರನ್ನು ತಮ್ಮ ಸ್ಥಳಗಳಲ್ಲಿ ಭಾಗವಹಿಸಲು ಸಜ್ಜುಗೊಳಿಸುತ್ತದೆ. ಇದಕ್ಕಾಗಿ ಪೋರ್ಟಲ್‌ನಲ್ಲಿ ಅವಕಾಶ ನೀಡಿದ್ದು, ಇತ್ತೀಚಿನ ದಿನದಲ್ಲಿ ಇದರಲ್ಲಿ ಏರಿಕೆ ಕಂಡಿದೆ. ಇದು ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಭಾಗವಾಗಲು, ಜನರಲ್ಲಿ ಹೆಚ್ಚುತ್ತಿರುವ ಉತ್ಸಾಹ ತೋರಿಸುತ್ತದೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ.

ದೇಶಾದ್ಯಂತದ ಶಾಲೆಗಳು, ಕಾಲೇಜುಗಳು, ಸರ್ಕಾರಿ ಸಂಸ್ಥೆಗಳು, ಖಾಸಗಿ ಸಂಸ್ಥೆಗಳು, ಎನ್‌ಜಿಒಗಳು ಮತ್ತು ಸಮುದಾಯ ಗುಂಪುಗಳು ಪ್ರಧಾನಿ ನೇತೃತ್ವದ ಯೋಗ ಆಚರಣೆಯಲ್ಲಿ ನೋಂದಾಯಿಸಿಕೊಂಡಿವೆ. ಯೋಗ ಸಂಗಮ ಉಪಕ್ರಮವು ಭಾರತದಾದ್ಯಂತ 778 ಜಿಲ್ಲೆಗಳನ್ನು ಒಳಗೊಂಡಂತೆ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳನ್ನು ತಲುಪಿದೆ. ನೋಂದಣಿಗಳಲ್ಲಿ 3.22 ಲಕ್ಷಕ್ಕೂ ಹೆಚ್ಚು ಸರ್ಕಾರಿ ಸಂಸ್ಥೆಗಳು, ಸುಮಾರು 2 ಲಕ್ಷ ಶಿಕ್ಷಣ ಸಂಸ್ಥೆಗಳು, 16,000ಕ್ಕೂ ಹೆಚ್ಚು ಖಾಸಗಿ ಸಂಸ್ಥೆಗಳು, 5,000ಕ್ಕೂ ಹೆಚ್ಚು ಎನ್‌ಜಿಒಗಳು ಮತ್ತು ಇತರೆ ವರ್ಗಗಳಿಂದ ಸುಮಾರು 44,000 ಸಂಸ್ಥೆಗಳು ಸೇರಿವೆ. ರಾಜ್ಯಗಳಲ್ಲಿ, ಪಶ್ಚಿಮ ಬಂಗಾಳವು 2.76 ಲಕ್ಷಕ್ಕೂ ಹೆಚ್ಚು ನೋಂದಣಿಗಳೊಂದಿಗೆ ಅತಿ ಹೆಚ್ಚು ಭಾಗವಹಿಸಿದರೆ, ನಂತರದಲ್ಲಿ ರಾಜಸ್ಥಾನವು ಸುಮಾರು 1.50 ಲಕ್ಷ ನೋಂದಣಿ ಮಾಡಿದೆ.

ಆಯುಷ್ ಸಚಿವಾಲಯವು ಹೆಚ್ಚಿನ ಸಂಸ್ಥೆಗಳು, ಸಂಸ್ಥೆಗಳು ಮತ್ತು ಸಮುದಾಯಗಳನ್ನು ತಮ್ಮ ಯೋಗ ಸಂಗಮ ಕಾರ್ಯಕ್ರಮಗಳಿಗೆ ನೋಂದಾಯಿಸುವ ಮೂಲಕ ಕಾರ್ಯಕ್ರಮಕ್ಕೆ ಆಹ್ವಾನಿಸಿದೆ. ಬೆಳಗ್ಗೆ 6:30 ಕ್ಕೆ ಪ್ರಧಾನಿ ಮೋದಿ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ. ದೇಶದ ಜನರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

# ಶಿಂಧೆ 'ಟೈಗರ್' ಕಾಮೆಂಟ್‌ಗೆ ಸಂಜಯ್ ರಾವುತ್ ತಿರುಗೇಟು

## ಮಹಾರಾಷ್ಟ್ರ ರಾಜಕಾರಣದಲ್ಲಿ ತಾರಕಕ್ಕೇರಿದ ನಾಯಿ-ಹುಲಿ ಜಗಳ



**ಮುಂಬೈ, ಜೂ.20:** ಮಹಾರಾಷ್ಟ್ರ ರಾಜಕಾರಣದಲ್ಲಿ ಶಿವಸೇನೆಯ ಎರಡು ಬಣಗಳ ನಡುವಿನ ಜಿದ್ದಾಜಿದ್ದಿ ಈಗ ಬೀದಿಜಗಳದ ರೂಪ ಪಡೆದಿದೆ. ಕೆಲವರು ನಾಯಿಗಳ ತರಹ ಇರುತ್ತಾರೆ, ಆದರೆ ನಿಯತ್ತಾಗಿ ಇರುವುದಿಲ್ಲ ಎಂದು ಬರೆಯುವ ಮೂಲಕ ಶಿವಸೇನಾ (ಯುಬಿಟಿ) ಸಂಸದ ಸಂಜಯ್ ರಾವುತ್ ಡಿಸಿಎಂ ಏಕನಾಥ್ ಶಿಂಧೆ ಬಣದ ವಿರುದ್ಧ ಸಾಮಾಜಿಕ ಜಾಲತಾಣದಲ್ಲಿ ಅತ್ಯಂತ ತೀಕ್ಷ್ಣ ಹಾಗೂ ವಿವಾದಾತ್ಮಕ ಪೋಸ್ಟ್ ಹಾಕಿದ್ದಾರೆ.

ಶುಕ್ರವಾರವಷ್ಟೇ ಏಕನಾಥ್ ಶಿಂಧೆ ಅವರು ಉದ್ಧವ್ ಠಾಕ್ರೆ ಬಣವನ್ನು ಉದ್ದೇಶಿಸಿ, ನಾಯಿಗಳು ಹಿಂಡಾಗಿ ಬೊಗಳುತ್ತವೆ, ಆದರೆ ಹುಲಿ ಒಂಟಿಯಾಗಿ ಬರುತ್ತದೆ ಎಂದು ಲೇವಡಿ ಮಾಡಿದ್ದರು. ಇದಕ್ಕೆ ಪ್ರತಿಯಾಗಿ ಸಂಜಯ್ ರಾವುತ್ ಶನಿವಾರ ಈ ವಿವಾದಾತ್ಮಕ ಪೋಸ್ಟ್ ಹಂಚಿಕೊಂಡಿದ್ದು, ಮರಾಠಿ ರಾಜಕಾರಣದಲ್ಲಿ ಸದ್ಯ ನಾಯಿ–ಹುಲಿ ಜಗಳ ತಾರಕಕ್ಕೇರಿದೆ.

ನಾಲ್ಕು ವರ್ಷಗಳ ಹಿಂದೆ (2022ರಲ್ಲಿ) ಏಕನಾಥ್ ಶಿಂಧೆ ಬಂಡಾಯ ಎದ್ದು ಉದ್ಧವ್ ಠಾಕ್ರೆ ಅವರ ಸರ್ಕಾರವನ್ನು ಉರುಳಿಸಿದ್ದರು. ಈಗ ಇತಿಹಾಸ ಮತ್ತೆ ಮರುಕಳಿಸುವ ಮುನ್ಸೂಚನೆ ಸಿಗುತ್ತಿದ್ದು, ಉದ್ಧವ್ ಠಾಕ್ರೆ ನೇತೃತ್ವದ ಶಿವಸೇನಾ ಪಕ್ಷವು ಮತ್ತೊಂದು ಇಬ್ಭಾಗಕ್ಕೆ ಸಜ್ಜಾಗಿದೆ. ದೆಹಲಿಯ ಸಂಸತ್ ಸಂಕೀರ್ಣದಲ್ಲಿ ಇತ್ತೀಚೆಗೆ ನಡೆದ ಪಕ್ಷದ ಪ್ರಮುಖ ಸಂಸದೀಯ ಸಭೆಗೆ ಉದ್ಧವ್ ಬಣದ ಒಟ್ಟು 9 ಲೋಕಸಭಾ ಸಂಸದರ ಪೈಕಿ 6 ಸಂಸದರು ಗೈರುಹಾಜರಾಗುವ ಮೂಲಕ ಪಕ್ಷಕ್ಕೆ ದೊಡ್ಡ ಶಾಕ್ ನೀಡಿದ್ದಾರೆ.

ಸಭೆಗೆ ಕೇವಲ ಅರವಿಂದ್ ಸಾವಂತ್, ಅನಿಲ್ ದೇಸಾಯಿ ಮತ್ತು ರಾಜಾಭೌ ವಾಜೆ ಮಾತ್ರ ಹಾಜರಾಗಿದ್ದರು. ನಾಪತ್ತೆಯಾಗಿರುವ ಸಂಸದರಾದ ನಾಗೇಶ್ ಆಷ್ಟಿಕರ್, ಸಂಜಯ್ ದೇಶ್‌ಮುಖ್, ಸಂಜಯ್ ಜಾಧವ್, ಸಂಜಯ್ ದಿನಾ ಪಾಟೀಲ್, ಓಂಪ್ರಕಾಶ್ ರಾಜೇನಿಂಬಾಳ್ಕರ್ ಮತ್ತು ಭೌಸಾಹೇಬ್ ವಾಕಚೌರೆ ಅವರು ಸದ್ಯ ಜೈಪುರದ ರೆಸಾರ್ಟ್ ಒಂದರಲ್ಲಿ ಅಡಗಿ ಕುಳಿತಿದ್ದಾರೆ ಎಂದು ವರದಿಯಾಗಿದೆ. ಈ ಆರೂ ಸಂಸದರು ಶೀಘ್ರದಲ್ಲೇ ಏಕನಾಥ್ ಶಿಂಧೆ ನೇತೃತ್ವದ ಅಸಲಿ ಶಿವಸೇನೆಯನ್ನು ಸೇರಲಿದ್ದಾರೆ ಎಂಬ ವದಂತಿ ದಟ್ಟವಾಗಿದೆ.

ಸಂಸದರ ಈ ದಿಢೀರ್ ಬಂಡಾಯದ ಬಗ್ಗೆ ಮಾಧ್ಯಮಗಳ ಮುಂದೆ ತೀವ್ರ ಆಕ್ರೋಶ ಹೊರಹಾಕಿರುವ ಸಂಜಯ್, ತಮ್ಮನ್ನು ಶಿವಸೈನಿಕರು ಎಂದು ಕರೆದುಕೊಳ್ಳುತ್ತಿದ್ದ ಈ ಜನರೆಲ್ಲರೂ ಕೇವಲ ಹೇಡಿಗಳು. ಅಪ್ಪಟ ಶಿವಸೈನಿಕರು ಎಂದಿಗೂ ಹೇಡಿಗಳಾಗಿರಲು ಸಾಧ್ಯವಿಲ್ಲ. ಒಂದು ವೇಳೆ ಅವರು ತೆಗೆದುಕೊಂಡಿರುವ ನಿರ್ಧಾರ ಸರಿ ಎಂದಾದರೆ, ಅವರೆಲ್ಲರೂ ಜೈಪುರದಲ್ಲಿ ಹೋಗಿ ಅಡಗ ಕುಳಿತಿರುವುದೇಕೆ ಎಂದು ಪ್ರಶ್ನಿಸಿದ್ದಾರೆ.

ಪಕ್ಷದ ಆದೇಶ ಉಲ್ಲಂಘಿಸಿ ಸಭೆಗೆ ಗೈರಾದ ಆರೂ ಸಂಸದರಿಗೆ ಈಗಾಗಲೇ ಕಾರಣ ಕೇಳಿ ನೋಟಿಸ್ ಜಾರಿ ಮಾಡಲಾಗಿದೆ. ಇವರನ್ನು ಲೋಕಸಭಾ ಸದಸ್ಯತ್ವದಿಂದ ಅನರ್ಹಗೊಳಿಸಲು ಕಾನೂನು ಹೋರಾಟ ಆರಂಭಿಸಿದ್ದೇವೆ ಎಂದ ರಾವತ್, ಲೋಕಸಭಾ ಸ್ಪೀಕರ್ ಅವರು ಸಂವಿಧಾನ, ಕಾನೂನು ಮತ್ತು ಸುಪ್ರೀಂಕೋರ್ಟ್‌ನ ನಿರ್ದೇಶನಗಳ ಪ್ರಕಾರ ನಡೆದುಕೊಂಡರೆ, ಈ ಆರೂ ಜನ ಸಂಸದರು ಅನರ್ಹರಾಗುವುದು ಗ್ಯಾರಂಟಿ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಇದಕ್ಕೂ ಮುನ್ನ ಶುಕ್ರವಾರ ನಡೆದ ಶಿವಸೇನೆಯ 60ನೇ ಸಂಸ್ಥಾಪನಾ ದಿನಾಚರಣೆಯಲ್ಲಿ ಮಾತನಾಡಿದ್ದ ಡಿಸಿಎಂ ಏಕನಾಥ್ ಶಿಂಧೆ, ಉದ್ಧವ್ ಬಣವನ್ನು ತೀವ್ರವಾಗಿ ತರಾಟೆಗೆ ತಗೆದುಕೊಂಡಿದ್ದರು. ಕೆಲವು ದಿನಗಳಿಂದ ಕೆಲವು ನಾಯಿಗಳು ನಮ್ಮ ವಿರುದ್ಧ ಬೊಗಳುತ್ತಿವೆ, ಆದರೆ ನಿಮ್ಮ ಮುಂದೆ ಈಗ ಹುಲಿ ನಿಂತಿದೆ. ಅವರು ಗುಂಪಾಗಿ ಬರುತ್ತಾರೆ, ಹುಲಿ ಯಾವಾಗಲೂ ಒಂಟಿಯಾಗಿಯೇ ಬರುತ್ತದೆ ಎಂದು ಗುಡುಗಿದ್ದರು.

ಅಲ್ಲದೆ, ಉದ್ಧವ್ ಬಣದ ಸಂಸದರು ತಮ್ಮತ್ತ ಬರುತ್ತಿರುವುದನ್ನು ಸೂಚ್ಯವಾಗಿ ಹೇಳಿದ್ದ ಶಿಂಧೆ, ಇದು ಕೇವಲ ಟ್ರೇಲರ್ ಅಷ್ಟೇ, ಅಸಲಿ ಸಿನಿಮಾ ಇನ್ನು ಮುಂದೆ ಬರಲಿದೆ. ಮುಂದೆ ಏನೇನು ಆಗುತ್ತದೆ ಎಂದು ನೀವೇ ಕಾದು ನೋಡಿ ಎಂದು ಸವಾಲು ಹಾಕಿದ್ದರು. ಶಿಂಧೆ ಅವರ ಈ ಹೇಳಿಕೆಗೆ ಕೌಂಟರ್ ಕೊಡಲು ಹೋಗಿಯೇ ಸಂಜಯ್ ರಾವುತ್ ಈಗ ನಿಯತ್ತಿಲ್ಲದ ನಾಯಿಗಳು ಎಂಬ ವಿವಾದಾತ್ಮಕ ಪೋಸ್ಟ್ ಹಾಕಿ ಉರಿಯುವ ಬೆಂಕಿಗೆ ತುಪ್ಪ ಸುರಿದಿದ್ದಾರೆ.

# ರಾಮಮಂದಿರ ದೇಣಿಗೆ ಹಗರಣದಲ್ಲಿ ಬ್ಯಾಂಕ್ ನೌಕರರ ಪಾತ್ರ ಗಂಭೀರ

**ಬ್ಯಾಂಕ್ ನೌಕರರು ಟ್ರಸ್ಟ್‌ನ ಅಧಿಕಾರಿಗಳು ಮತ್ತು ಉದ್ಯೋಗಿಗಳಿಗೆ ಅಧೀನರಾಗಿದ್ದರು**

**ಶ್ರೀರಾಮ ಜನ್ಮಭೂಮಿ ಮಂದಿರ ನಿರ್ಮಾಣ ಸಮಿತಿ ಅಧ್ಯಕ್ಷ ನೃಪೇಂದ್ರ ಮಿಶ್ರಾ ಆರೋಪ**



**ಅಯೋಧ್ಯೆ, ಜೂ.20:** ರಾಮಮಂದಿರ ದೇಣಿಗೆ ಹಗರಣದಲ್ಲಿ ಬ್ಯಾಂಕ್ ನೌಕರರ ಪಾತ್ರ ಗಂಭೀರವಾಗಿದೆ ಎಂದು ಶ್ರೀ ರಾಮ ಜನ್ಮಭೂಮಿ ಮಂದಿರ ನಿರ್ಮಾಣ ಸಮಿತಿ ಅಧ್ಯಕ್ಷ ನೃಪೇಂದ್ರ ಮಿಶ್ರಾ ಆರೋಪಿಸಿದ್ದಾರೆ. ಬ್ಯಾಂಕ್ ಅಧಿಕಾರಿಗಳು ಮತ್ತು ನೌಕರರ ನಿರ್ಲಕ್ಷ್ಯ ಮತ್ತು ಸಂಭಾವ್ಯ ಒಪ್ಪಂದದ ಕೆಲವು ಪುರಾವೆಗಳನ್ನು ಎಸ್‌ಐಟಿ ಕಂಡುಕೊಂಡಿದೆ ಎಂದು ತಿಳಿಸಿದ್ದಾರೆ.

ಖಾಸಗಿ ಸಂದರ್ಶನವೊಂದರಲ್ಲಿ ಮಾತನಾಡಿದ ಅವರು, ಬ್ಯಾಂಕ್ ನೌಕರರು ಟ್ರಸ್ಟ್‌ನ ಅಧಿಕಾರಿಗಳು ಮತ್ತು ಉದ್ಯೋಗಿಗಳಿಗೆ ಅಧೀನರಾಗಿದ್ದರು, ಟ್ರಸ್ಟ್‌ನ ಅಧಿಕಾರಿಗಳ ವ್ಯಾಪ್ತಿ ಮತ್ತು ಪ್ರಭಾವ ಎಲ್ಲರಿಗೂ ತಿಳಿದಿದ್ದರಿಂದ ಅವರು ಅವರ ಸೂಚನೆಗಳನ್ನು ಅನುಸರಿಸುತ್ತಿದ್ದರು ಎಂದು ಆರೋಪಿಸಿದ್ದಾರೆ.

ದೇಣಿಗೆ ಎಣಿಕೆ ಪ್ರಕ್ರಿಯೆಯಲ್ಲಿ ಟ್ರಸ್ಟ್‌ನ ಅಧಿಕಾರಿಗಳು ಮತ್ತು ನೌಕರರು ಸಂಬಂಧಿತ ಬ್ಯಾಂಕಿನ ನೌಕರರಷ್ಟೇ ಪಾತ್ರವನ್ನು ವಹಿಸುತ್ತಾರೆ, ಎಣಿಕೆ ಪ್ರಕ್ರಿಯೆಯಲ್ಲಿ ಯಾವುದೇ ಅಕ್ರಮಗಳು ನಡೆಯದಂತೆ ನೋಡಿಕೊಳ್ಳುತ್ತಾರೆ ಆದರೆ ಇದು ಸಂಭವಿಸಲಿಲ್ಲ. ಜವಾಬ್ದಾರಿಯುತ ಬ್ಯಾಂಕ್ ಅಧಿಕಾರಿಗಳು ಮತ್ತು ನೌಕರರು ಕಣ್ಣು ಮುಚ್ಚಿಕೊಂಡರು.

ಮೂಲಗಳು ಹೇಳುವಂತೆ ಬ್ಯಾಂಕ್ ಈ ಕೆಲಸವನ್ನು ಖಾಸಗಿ ಕಂಪನಿಗೆ ಹೊರಗುತ್ತಿಗೆ ನೀಡಿದೆ. ಕಂಪನಿಯು ಹೊರಗುತ್ತಿಗೆ ಮೂಲಕ ಉದ್ಯೋಗಿಗಳನ್ನು ನೇಮಿಸಿಕೊಂಡು ಲೆಕ್ಕಾಚಾರ ಪ್ರಕ್ರಿಯೆಗೆ ನಿಯೋಜಿಸಿತು. ಟ್ರಸ್ಟ್ ಅಧಿಕಾರಿಗಳೇ ಕೆಲಸವನ್ನು ಹೊರಗುತ್ತಿಗೆ ನೀಡಿದ್ದರಿಂದ, ಅವರ ಸಂಬಂಧಿಕರು, ಪರಿಚಯಸ್ಥರು ಮತ್ತು ನಿಕಟವರ್ತಿಗಳು, ಬ್ಯಾಂಕ್ ಅಧಿಕಾರಿಗಳು ಮೌನವಾಗಿದ್ದರು. ಟ್ರಸ್ಟಿಗಳು ಮತ್ತು ಅವರ ಉದ್ಯೋಗಿಗಳು ಏನು ಬಯಸುತ್ತಾರೋ ಅದು ನಡೆಯಿತು ಎಂದಿದ್ದಾರೆ.

**45 ದಿನಗಳವರೆಗೆ ಮಾತ್ರ ಸಿಸಿಟಿವಿ ಬ್ಯಾಕಪ್**

ರಾಮಮಂದಿರ ದೇಣಿಗೆ ಕಳ್ಳತನ ಪ್ರಕರಣದಲ್ಲಿ ಸಾಕ್ಷ್ಯಗಳನ್ನು ಸಂಗ್ರಹಿಸುವುದು ಎಸ್‌ಐಟಿಗೆ ಅತ್ಯಂತ ಸವಾಲಿನ ಕೆಲಸ. ಅತ್ಯಂತ ನಿರ್ಣಾಯಕ ಸಾಕ್ಷ್ಯವೆಂದರೆ ಸಿಸಿಟಿವಿ ದೃಶ್ಯಾವಳಿಗಳು, ಆದರೆ ತಿರುಚುವಿಕೆಯ ಪುರಾವೆಗಳು ಈಗಾಗಲೇ ಪತ್ತೆಯಾಗಿವೆ. ಮುಖ್ಯವಾಗಿ, ಕ್ಯಾಮರಾಗಳು ಕೇವಲ 45 ದಿನಗಳ ಬ್ಯಾಕಪ್ ಹೊಂದಿದ್ದು, ಹಲವು ವರ್ಷಗಳ ದೃಶ್ಯಗಳನ್ನು ಸಂಗ್ರಹಿಸಲು ಅಸಾಧ್ಯವಾಗಿದೆ. ಆದಾಗ್ಯೂ, ಎಸ್‌ಐಟಿ ವಿಧಿವಿಜ್ಞಾನ ತನಿಖೆಯನ್ನು ನಡೆಸುತ್ತದೆ, ಸಾಧ್ಯವಾದಷ್ಟು ದಿನಗಳ ದೃಶ್ಯಗಳನ್ನು ಮರುಪಡೆಯಲು ಪ್ರಯತ್ನಿಸುತ್ತದೆ. ಅದಕ್ಕಾಗಿಯೇ ತನಿಖೆಯ ಸಂಶೋಧನೆಗಳು ಪ್ರಕರಣಕ್ಕೆ ನಿರ್ಣಾಯಕವಾಗುತ್ತವೆ.

ಎಂಟು ತಿಂಗಳ ಹಿಂದಿನ ದೃಶ್ಯಗಳನ್ನು ಅಳಿಸಲಾಗಿದೆ ಎಂದು ಮಾಜಿ ಟ್ರಸ್ಟ್ ಅಧಿಕಾರಿ ಮಹಿಪಾಲ್ ಸಿಂಗ್ ಆರೋಪಿಸಿದ್ದರು. ಈ ದೃಶ್ಯಗಳು ಬಹಳ ಹಿಂದಿನವು, ಆದ್ದರಿಂದ ಅವುಗಳ ಬ್ಯಾಕಪ್‌ಗಳು ಲಭ್ಯವಿಲ್ಲ. ಆದ್ದರಿಂದ, ದೃಶ್ಯಗಳ ಅಳಿಸುವಿಕೆಯನ್ನು ಸಾಬೀತುಪಡಿಸುವುದು ಅತ್ಯಂತ ಕಷ್ಟಕರವಾಗಿರುತ್ತದೆ. ಆದಾಗ್ಯೂ, ಕಳೆದ ಒಂದೂವರೆ ತಿಂಗಳಲ್ಲಿ ಇಂತಹ ಕುಶಲತೆಗಳು ನಡೆದಿದ್ದರೆ, ಅವು ಬೆಳಕಿಗೆ ಬರುವ ಸಾಧ್ಯತೆಯಿದೆ.

ದೇಣಿಗೆಗಳ ಎಣಿಕೆ ಮತ್ತು ಲೆಕ್ಕಪತ್ರ ನಿರ್ವಹಣೆಗೆ ಬ್ಯಾಂಕ್ ಜವಾಬ್ದಾರವಾಗಿದೆ ಎಂದು ನೃಪೇಂದ್ರ ಮಿಶ್ರಾ ಹೇಳಿದ್ದಾರೆ, ಆದರೆ ಪ್ರಾಥಮಿಕ ಸಂಶೋಧನೆಗಳು ಬ್ಯಾಂಕ್ ತನ್ನ ಜವಾಬ್ದಾರಿಗಳನ್ನು ಪೂರೈಸುವಲ್ಲಿ ವಿಫಲವಾಗಿದೆ ಎಂದು ಸೂಚಿಸುತ್ತವೆ. ಸಿಸಿಟಿವಿ ದೃಶ್ಯಾವಳಿಗಳನ್ನು ಉದ್ದೇಶಪೂರ್ವಕವಾಗಿ ತೆಗೆದುಹಾಕಲಾಗಿಲ್ಲ, ಬದಲಿಗೆ ಸ್ವಯಂ–ಅಳಿಸು ವ್ಯವಸ್ಥೆಯಿಂದ ಅಳಿಸಲಾಗಿದೆ ಎಂದು ಅವರು ಹೇಳಿದ್ದಾರೆ.

**ಅಂಕಿಅಂಶಗಳ ಬಗ್ಗೆ ಅನುಮಾನ**

ದೇವಾಲಯಕ್ಕೆ ಭೇಟಿ ನೀಡಿದ ಭಕ್ತರು ಮತ್ತು ಸ್ವೀಕರಿಸಿದ ದೇಣಿಗೆಗಳ ದತ್ತಾಂಶವನ್ನು ಪರಿಶೀಲಿಸಬೇಕು. ಮಾರ್ಚ್ 2025 ಮತ್ತು ಮಾರ್ಚ್ 2026 ರ ನಡುವೆ 16 ಕೋಟಿ ಭಕ್ತರು ಭೇಟಿ ನೀಡಿದ್ದರೆ ಮತ್ತು ದೇಣಿಗೆಗಳು 83 ಕೋಟಿ ರೂ.ಗಳಾಗಿದ್ದರೆ, ಇದು ಪ್ರತಿ ಭಕ್ತನಿಗೆ ಸರಾಸರಿ 5 ರೂ.ಗಳ ದೇಣಿಗೆಗೆ ಸಮನಾಗಿರುತ್ತದೆ. ಭಕ್ತರ ಸಂಖ್ಯೆಯ ದಾಖಲೆಯನ್ನು ಪ್ರತಿದಿನ ನಿರ್ವಹಿಸಲಾಗುತ್ತದೆ. ಈ ಅವಧಿಯಲ್ಲಿ ದೇವಾಲಯಕ್ಕೆ ಭೇಟಿ ನೀಡುವ ಭಕ್ತರ ಸಂಖ್ಯೆಯನ್ನು ಟ್ರಸ್ಟ್ ಸ್ಪಷ್ಟಪಡಿಸಬೇಕು. ಎಸ್‌ಐಟಿ ಅವರಿಂದ ಯಾವುದೇ ಮಾಹಿತಿಯನ್ನು ಕೇಳಿದರೆ, ಅವರು ಸಂಪೂರ್ಣವಾಗಿ ಸಹಕರಿಸುತ್ತಾರೆ. ಎಣಿಕೆ ಪ್ರಕ್ರಿಯೆಗೆ ಸೂಚಿಸಲಾದ ಮಾರ್ಗಸೂಚಿ ಗಳಲ್ಲಿ ಕೇವಲ 10 ಪ್ರತಿಶತವನ್ನು ಮಾತ್ರ ಅನುಸರಿಸಲಾಗಿದೆ ಎಂದು ನೃಪೇಂದ್ರ ಮಿಶ್ರಾ ಹೇಳಿದ್ದಾರೆ.

# ಏಳು ವರ್ಷದ ನಂತರ ಕೈಲಾಸ ಮಾನಸ ಸರೋವರ ಯಾತ್ರೆ ಪುನರಾರಂಭ

**ಸಿಕ್ಕಿಂನ ನಾಥುಲಾ ಮಾರ್ಗದಿಂದ ಪ್ರಯಾಣ ಆರಂಭಿಸಿದ ಯಾತ್ರಿಗಳ ಮೊದಲ ತಂಡ**

ನವದೆಹಲಿ, ಜೂ.20: ಏಳು ವರ್ಷಗಳ ನಂತರ ಕೈಲಾಸ ಮಾನಸ ಸರೋವರ ಯಾತ್ರೆ ಶನಿವಾರ ಪುನರಾರಂಭಗೊಂಡಿದೆ. ಸಿಕ್ಕಿಂನ ನಾಥುಲಾ ಗಿರಿಕಣಿವೆಯಿಂದ ಯಾತ್ರಾರ್ಥಿಗಳ ಮೊದಲ ತಂಡವು ಪವಿತ್ರ ಆಧ್ಯಾತ್ಮಿಕ ಪ್ರಯಾಣವನ್ನು ಪ್ರಾರಂಭಿಸಿತು.

ಈ ವರ್ಷ ಒಟ್ಟು 500 ಯಾತ್ರಾರ್ಥಿಗಳು 10 ತಂಡಗಳಲ್ಲಿ ವಿಭಜಿಸಿ ಪವಿತ್ರ ಕೈಲಾಸಪರ್ವತ ಮತ್ತು ಮಾನಸರೋವರ್ ಸರೋವರದ ದರ್ಶನಕ್ಕೆ ವ್ಯವಸ್ಥೆ ಮಾಡಿದೆ. ಪ್ರತಿ ತಂಡದಲ್ಲಿ 50 ಯಾತ್ರಾರ್ಥಿಗಳಿರುತ್ತಾರೆ. ಪ್ರತಿ ತಂಡಕ್ಕೆ ಒಬ್ಬ ಸಂಪರ್ಕಾಧಿಕಾರಿ ಮತ್ತು ಒಬ್ಬ ವೈದ್ಯಕೀಯ ಸಹಾಯಕರನ್ನು ನಿಯೋಜಿಸಲಾಗಿದೆ. ಭಾರತ ಮತ್ತು ಚೀನಾ ಸರ್ಕಾರಗಳ ಸಮನ್ವಯದಲ್ಲಿ ವಿದೇಶಾಂಗ ಸಚಿವಾಲಯವು ಈ ಯಾತ್ರೆಯನ್ನು ಆಯೋಜಿಸಿದೆ.



ಯಾತ್ರೆಗೆ ಮುನ್ನ ಚೀನಾದಲ್ಲಿ ಭಾರತದ ರಾಯಭಾರಿ ವಿಕ್ರಮ್ ದೊರೈಸ್ವಾಮಿ ಅವರು ವೀಡಿಯೋ ಸಂದೇಶವೊಂದನ್ನು ಬಿಡುಗಡೆ ಮಾಡಿ ಯಾತ್ರಾರ್ಥಿಗಳನ್ನು ಸ್ವಾಗತಿಸಿದ್ದಾರೆ. ನಾಥು ಲಾ ಮಾರ್ಗದ ಮೂಲಕ ಬರುವ ಯಾತ್ರಾರ್ಥಿಗಳನ್ನು ಚೀನಾ ಗಡಿ ಸುಂಕ ಮತ್ತು ವಲಸೆ ಅಧಿಕಾರಿಗಳು ಸ್ವಾಗತಿಸುತ್ತಾರೆ. ನಂತರ ಬಸ್‌ನಲ್ಲಿ ಅವರನ್ನು ಯಾಡಾಂಗ್ ಕೌಂಟಿಗೆ ಕರೆದೊಯ್ಯಲಾಗುತ್ತದೆ. ತಂಗುವಿಕೆ, ಊಟ ಮತ್ತು ಕರೆನ್ಸಿ ವಿನಿಮಯ ಸೌಲಭ್ಯಗಳ ಬಗ್ಗೆಯೂ ಮಾಹಿತಿ ನೀಡಲಾಗಿದೆ.

ರಾಯಭಾರಿ ಮತ್ತು ಅವರ ತಂಡವು ಇತ್ತೀಚೆಗೆ ಸಿಕ್ಕಿಂ ಮತ್ತು ಉತ್ತರಾಖಂಡ್‌ನಿಂದ ಟಿಬೆಟ್‌ಗೆ ಹೋಗುವ ಮಾರ್ಗಗಳ ಪ್ರಮುಖ ಸ್ಥಳಗಳನ್ನು ಸಂದರ್ಶಿಸಿ ಲಾಜಿಸ್ಟಿಕ್ ಮತ್ತು ಆಡಳಿತಾತ್ಮಕ ಸಿದ್ಧತೆಗಳನ್ನು ಪರಿಶೀಲಿಸಿದ್ದಾರೆ. ಮುಂದಿನ ದಿನಗಳಲ್ಲಿ ಯಾತ್ರಾರ್ಥಿಗಳಿಗೆ ಹೆಚ್ಚುವರಿ ವೀಡಿಯೋಗಳು ಮತ್ತು ಸಲಹೆಗಳನ್ನು ಬಿಡುಗಡೆ ಮಾಡಲಾಗುವುದು ಎಂದು ಭಾರತೀಯ ದೂತಾವಾಸ ತಿಳಿಸಿದೆ. ಹಿಂದೂ, ಬೌದ್ಧ, ಜೈನ ಮತ್ತು ಬೋನ್ ಧರ್ಮಗಳ ಅನುಯಾಯಿಗಳಿಗೆ ಕೈಲಾಸ್ ಪರ್ವತ ಮತ್ತು ಮಾನಸರೋವರ್ ಅತ್ಯಂತ ಪವಿತ್ರ ಸ್ಥಳಗಳು. ಭಗವಾನ್ ಶಿವನ ನಿವಾಸಸ್ಥಾನ ಎಂದು ನಂಬಲಾಗಿರುವ ಕೈಲಾಸ ಮತ್ತು ವಿಶ್ವದ ಅತ್ಯಂತ ಪವಿತ್ರ ಸರೋವರಗಳಲ್ಲಿ ಒಂದಾದ ಮಾನಸರೋವರದ ದರ್ಶನಕ್ಕಾಗಿ ಲಕ್ಷಾಂತರ ಭಕ್ತರು ಕಾತರದಿಂದ ಕಾಯುತ್ತಾರೆ. ಈ ಯಾತ್ರೆಯು ಆಧ್ಯಾತ್ಮಿಕತೆ, ಸಹನೆ ಮತ್ತು ಭಕ್ತಿಯ ಸಂಕೇತವಾಗಿದೆ. ಯಾತ್ರಾರ್ಥಿಗಳಿಗೆ ಸುರಕ್ಷಿತ, ಸಂತೋಷಕರ ಮತ್ತು ಆಧ್ಯಾತ್ಮಿಕವಾಗಿ ಸಮೃದ್ಧವಾದ ಪ್ರಯಾಣವಾಗಲಿ ಎಂದು ಭಾರತೀಯ ರಾಯಭಾರ ಕಚೇರಿ ಶುಭ ಕಾಮನೆ ವ್ಯಕ್ತಪಡಿಸಿದೆ.

# ಅಕ್ಟೋಬರ್‌ನಲ್ಲಿ ವಾರಾಣಸಿ ಬಳಿ ಏರ್‌ಶೋ

**20 ಲಕ್ಷ ಜನರಿಂದ ವೀಕ್ಷಣೆ ನಿರೀಕ್ಷೆ, ಅಕ್ಟೋಬರ್ ತಿಂಗಳಲ್ಲಿ ನಡೆಯುವ ಪ್ರದರ್ಶನಕ್ಕೆ ಭರದ ಸಿದ್ಧತೆ**



**ವಾರಾಣಸಿ, ಜೂ.20:** ಅಕ್ಟೋಬರ್ ಅಂತ್ಯದಲ್ಲಿ ಕಾಶಿಯಲ್ಲಿ ನಡೆಯಲಿರುವ ಭವ್ಯ ಏರ್‌ಶೋಗೆ ತಯಾರಿಗಳು ಭರದಿಂದ ಸಾಗುತ್ತಿವೆ. ಗಂಗಾ ನದಿ ತೀರದಲ್ಲಿ ನಮೋ ಘಾಟ್‌ನಿಂದ ಅಸ್ಸಿ ಘಾಟ್‌ವರೆಗೆ ದೀಪಾವಳಿಯಂತಹ ಸ್ಮರಣೀಯ ದೃಶ್ಯ ಸೃಷ್ಟಿಯಾಗುವ ನಿರೀಕ್ಷೆಯಿದೆ. ಸುಮಾರು 20 ಲಕ್ಷ ಜನರು ಈ ಐತಿಹಾಸಿಕ ಕಾರ್ಯಕ್ರಮದ ಸಾಕ್ಷಿಗಳಾಗುವ ಸಾಧ್ಯತೆ ಇದೆ ಎಂದು ಜಿಲ್ಲಾ ಆಡಳಿತ ಮತ್ತು ವಾಯುಸೇನೆ ತಿಳಿಸಿದೆ.

ವಾಯುಸೇನೆಯ ಪ್ರಸ್ತಾವಿತ ವೈಮಾನಿಕ ಪ್ರದರ್ಶನಕ್ಕೆ ಆಡಳಿತ ವಿಭಾಗ ತಯಾರಿ ಆರಂಭಿಸಿದೆ. ವಾರಾಣಸಿ, ಚಂದೌಲಿ, ಜೌನ್‌ಪುರ್, ಮಿರ್ಜಾಪುರ ಸೇರಿದಂತೆ ಹತ್ತಿರದ ಜಿಲ್ಲೆಗಳಿಂದ ದೊಡ್ಡ ಸಂಖ್ಯೆಯಲ್ಲಿ ಜನರು ಆಗಮಿಸುವ ಸಾಧ್ಯತೆಯಿದೆ. ಪ್ರಧಾನಿ, ರಕ್ಷಣಾ ಸಚಿವ, ಮೂರು ಸೇನಾ ಮುಖ್ಯಸ್ಥರು ಸೇರಿದಂತೆ ಹಲವು ಪ್ರಮುಖರು ಕಾರ್ಯಕ್ರಮದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ನಮೋ ಘಾಟ್‌ನಲ್ಲಿ ವಿಶೇಷ ವೇದಿಕೆ ನಿರ್ಮಿಸಿ ಸುಮಾರು 500 ವಿಶಿಷ್ಟ ಅತಿಥಿಗಳಿಗೆ ವ್ಯವಸ್ಥೆ ಮಾಡಲಾಗುತ್ತಿದೆ.

ನಮೋ ಘಾಟ್‌ನಲ್ಲಿ ಸುಮಾರು 2,500 ಮಂದಿಗೆ ಕುಳಿತುಕೊಳ್ಳುವ ವ್ಯವಸ್ಥೆ ಇರಲಿದೆ. ಅಸ್ಸಿ ಘಾಟ್‌ನಲ್ಲಿ ಸುಮಾರು 30,000 ಜನರು, ಪ್ರತಿ ಘಾಟ್‌ನಲ್ಲಿ 10–20 ಸಾವಿರ ಜನರು ಏರ್ ಶೋ ವೀಕ್ಷಿಸುವರು. ಗಂಗಾನದಿ ತಟದಲ್ಲಿ ಸಹ ಜನರಿಗೆ ಸ್ಥಳಾವಕಾಶ ಕಲ್ಪಿಸಲಾಗುತ್ತಿದೆ. ಘಾಟ್‌ಗಳ ಮುಂದಿರುವ ದೊಡ್ಡ ಕಟ್ಟಡಗಳು ಮತ್ತು ಹೋಟೆಲ್‌ಗಳ ಮೇಲ್ಛಾವಣಿಗಳನ್ನು ಬಳಸಿಕೊಳ್ಳಲಾಗುವುದು. ಒಟ್ಟಾರೆಯಾಗಿ ಆರು ಲಕ್ಷಕ್ಕೂ ಹೆಚ್ಚು ಜನರಿಗೆ ಕುಳಿತುಕೊಳ್ಳುವ ವ್ಯವಸ್ಥೆಯಾಗುವ ಸಾಧ್ಯತೆಯಿದೆ.

ಏರ್ ಶೋ ಸಮಯದಲ್ಲಿ ಭದ್ರತೆ ಮತ್ತು ಜನಸಮೂಹ ನಿರ್ವಹಣೆಯೇ ಪ್ರಮುಖ ಸವಾಲು. ಏರ್ ಶೋಗೆ ಒಂದು ಗಂಟೆ ಮುಂಚಿತವಾಗಿ ಮತ್ತು ನಂತರ ಗಂಗಾ ನದಿಯಲ್ಲಿ ನೋ–ಬೋಟ್ ಜೋನ್ ಜಾರಿಯಾಗುವುದು. ವಿಮಾನಗಳ ಪಾರ್ಕಿಂಗ್ ಮತ್ತು ಇಂಧನ ವ್ಯವಸ್ಥೆಗೆ ವಿಮಾನ ನಿಲ್ದಾಣ ಆಡಳಿತ ಕ್ರಮ ಕೈಗೊಳ್ಳುತ್ತಿದೆ.

ಅಕ್ಟೋಬರ್ 20ರಿಂದ ಸೂರ್ಯ ಕಿರಣ್ ಏರೋಬ್ಯಾಟಿಕ್ ತಂಡದ ವಿಮಾನಗಳು ವಾರಾಣಸಿಗೆ ಆಗಮಿಸಲಿವೆ. ಐದು ದಿನಗಳ ಕಾಲ ಅಭ್ಯಾಸ ನಡೆಸಿ, ನಂತರ ಕಾಶಿಯ ಆಕಾಶ ಭಾರತೀಯ ವಾಯುಸೇನೆಯ ಅದ್ಭುತ ಕೌಶಲ್ಯಗಳಿಗೆ ಸಾಕ್ಷಿಯಾಗುವುದು ಎಂದು ವಿಮಾನ ನಿಲ್ದಾಣ ನಿರ್ದೇಶಕ ಪುನೀತ್ ಗುಪ್ತಾ ಹೇಳಿದ್ದಾರೆ. ಈ ಏರ್ ಶೋ ಕಾಶಿಯ ಐತಿಹಾಸಿಕ ಮತ್ತು ಆಧ್ಯಾತ್ಮಿಕ ಪ್ರಸಿದ್ಧಿಗೆ ಹೊಸ ಮೆರುಗು ನೀಡುವ ನಿರೀಕ್ಷೆಯಿದೆ.

## ಕಾಮನ್‌ವೆಲ್ತ್ ಗೇಮ್ಸ್‌ಗೆ ನೀರಜ್ ಚೋಪ್ರಾ ವಾಪಸ್

# ದೋಹಾದ ಡೈಮಂಡ್ ಲೀಗ್‌ನಲ್ಲಿ 85.69 ಮೀಟರ್ ದೂರ ಭರ್ಜರಿ ಎಸೆತ



**ಕತಾರ್, ಜೂ.20:** ಭಾರತದ ಒಲಿಂಪಿಕ್ ಪದಕ ವಿಜೇತ ಜಾವೆಲಿನ್ ಎಸೆತಗಾರ ನೀರಜ್ ಚೋಪ್ರಾ ಕತಾರ್‌ನ ದೋಹಾದಲ್ಲಿ ನಡೆದ ಡೈಮಂಡ್ ಲೀಗ್ ಮೂಲಕ ಕಂಬ್ಯಾಕ್ ಮಾಡಿದ್ದಾರೆ. ಬೆನ್ನು ನೋವಿನ ಸಮಸ್ಯೆಯ ಕಾರಣ ಕಳೆದ ಕೆಲ ತಿಂಗಳುಗಳಿಂದ ಮೈದಾನಕ್ಕಿಳಿಯದ ನೀರಜ್ ಈ ಬಾರಿ 85.69 ಮೀಟರ್ ದೂರ ಭರ್ಜರಿ ಎಸೆಯುವ ಮೂಲಕ ಗಮನ ಸೆಳೆದಿದ್ದಾರೆ.

ಬೆನ್ನು ನೋವಿನ ಸಮಸ್ಯೆಯ ಕಾರಣ ಸುಮಾರು 9 ತಿಂಗಳುಗಳ ಕಾಲ ಸ್ಪರ್ಧಾತ್ಮಕ ಕ್ರೀಡೆಯಿಂದ ದೂರವಿದ್ದ ನೀರಜ್ ಚೋಪ್ರಾ ದೋಹಾ ಡೈಮಂಡ್ ಲೀಗ್ನಲ್ಲಿ ಉತ್ತಮ ಆರಂಭ ಪಡೆದಿರಲಿಲ್ಲ. ಇದಾಗ್ಯೂ ಅವರು 85.69 ಮೀಟರ್ ದೂರ ಎಸೆಯುವಲ್ಲಿ ಯಶಸ್ವಿಯಾಗಿದ್ದಾರೆ.

85.69 ಮೀಟರ್ ದೂರದೊಂದಿಗೆ ಈ ಲೀಗ್‌ನಲ್ಲಿ ನೀರಜ್ ಚೋಪ್ರಾ ನಾಲ್ಕನೇ ಸ್ಥಾನಕ್ಕೆ ತೃಪ್ತಿಪಟ್ಟುಕೊಂಡಿದ್ದಾರೆ. ಆದರೆ ಈ ಭರ್ಜರಿ ಪ್ರದರ್ಶನದ ಫಲವಾಗಿ ಅವರು 2026ರ ಕಾಮನ್ವೆಲ್ತ್ ಕ್ರೀಡಾಕೂಟಕ್ಕೆ ಅಧಿಕೃತವಾಗಿ ಅರ್ಹತೆ ಗಿಟ್ಟಿಸಿಕೊಂಡಿದ್ದಾರೆ.

ಅಥ್ಲೆಟಿಕ್ಸ್ ಫೆಡರೇಶನ್ ಆಫ್ ಇಂಡಿಯಾ ಮುಂಬರುವ ಗ್ಲ್ಯಾಸ್ಗೋ ಕಾಮನ್ವೆಲ್ತ್ ಗೇಮ್ಸ್‌ನಲ್ಲಿ ಭಾಗವಹಿಸಲು 82.61 ಮೀಟರ್ ಅರ್ಹತಾ ಮಾನದಂಡವನ್ನು ನಿಗದಿಪಡಿಸಿತ್ತು. ಈ ಗುರಿಯನ್ನೇ ಟಾರ್ಗೆಟ್ ಮಾಡಿಕೊಂಡಿದ್ದ ನೀರಜ್ 2ನೇ ಎಸೆತದಲ್ಲೇ ಯಶಸ್ಸು ಸಾಧಿಸಿದ್ದರು.

ನೀರಜ್ ಚೋಪ್ರಾ ಎಸೆದ 2ನೇ ಎಸೆವು ಬರೋಬ್ಬರಿ 82.77 ಮೀಟರ್ ದೂರಕ್ಕೆ ಸಾಗಿತ್ತು. ಇನ್ನು ಮೂರನೇ ಯತ್ನದಲ್ಲಿ 85.69 ಮೀಟರ್ ದೂರ ಎಸೆಯುವ ಮೂಲಕ ಕಾಮನ್ವೆಲ್ತ್ ಕ್ರೀಡಾಕೂಟಕ್ಕೆ ಎಂಟ್ರಿಯನ್ನು ಖಚಿತಪಡಿಸಿಕೊಂಡರು.

ನೀರಜ್ ಚೋಪ್ರಾ ಲೈನ್ ದಾಟಿದ್ದರಿಂದ ಮೊದಲ ಎಸೆತ ತಪ್ಪಾಗಿತ್ತು. ದ್ವಿತೀಯ ಪ್ರಯತ್ನದಲ್ಲಿ ನೀರಜ್ 82.77 ಮೀಟರ್ ದೂರಕ್ಕೆ ಭರ್ಜರಿ ತಲುಪಿಸಿದ್ದರು. ಮೂರನೇ ಎಸೆತವನ್ನು 85.69 ಮೀಟರ್ ದೂರಕ್ಕೆ ಎಸೆಯುವ ಮೂಲಕ ತನ್ನ ಪುನರಾಗಮನವನ್ನು ಖಚಿತಪಡಿಸಿದರು. ಈ ಬಾರಿ ಉತ್ತಮ ಲಯ ಕಾಯ್ದುಕೊಂಡರೂ ಮೂರನೇ ಎಸೆತದ ದೂರವನ್ನು ಕ್ರಮಿಸಲು ಸಾಧ್ಯವಾಗಿರಲಿಲ್ಲ. ಈ ಮೂಲಕ 83.45 ಮೀಟರ್ ದೂರದೊಂದಿಗೆ ತೃಪ್ತಿಪಟ್ಟಕೊಂಡರು. ಮೊದಲ ಎಸೆತದಂತೆ ಐದನೇ ಎಸೆತದಲ್ಲೂ ಲೈನ್ ದಾಟುವ ಮೂಲಕ ತಪ್ಪು ಮಾಡಿದರು. ಆರನೇ ಎಸೆತ ಅರ್ಹತೆ ಪಡೆಯಲಿಲ್ಲ.

ಡೈಮಂಡ್ ಲೀಗ್ ನಿಯಮದ ಪ್ರಕಾರ, ಮೊದಲ 5 ಸುತ್ತುಗಳ ಮುಕ್ತಾಯದ ನಂತರ ಅಂಕ ಪಟ್ಟಿಯಲ್ಲಿ ಮೊದಲ 3 ಸ್ಥಾನಗಳಲ್ಲಿರುವ ಕ್ರೀಡಾಪಟುಗಳು ಮಾತ್ರ 6ನೇ ಸುತ್ತಿನಲ್ಲಿ ಮುಖಾಮುಖಿಯಾಗುತ್ತಾರೆ. ಅಂದರೆ ಮೊದಲ ಐದು ಸುತ್ತುಗಳಲ್ಲಿ ಟಾಪ್–3 ನಲ್ಲಿ ಕಾಣಿಸಿಕೊಂಡರೆ ಮಾತ್ರ 6ನೇ ಎಸೆತ ಎಸೆಯಲು ಅವಕಾಶ ನೀಡಲಾಗುತ್ತದೆ. ಆದರೆ ನೀರಜ್ ಚೋಪ್ರಾ ತಮ್ಮ 5 ಸುತ್ತುಗಳ ಮುಕ್ತಾಯದ ವೇಳೆಗೆ 4ನೇ ಸ್ಥಾನ ಪಡೆದಿದ್ದರು. ಹೀಗಾಗಿ ಆರನೇ ಎಸೆತ ಎಸೆಯಲು ಅವಕಾಶ ನೀಡಲಾಗಿಲ್ಲ.